ಸಂಪುಟ: 06 ಸಂಚಿಕೆ: 37 ಪುಟಗಳು: 08 ಮಂಗಳವಾರ 21 ಏಪ್ರಿಲ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಅವರು ಮೊದಲು ನಿಮ್ಮನ್ನು ನಿರ್ಲಕ್ಷಿಸುತ್ತಾರೆ, ನಂತರ ನಿಮ್ಮನ್ನು ನೋಡಿ ನಗುತ್ತಾರೆ, ಬಳಿಕ ನಿಮ್ಮೊಂದಿಗೆ ಸಂಘರ್ಷಕ್ಕಿಳಿಯುತ್ತಾರೆ, ಆಗ ನೀವು ಗೆದ್ದಂತೆ.

## ಬಿಟ್‌ಕಾಯಿನ್ ಪ್ರಕರಣ: ಹ್ಯಾರಿಸ್ ಮನೆ ಸೇರಿ 17 ಕಡೆ ಇ.ಡಿ ದಾಳಿ

• **ಉದಯವಾಹಿನಿ, ಬೆಂಗಳೂರು**

ಬಿಟ್‌ಕಾಯಿನ್ ಅಕ್ರಮ ವಹಿವಾಟು ಪ್ರಕರಣದ ಪ್ರಮುಖ ಆರೋಪಿ ಶ್ರೀಕೃಷ್ಣ ರಮೇಶ್ ಉರುಫ್ ಶ್ರೀಕಿ ಜತೆ ಹಣಕಾಸು ವಹಿವಾಟು ನಡೆಸಿರುವ ಕಾರಣಕ್ಕೆ ಕಾಂಗ್ರೆಸ್‌ನ ಯುವ ಮುಖಂಡ ಮಹಮದ್ ನಲಪಾಡ್ ಹ್ಯಾರಿಸ್ ಮನೆಯಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಶೋಧ ನಡೆಸಿದ್ದಾರೆ. ಇ.ಡಿ ಬೆಂಗಳೂರು ವಲಯದ 100ಕ್ಕೂ ಹೆಚ್ಚು ಸಿಬ್ಬಂದಿ ಶಾಸಕ ಮತ್ತು ನಲಪಾಡ್ ಅವರ ತಂದೆ ಎನ್.ಎ.ಹ್ಯಾರಿಸ್ ಅವರ ಶಾಂತಿನಗರದ ನಿವಾಸವೂ ಸೇರಿ ಒಟ್ಟು 17 ಕಡೆ ದಾಳಿ ನಡೆಸಿದ್ದಾರೆ. ಬಿಟ್‌ಕಾಯಿನ್ ಪ್ರಕರಣ ಪತ್ತೆಯಾಗುವುದಕ್ಕೂ ಮೊದಲ ಆರು ವರ್ಷಗಳ ಅವಧಿಯಲ್ಲಿ ನಲಪಾಡ್ ಮತ್ತು ಶ್ರೀಕಿ ಮಧ್ಯೆ ನಿರಂತರ ಹಣಕಾಸು ವ್ಯವಹಾರ ನಡೆದಿದೆ. ಈ ಅವಧಿಯಲ್ಲಿ ಒಟ್ಟು ರೂ. 4.65 ಕೋಟಿ ಹಣ ಕೈಬದಲಾಗಿದೆ. ಬಿಟ್‌ಕಾಯಿನ್ ವಹಿವಾಟಿಗೂ ಇದಕ್ಕೂ ಸಂಬಂಧವಿದೆಯೇ ಅಥವಾ ಇದು ಬೇರೆ ಅಕ್ರಮ ವಹಿವಾಟೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿವೆ.

## ಬಿಜೆಪಿ ಜತೆ ಮೈತ್ರಿ ಅಷ್ಟೇ ಪಕ್ಷದ ಸಿದ್ಧಾಂತದಲ್ಲಿ ರಾಜಿ ಇಲ್ಲ

• **ಉದಯವಾಹಿನಿ, ಬೆಂಗಳೂರು**

'ಬಿಜೆಪಿ ಜತೆ ಮೈತ್ರಿಯಷ್ಟೇ, ಸಿದ್ಧಾಂತದಲ್ಲಿ ಯಾವುದೇ ರಾಜಿ ಇಲ್ಲ. ಜೆಡಿಎಸ್ ಜಾತ್ಯತೀತ ಪಕ್ಷವಾಗಿ ಉಳಿಯಲಿದೆ' ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು. 'ಜಾತ್ಯತೀತ ಜನತಾದಳ ಎಂಬುದು ಪಕ್ಷದ ಹೆಸರಿನಲ್ಲೇ ಇದೆ. ನಮ್ಮ ಸಿದ್ಧಾಂತ ಮತ್ತು ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ. ಸರ್ವ ಜನಾಂಗದ ಶಾಂತಿಯ ತೋಟದ ಬಗ್ಗೆ ಎಚ್.ಡಿ. ಕುಮಾರಸ್ವಾಮಿ ಅವರಿಗೆ ನಂಬಿಕೆ ಇದೆ. ಅದರಲ್ಲಿ ಬದಲಾವಣೆ ಇಲ್ಲವೇ ಇಲ್ಲ' ಎಂದು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದರು. ಯಾವತ್ತಿಗೂ ಜಾತ್ಯತೀತ ಪಕ್ಷವಾಗಿಯೇ ಉಳಿದಿದ್ದೇವೆ. ಧರ್ಮ, ಜಾತಿ, ಸಮುದಾಯಗಳ ಆಧಾರದಲ್ಲಿ ಈವರೆಗೆ ಜೆಡಿಎಸ್ ರಾಜಕಾರಣ ಮಾಡಿಲ್ಲ. ಎಲ್ಲರನ್ನೂ ಸಮಾನವಾಗಿ ಕಂಡಿದೆ. ಮುಂದೆಯೂ ಅದೇ ರೀತಿ ಇರಲಿದೆ. ಒಂದು ಪಕ್ಷದೊಂದಿಗೆ ಕೈಜೋಡಿಸಿದ್ದೇವೆ. 'ವಿಲೀನವಾಗಿಲ್ಲ,ನಮ್ಮದು ಸ್ವತಂತ್ರ ರಾಜಕೀಯ ಪಕ್ಷ' ಎಂದರು.

## ಗುಣಮಟ್ಟದ ವಿದ್ಯುತ್ ಪೂರೈಕೆ ಇಂಧನ ಸಚಿವ ಕೆ.ಜೆ. ಜಾರ್ಜ್

• **ಉದಯವಾಹಿನಿ, ಬೆಂಗಳೂರು**


'ಇಂಧನ ಕ್ಷೇತ್ರದಲ್ಲಿ ನಾವೀನ್ಯತೆ ಬೆಂಬಲಿಸಿ ಸುಸ್ಥಿರ ಭವಿಷ್ಯಕ್ಕಾಗಿ ಬೇರೆ ಬೇರೆ ಸಂಸ್ಥೆಗಳ ಸಹಯೋಗದೊಂದಿಗೆ ಕೆಲಸ ಮಾಡಲಾಗುವುದು. ಈ ಮೂಲಕ ಕೈಗೆಟುಕುವ ದರದಲ್ಲಿ ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಸಲಾಗುವುದು' ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು. 'ಸಾಂಪ್ರದಾಯಿಕ ಮೂಲಗಳಿಂದ ನವೀಕರಿಸಬಹುದಾದ ಮೂಲಗಳಿಗೆ ಇಂಧನ ಪರಿವರ್ತನೆ ಮಹತ್ವಾಕಾಂಕ್ಷೆಯಾಗಿ ಉಳಿಯದೇ ಅನುಷ್ಠಾನಕ್ಕೆ ಕ್ರಮ ವಹಿಸಬೇಕಿದೆ. ನವೀಕರಿಸಬಹುದಾದ ಇಂಧನ ವಿಸ್ತರಣೆ, ಸಂಗ್ರಹಣೆಗೆ ಸೂಕ್ತ ವ್ಯವಸ್ಥೆ. ಮೂಲಸೌಕರ್ಯ ಬಲವರ್ಧನೆ ಮೂಲಕ ಕರ್ನಾಟಕ ಮುಂದಾಳತ್ವ ಮುಂದುವರಿಸಲಿದೆ' ಎಂದು ಹೇಳಿದರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, 'ಈ ಸಮ್ಮೇಳನದ ನಿರ್ಣಯಗಳು ನವೀಕರಿಸಬಹುದಾದ ಇಂಧನ ವಲಯದಲ್ಲಿ ಬದಲಾವಣೆಗೆ ಕಾರಣವಾಗಲಿವೆ' ಎಂದರು.

ಜಾತಿ ವ್ಯವಸ್ಥೆ ಇರುವವರೆಗೂ ಬಸವಣ್ಣನವರ ತತ್ವಗಳು ಪ್ರಸ್ತುತವಾಗಿರುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಜಿಲ್ಲಾ ಬಸವ ದಳಗಳ ಒಕ್ಕೂಟ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಸಿಎಂ ಉದ್ಘಾಟಿಸಿ, "2026ರ ಬಸವಶ್ರೀ" ಪ್ರಶಸ್ತಿ ಪ್ರದಾನ ಮಾಡಿದರು.ಬಸವಣ್ಣನವರ ಆದರ್ಶಗಳನ್ನು ಪಾಲಿಸಿದ ಡಾ.ಸಿದ್ಧರಾಮ ಶರಣರು 2025-26ನೇ ಸಾಲಿನ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿ ಭಾಜನ ಆಗಿರುವುದಕ್ಕೆ ಅಭಿನಂದನೆಗಳನ್ನು ಸಲ್ಲಿಸಿದರು.

**ಜಾತಿ ವ್ಯವಸ್ಥೆ ಇರುವವರೆಗೂ ಬಸವ ತತ್ವಗಳು ಪ್ರಸ್ತುತ**

**ಪ್ರಧಾನಿ ಮೋದಿ ಜೊತೆ ಪಿಸುಮಾತಿನ ಗುಟ್ಟು ರಟ್ಟು**

# ಬಸವ ಪಥ ಸಿದ್ದರಾಮಯ್ಯ ಶಪಥ





**"2026ರ ಬಸವಶ್ರೀ" ಪ್ರಶಸ್ತಿ ಪ್ರದಾನ**

> ವೈರುಧ್ಯತೆಯ ಸಮಾಜದಲ್ಲಿ ಬದಲಾವಣೆ ತರಲು ಬುದ್ಧಬಸವಾದಿ ಶರಣರು ಶ್ರಮಿಸಿದ್ದರು. ಆದರೂ ಇಂದಿಗೂ ಜಾತಿವ್ಯವಸ್ಥೆ ಪ್ರಚಲಿತವಾಗಿದೆ. ಭಾರತದ ಜಾತಿವ್ಯವಸ್ಥೆಗೆ ಚಲನೆಯಿಲ್ಲ. ಆರ್ಥಿಕ ಸಾಮಾಜಿಕ ಶೈಕ್ಷಣಿಕ ಶಕ್ತಿ ದೊರಕಿದಾಗ ಮಾತ್ರ ಚಲನೆಯಿಲ್ಲದ ಜಾತಿವ್ಯವಸ್ಥೆಯಲ್ಲಿ ಬದಲಾವಣೆ ತರಲು ಸಾಧ್ಯ. 'ಇವನಾರವ ಇವನಾರವ' ಎನ್ನುವ ಬದಲು 'ಇವ ನಮ್ಮವ' ಎನ್ನುವ ವ್ಯವಸ್ಥೆ ಬರುವವರೆಗೂ ಬಸವ ವಿಚಾರಗಳು ಪ್ರಸ್ತುತವಾಗಿರುತ್ತವೆ
>
> -ಸಿದ್ದರಾಮಯ್ಯ, ಮುಖ್ಯಮಂತ್ರಿ

ಬಸವಣ್ಣನವರ ವಿಚಾರಗಳನ್ನು ನಮ್ಮ ಸರ್ಕಾರ ಅನುಸರಿಸುತ್ತಿದೆ. ನಮ್ಮ ಸರ್ಕಾರ ಬುದ್ಧ, ಬಸವ, ಅಂಬೇಡ್ಕರ್ ಕಂಡ ಕನಸಿನ ಸಮಾಜ ನಿರ್ಮಾಣ ಮಾಡುವ ಉದ್ದೇಶವನ್ನು ಹೊಂದಿದೆ. ಗ್ಯಾರಂಟಿ ಯೋಜನೆಗಳು ಎಲ್ಲಾ ಧರ್ಮದವರಿಗೆ ತಲುಪುತ್ತಿದೆ. ಚಲನರಹಿತ ಜಾತಿ ವ್ಯವಸ್ಥೆಯಲ್ಲಿ ಆರ್ಥಿಕ, ಸಾಮಾಜಿಕ ಶಕ್ತಿ ದೊರೆತರೆ ಮಾತ್ರ ಚಾಲನೆ ದೊರೆಯುತ್ತದೆ ಎಂದು ತಿಳಿಸಿದರು. ಮನುಷ್ಯರಾಗುವ ಪ್ರಯತ್ನ ಮಾಡಬೇಕು. ಎಲ್ಲಾ ಧರ್ಮಗಳೂ ಮತ್ತೊಬ್ಬರನ್ನು ದ್ವೇಷಿಸಿ ಎಂದು ಹೇಳುವುದಿಲ್ಲ. ಎಲ್ಲರೂ ಪರಸ್ಪರ ಪ್ರೀತಿಸಬೇಕು ಹಾಗೂ ಮನುಷ್ಯರಾಗುವ ಪ್ರಯತ್ನ ಮಾಡಬೇಕು, ಬಸವಣ್ಣವನರೂ ಇದನ್ನೇ ಪ್ರತಿಪಾದಿಸಿದ್ದರು. ಸರಳವಾಗಿ ಕನ್ನಡದಲ್ಲಿಯೇ ವಚನಗಳನ್ನು ರಚಿಸಿ ಜನಸಾಮಾನ್ಯರಿಗೆ ತಲುಪುವಂತೆ ಮಾಡಿದ್ದಾರೆ ಎಂದರು.

**ಮನುಷ್ಯರಾಗುವ ಪ್ರಯತ್ನ ಮಾಡಬೇಕು**

**1** ಕ್ಷೇತ್ರ ಪುನರ್ ವಿಂಗಡಣೆ ವಿಚಾರವಾಗಿ ಮಾತ್ರ ನಮ್ಮ ತಕರಾರು ಇದೆ.

**2** ಮಹಿಳಾ ಮೀಸಲಾತಿ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ.

**3** ಮಹಿಳಾ ಮೀಸಲಾತಿ ಬಗ್ಗೆ ಮಾತನಾಡಿದರು. ನಿಮ್ಮ ನಿಲುವು ಏನು ಎಂದು ಕೇಳಿದ್ದರು

• **ಉದಯವಾಹಿನಿ, ಬೆಂಗಳೂರು**

ಬಸವಣ್ಣನವರು ಸಮಾಜದಲ್ಲಿ ಜಾತಿ ವರ್ಣ ವ್ಯವಸ್ಥೆಗಳ ವಿರುದ್ಧ ಹೋರಾಡಿದರು. ಮೂಢನಂಬಿಕೆಗಳ ವಿರುದ್ಧ ಧ್ವನಿ ಎತ್ತಿ, ಕರ್ಮ ಸಿದ್ಧಾಂತವನ್ನು ಅಲ್ಲಗಳೆದಿದ್ದರು. ಸಾವಿರಾರು ವರ್ಷಗಳಿಂದ ಶೋಷಿತ ವರ್ಗಗಳು ಅಕ್ಷರ ಸಂಸ್ಕೃತಿಯಿಂದ ವಂಚಿತವಾಗಿದ್ದರು. ಬಸವಾದಿಶರಣರು ವೈದಿಕ ಧರ್ಮಕ್ಕೆ ಪರ್ಯಾಯವಾಗಿ ಲಿಂಗಾಯತ ಧರ್ಮಕ್ಕೆ ನಾಂದಿ ಹಾಡಿದರು. ವೈದಿಕ ಧರ್ಮದಲ್ಲಿ ಚತುರ್ವರ್ಣ ವ್ಯವಸ್ಥೆಯಿತ್ತು. ಆದ್ದರಿಂದ 12ನೇ ಶತಮಾನದಲ್ಲಿ ಸಮಾನತೆ, ಮಾನವೀಯತೆಯಿಂದ ಕೂಡಿದ ಲಿಂಗಾಯತ ಧರ್ಮವನ್ನು ಸ್ಥಾಪಿಸಲಾಯಿತು ಎಂದರು.

**ಸಮಾನ ಹಂಚಿಕೆ:** ಬಸವಣ್ಣನವರು ಕಾಯಕ ಮತ್ತು ದಾಸೋಹ ತತ್ವವನ್ನು ವಿಶ್ವಕ್ಕೆ ಪರಿಚಯಿಸಿ, ಎಲ್ಲಾ ವೃತ್ತಿಗಳೂ ಘನತೆಯುಳ್ಳದ್ದು ಎಂದಿದ್ದರು. ಉತ್ಪಾದನೆಯಾದ ಸಂಪತ್ತನ್ನು ಸಮಾನವಾಗಿ ಹಂಚಿಕೊಳ್ಳುವುದೇ ಕಾಯಕ ಮತ್ತು ದಾಸೋಹದ ಮೂಲಮಂತ್ರ. ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಜಾರಿಗೆ ಬರುವ ಮುಂಚೆ ಮನುಶಾಸ್ತ್ರ ಜಾರಿಯಲ್ಲಿತ್ತು. ಆದ್ದರಿಂದ ಅವರು 'ಹಿಂದು ಧರ್ಮವನ್ನು ಸುಧಾರಿಸಲು ಸಾಧ್ಯವಾಗಲಿಲ್ಲ' ವೆಂದು ಮನುಶಾಸ್ತ್ರವನ್ನು ಸುಡುತ್ತೇನೆ ಎಂದಿದ್ದರು. ಅಸಮಾನತೆಯ ಸಮಾಜದಲ್ಲಿ ಬದಲಾವಣೆ ತರಲು ಪ್ರತಿಯೊಬ್ಬರಿಗೂ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಸ್ವಾತಂತ್ರ್ಯ ಅಗತ್ಯವೆಂದು ತಿಳಿಸಿದ್ದರು. ಸಮಾಜದ ಅಶಕ್ತರ ಮೇಲೆ ನಡೆದ ಅನ್ಯಾಯಗಳ ಇತಿಹಾಸದ ಬಗ್ಗೆ ಅರಿವಿಲ್ಲದವರು ಇತಿಹಾಸವನ್ನು ನಿರ್ಮಿಸಲು ಸಾಧ್ಯವಿಲ್ಲವೆಂದರು.

ಸಮಾಜದಲ್ಲಿ ಅಸಮಾನತೆಯನ್ನು ನಿರಂತರಗೊಳಿಸಲು ಪಟ್ಟಭದ್ರ ಹಿತಾಸಕ್ತಿಗಳು ಪ್ರಯತ್ನಿಸುತ್ತಿವೆ ಜಾತಿವ್ಯವಸ್ಥೆ ನಿರ್ಮೂಲನೆಗೆ ವೈಜ್ಞಾನಿಕ ಶಿಕ್ಷಣ ಅಗತ್ಯ. ಮೂಢನಂಬಿಕೆಗಳಿಗೆ ಬಲಿ ಆಗಬಾರದು. ಮನುವಾದಿಗಳು ಮೂಢನಂಬಿಕೆ ಬೆಳೆಸುತ್ತಾರೆ ಎಂದರು.

**ಬಸವ ಭವನಕ್ಕೆ 5 ಕೋಟಿ ರೂ.ಗಳ ಅನುದಾನ:** ಬಸವ ಭವನಕ್ಕೆ ಐದು ಕೋಟಿ ರೂ.ಗಳ ಅನುದಾನ ನೀಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದರು. ಸಮಾಜದಲ್ಲಿ ಪ್ರತಿಯೊಬ್ಬರಿಗೂ ಆರ್ಥಿಕ ಮತ್ತು ಸಾಮಾಜಿಕ ಶಕ್ತಿ ದೊರೆಯಬೇಕು ಎಂಬ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಯಿತು. ಇದನ್ನೇ ಬಸವ, ಬುದ್ಧ, ಅಂಬೇಡ್ಕರ್ ಹೇಳಿದ್ದು. ಬಸವಣ್ಣಪಥದಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡುವ ಬಗ್ಗೆ ಶಪಥ ಮಾಡಬೇಕು. ನಮ್ಮ ಸರ್ಕಾರ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಫೋಟೋಗಳನ್ನು ಕಡ್ಡಾಯ ಮಾಡಿದ್ದಲ್ಲದೆ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದೇವೆ. ಬಸವಣ್ಣನವರ ಕರ್ಮ ಭೂಮಿ ಅನುಭವ ಮಂಟಪದ ಪುನಃ ಸ್ಥಾಪನೆಗೆ ಗೋ.ರು.ಚನ್ನಬಸಪ್ಪನವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ಅದರ ವರದಿಯನ್ವಯ ಅನುದಾನ ನೀಡಲಾಗಿದೆ ಎಂದರು.

### ಸಿಎಂ ಹೇಳಿದ್ದೇನು?

ಇಡಿ ದಾಳಿ ಕುರಿತಂತೆ ಸಿಎಂ ಸಿದ್ದರಾಮಯ್ಯ, ಈ ವಿಚಾರ ನನಗೆ ಗೊತ್ತಿಲ್ಲ. ಪಂಚರಾಜ್ಯ ಚುನಾವಣೆ ವಿಚಾರ. ನಾನು ತಮಿಳುನಾಡಿಗೆ ಪ್ರಚಾರಕ್ಕೆ ಹೋಗುವುದಿಲ್ಲ. ತಮಿಳುನಾಡಿನಲ್ಲಿ ಡಿಎಂಕೆ ಗೆಲ್ಲಬಹುದು. ಬಿಜೆಪಿಯವರು ಪಂಚರಾಜ್ಯ ಚುನಾವಣೆಯಲ್ಲಿ ನಮ್ಮ ಗ್ಯಾರಂಟಿಗಳನ್ನು ನಕಲು ಮಾಡಿಕೊಂಡಿದ್ದಾರೆ. ನಮ್ಮ ಗ್ಯಾರಂಟಿಗಳನ್ನು ಮೊದಲು ಬಿಜೆಪಿ ವಿರೋಧ ಮಾಡುತ್ತಿತ್ತು. ಈಗ ಇದನ್ನು ಅವರೇ ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ಸಿಎಂ ಟೀಕಿಸಿದ್ದಾರೆ.

### ಪ್ರಧಾನಿ ಜೊತೆಗೆ ಗುಟ್ಟಿನ ಮಾತುಕತೆ

ಪ್ರಧಾನಿ ಮೋದಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆಗೆ ಕಿವಿಯಲ್ಲಿ ಗುಟ್ಟಾಗಿ ಮಾತನಾಡಿದ್ದರು. ಈ ಗುಟ್ಟನ್ನು ಸಿಎಂ ಬಹಿರಂಗಪಡಿಸಿದ್ದಾರೆ. ಹೌದು. ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಮ್ಮ ನಡುವೆ ಯಾವುದೇ ಗುಪ್ತ ಆಲೋಚನೆ ನಡೆದಿಲ್ಲ. ಮಹಿಳಾ ಮೀಸಲಾತಿ ಕುರಿತ ನನ್ನ ಅಭಿಪ್ರಾಯವನ್ನು ಪ್ರಧಾನಿ ಕೇಳಿದರು, ಮಹಿಳಾ ಮೀಸಲಾತಿ ಪರವಾಗಿ ಇದ್ದೇನೆ ಎಂದು ಸಕಾರಾತ್ಮಕವಾಗಿ ಉತ್ತರಿಸಿದ್ದೇನೆ ಅಷ್ಟೆ, ಎಂದು ಸ್ಪಷ್ಟಪಡಿಸಿದರು. ಮಹಿಳಾ ಮೀಸಲಾತಿ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಪ್ರಧಾನಿಯವರಿಗೆ ಸಾಮಾಜಿಕ ನ್ಯಾಯದ ಮೇಲೆ ನಂಬಿಕೆಯಿದ್ದರೆ 2023ರಲ್ಲೇ ಮೀಸಲಾತಿಯನ್ನು ಜಾರಿಗೆ ತರಬೇಕಿತ್ತು.




**ಈ ದಿನದ ದರ** ಪೆಟ್ರೋಲ್: 103.33 ₹/L ಡೀಸೆಲ್ : 91.47 ₹/L ಬಂಗಾರ: ₹15,529/Gram24ct ₹14,235/Gram22ct ಬೆಳ್ಳಿ: ₹275.00/Gram

# ಆಟೋ ಚಾಲಕರಿಗೆ ದಿನಸಿ ಕಿಟ್ ವಿತರಣೆ ಜಿಬಿಎ ಕೇಂದ್ರ ಕಛೇರಿ

• ಉದಯವಾಹಿನಿ, ಬೆಂಗಳೂರು

ಡಾ.ರಾಜ್ ಕುಮಾರ್ ಗಾಜಿನಮನೆಯಲ್ಲಿ 23ರ ಸಂಜೆ 4ಗಂಟೆಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ -ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಮತ್ತು ಶಿರಡಿ ಸಾಯಿಬಾಬಾ






ದ್ವಾರಕಾಮಯಿ ಅಭಿವೃದ್ಧಿ ಮಂಡಳಿ ವತಿಯಿಂದ ಇರಾನ್- ಇಸ್ರೇಲ್ ಯುದ್ಧದಿಂದ ಆಟೋ ಗ್ಯಾಸ್ ಸಿಗದೇ ಸಂಕಷ್ಟದಲ್ಲಿರುವ ಆಟೋ ಚಾಲಕರಿಗೆ ಆಹಾರ ಪದಾರ್ಥದ,ದಿನಸಿ ಕಿಟ್ ಸಾಮಗ್ರಿಗಳನ್ನು ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದಿನಸಿ ಕಿಟ್ ನಲ್ಲಿ ಅಕ್ಕಿ, ಗೋಧಿ ಹಿಟ್ಟು, ಸಕ್ಕರೆ ತೊಗರಿಬೇಳೆ, ರವೆ, ಸನ್ ಫ್ಲವರ್ ಆಯಿಲ್‌ಗಳನ್ನು ನೀಡಲಾಗುತ್ತದೆ.

ಕಾರ್ಯಕ್ರಮದಲ್ಲಿ ಜಿಬಿಎ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ಸಾಯಿಶಂಕರ್ ರವರ ನೇತೃತ್ವ ವಹಿಸಲಿದ್ದಾರೆ. ಇರಾನ್-ಇಸ್ರೇಲ್ ಯುದ್ದದಿಂದ ಭಾರತ ದೇಶಕ್ಕೆ ಬರಬೇಕಾಗಿದ್ದ ಗ್ಯಾಸ್ ಬರದಿರುವುದರಿಂದ ಚಾಲಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅಂದೇ ದುಡಿದು ಅಂದೇ ಜೀವನ ಸಾಗಿಸುವ ಆಟೋ ಚಾಲಕರು ದುಡಿಮೆ ಇಲ್ಲದಂತೆ ಆಗಿದೆ.ಕನ್ನಡ ನಾಡು-ನುಡಿ ಉಳಿಸಲು ಅಪಾರ ಶ್ರಮಿಸುವ ಆಟೋ ಚಾಲಕರು ಅವರ ಸಂಕಷ್ಟಗಳಿಗೆ ನೆರವು ನೀಡಲು ದಿನಸಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ.

# ರಾಯರಿಗೆ ಗಂಧ ಲೇಪನ ಅಲಂಕಾರ ಮತ್ತು ಸುದರ್ಶನ ಹೋಮ

• ಉದಯವಾಹಿನಿ, ಬೆಂಗಳೂರು

ಶೇಷಾದ್ರಿಪುರದ ಪ್ಲಾಟ್ ಫಾರಂ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಅಕ್ಷಯ ತೃತೀಯ ಪ್ರಯುಕ್ತ ಶ್ರೀ ರಾಘವೇಂದ್ರ ಸ್ವಾಮಿಗಳ ಮತ್ತು ಶ್ರೀ ಸುಶಮೀಂದ್ರ ತೀರ್ಥ ಶ್ರೀಪಾದಂಗಳವರ ಬೃಂದಾವನಗಳಿಗೆ ಫಲ ಪಂಚಾಮೃತ ಅಭಿಷೇಕ, ಗಂಧ ಲೇಪನ ಅಲಂಕಾರ, ಸುದರ್ಶನ ಹೋಮ, ಪೂರ್ಣಾಹುತಿ, ಮಹಾಮಂಗಳಾರತಿ ಕಾರ್ಯಕ್ರಮಗಳು ಜರುಗಿದವು ಎಂದು ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಸುಬ್ಬುನರಸಿಂಹ ಅವರು ತಿಳಿಸಿದರು.



☛ ಉದಯವಾಹಿನಿ ಚಿತ್ರ

# ಬೆಂಗಳೂರು; ಭೂ ವ್ಯಾಜ್ಯ ವೃದ್ಧನ ಮೇಲೆ ಹಲ್ಲೆಯತ್ನ

• ಉದಯವಾಹಿನಿ, ಬೆಂಗಳೂರು

ಭೂ ವ್ಯಾಜ್ಯ ಸಂಬಂಧ ಅಪರಿಚಿತರು 70 ವರ್ಷದ ವೃದ್ದರೊಬ್ಬರ ಮೇಲೆ ಹಲ್ಲೆಗೆ ಯತ್ನಿಸಿ ಜೀವ ಬೆದರಿಕೆ ಹಾಕಿರುವ ಘಟನೆ ಯಲಹಂಕ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಈ ಕುರಿತು ಆಡುಗೋಡಿ ನಿವಾಸಿ ಅಬ್ದುಲ್ ಸತ್ತಾರ್ ನೀಡಿದ ದೂರಿನ ಮೇಲೆ ಯಲಹಂಕ ಠಾಣೆಯಲ್ಲಿ ಗಂಭೀರ ಸ್ವರೂಪವಲ್ಲದ ಪ್ರಕರಣ ದಾಖಲಾಗಿದೆ. ಸ್ಥಳೀಯ ಪೊಲೀಸರು ಸರಿಯಾಗಿ ತನಿಖೆ ನಡೆಸುತ್ತಿಲ್ಲವೆಂದು ಆರೋಪಿಸಿರುವ ಅಬ್ದುಲ್, ನಗರ ಪೊಲೀಸ್ ಕಮಿಷನರ್ ಸೀಮಾಂತ್ ಕುಮಾರ್ ಸಿಂಗ್ ಅವರಿಗೆ ಪ್ರತ್ಯೇಕವಾಗಿ ದೂರು ನೀಡಿದ್ದಾರೆ.

ಯಲಹಂಕ ಬಳಿ 7 ಗುಂಟೆ ಜಾಗವು 1993 ರಿಂದಲೂ ನಮ್ಮ ಸ್ವಾಧೀನದಲ್ಲಿದ್ದು, ಮಳಿಗೆಗಳನ್ನು ನಿರ್ಮಿಸಿ ಬಾಡಿಗೆಗೆ ನೀಡಿದ್ದೇನೆ. ಬಾಡಿಗೆ ಹಣದಿಂದಲೇ ಕುಟುಂಬ ನಿರ್ವಹಿಸಲಾಗುತ್ತಿದೆ. ರಿಯಲ್ ಎಸ್ಟೇಟ್ ಕಂಪನಿಯೊಂದು ಜಾಗ ಕಬಳಿಸಲು ಯತ್ನಿಸುತ್ತಿದ್ದು, 25ಕ್ಕೂ ಅಧಿಕ ಮಂದಿ ಅಪರಿಚಿತರು ಸ್ಥಳಕ್ಕೆ ಬಂದು ಜಾಗ ಬಿಟ್ಟು ಹೋಗುವಂತೆ ಬೆದರಿಕೆ ಹಾಕಿ ಹಲ್ಲೆಗೆ ಯತ್ನಿಸಿದ್ದಾರೆ ಎಂದು ದೂರಿನಲ್ಲಿ ಅವರು ಆರೋಪಿಸಿದ್ದಾರೆ. ಪೊಲೀಸರಿಗೆ ದೂರು ನೀಡಿದರೂ ಎಫ್‌ಐಆರ್ ದಾಖಲಿಸಿಲ್ಲ. ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿ, ನನಗೆ ರಕ್ಷಣೆ ನೀಡಬೇಕು ಎಂದು ಕೋರಿದ್ದಾರೆ.

# ಬೆಂಗಳೂರಿನಲ್ಲಿ ಪೆಟ್ರೋಲ್ ಟ್ಯಾಂಕರ್ ಡಿಕ್ಕಿ ಹೊಡೆದು ಸೂಪರ್‌ವೈಸರ್ ಸಾವು

• ಉದಯವಾಹಿನಿ, ಬೆಂಗಳೂರು

ಹೊಸೂರು ರಸ್ತೆಯ ಬೊಮ್ಮನಹಳ್ಳಿ ಜಂಕ್ಷನ್ ಬಳಿ ದ್ವಿಚಕ್ರ ವಾಹನಕ್ಕೆ ಪೆಟ್ರೋಲ್ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಖಾಸಗಿ ಕಂಪನಿಯ ಸೂಪರ್ ವೈಸರ್ ಮೃತಪಟ್ಟಿದ್ದಾರೆ. ಪೀಣ್ಯ ಎರಡನೇ ಹಂತದ ಬಾಬು (52), ಬೊಮ್ಮಸಂದ್ರದ ಖಾಸಗಿ ಕಂಪನಿಯಲ್ಲಿ ಸೂಪರ್‌ವೈಸರ್ ಆಗಿದ್ದರು. ಅವರು ಕೆಲಸ ಮುಗಿಸಿಕೊಂಡು ಕಂಪನಿಯಿಂದ ದ್ವಿಚಕ್ರ ವಾಹನದಲ್ಲಿ ಮನೆಗೆ ಹೋಗುತ್ತಿದ್ದಾಗ ಈ ದುರ್ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮುಂದೆ ಹೋಗುತ್ತಿದ್ದ ಬಾಬು ಅವರ ದ್ವಿಚಕ್ರ ವಾಹನಕ್ಕೆ ಟ್ಯಾಂಕರ್ ಡಿಕ್ಕಿ ಹೊಡೆದಿದೆ. ಈ ವೇಳೆ ನಿಯಂತ್ರಣ ತಪ್ಪಿ ಕೆಳಗೆ ಬಿದ್ದು ತೀವ್ರವಾಗಿ ಗಾಯಗೊಂಡ ಅವರನ್ನು ಸ್ಥಳೀಯರು ಆಸ್ಪತ್ರೆಗೆ ಕರೆದೊಯ್ಯಲು ಯತ್ನಿಸಿದ್ದಾರೆ. ಆದರೆ, ಮಾರ್ಗ ಮಧ್ಯೆಯೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

ಟ್ಯಾಂಕರ್ ಚಾಲಕನ ನಿರ್ಲಕ್ಷ್ಯ ಹಾಗೂ ಅತಿಯಾದ ವೇಗವೇ ಅಪಘಾತಕ್ಕೆ ಕಾರಣ. ಬಾಬು ಅವರು ಹೆಲ್ಮೆಟ್ ಧರಿಸಿರಲಿಲ್ಲ. ಹೀಗಾಗಿ, ಅವರ ತಲೆಗೆ ಪೆಟ್ಟಾಗಿ ತೀವ್ರ ರಕ್ತಸ್ರಾವವಾಗಿದೆ. ಹೆಲ್ಮೆಟ್ ಅನ್ನು ಕಾಲುಗಳ ಬಳಿ ಇಟ್ಟುಕೊಂಡು ದ್ವಿಚಕ್ರ ವಾಹನ ಚಾಲನೆ ಮಾಡುತ್ತಿದ್ದರು. ಅವರು ಹೆಲ್ಮೆಟ್ ಧರಿಸಿದ್ದರೆ ಬದುಕುಳಿಯುವ ಸಾಧ್ಯತೆಯಿತ್ತು. ಟ್ಯಾಂಕರ್ ಚಾಲಕನನ್ನು ಬಂಧಿಸಿ, ವಾಹನ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಮಡಿವಾಳ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಭಿವೃದ್ಧಿ ಕಾಮಗಾರಿಗೆ ಶರತ್ ಬಚ್ಚೇಗೌಡ ಚಾಲನೆ

• ಉದಯವಾಹಿನಿ, ಸೂಲಿಬೆಲೆ

ಹೋಬಳಿ ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಶರತ್ ಬಚ್ಚೇಗೌಡ ಭೂಮಿ ಪೂಜೆ ನೆರವೇರಿಸಿದರು. ಚೀಮಸಂದ್ರ ಗ್ರಾಮದಲ್ಲಿ 25 ಲಕ್ಷ ರಸ್ತೆ ಕಾಮಗಾರಿ, ಬಾವಾಪುರದಲ್ಲಿ 25ಲಕ್ಷದ ರಸ್ತೆ ನಿರ್ಮಾಣ, ಟಿ.ಅಗ್ರಹಾರದಲ್ಲಿ 25ಲಕ್ಷದ ರಸ್ತೆ ನಿರ್ಮಾಣ, ಗುಳ್ಳಹಳ್ಳಿಯಲ್ಲಿ 25 ಲಕ್ಷದ ಕಾಂಕ್ರೀಟ್ ರಸ್ತೆ, ಮುತ್ತಕದಹಳ್ಳಿಯಲ್ಲಿ 25 ಲಕ್ಷ ಹಾಗೂ ಬೀಮಕನಹಳ್ಳಿಯಲ್ಲಿ 50 ಲಕ್ಷದ ರಸ್ತೆ ಕಾಮಗಾರಿ, ಈ ಮುತ್ಸಂದ್ರದಲ್ಲಿ 20ಲಕ್ಷ ಹಾಗೂ ನಗರೇನಹಳ್ಳಿಯಲ್ಲಿ 30 ಲಕ್ಷದ ರಸ್ತೆ ಕಾಮಗಾರಿ ಸೇರಿದಂತೆ ಒಟ್ಟು 2.25 ಕೋಟಿ ವೆಚ್ಚದ ಕಾಂಕ್ರೀಟ್ ರಸ್ತೆಗಳ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು. ನಂತರ ಬಮೂಲ್ ನಿರ್ದೇಶಕ ಬಿ.ವಿ.ಸತೀಶಗೌಡ ಮಾತನಾಡಿ, ದೊಡ್ಡಹರಳಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಮ್ಮರಸನಹಳ್ಳಿ, ಟಿ.ಅಗ್ರಹಾರ, ಬಾವಾಪುರ ಗ್ರಾಮಗಳಲ್ಲಿ ಆಹಾರ ನಾಗರಿಕ ಇಲಾಖೆಯ ವತಿಯಿಂದ ನೂತನವಾಗಿ ಅರ್ಜಿ ಹಾಕಲಾಗಿದ್ದ 100 ಫಲಾನುಭವಿಗಳಿಗೆ ಹೊಸ ಪಡಿತರ ಚೀಟಿಗಳ ವಿತರಣೆ ಮಾಡಲಾಗಿದೆ ಎಂದು ಹೇಳಿದರು.

## ಹ್ಯಾರಿಸ್, ನಲಪಾಡ್‌ಗೆ ಇಡಿ ಶಾಕ್: ದಾಳಿ ಹಿಂದಿದ್ಯಾ ಬಿಟ್ ಕಾಯಿನ್ ರಹಸ್ಯ, ಶ್ರೀಕಿ ಸಹವಾಸ ತಂದಿಡ್ತಾ ಸಂಕಷ್ಟ

# ನಲಪಾಡ್‌ಗೂ ಬಿಟ್ ಕಾಯಿನ್ ಹಗರಣಕ್ಕೂ ಏನು ಸಂಬಂಧ

• ಉದಯವಾಹಿನಿ, ಬೆಂಗಳೂರು



☛ ಉದಯವಾಹಿನಿ ಚಿತ್ರ

**ನನ್ನ ತಮ್ಮನಿಗೆ ಪರಿಚಯ**

ಕಾಂಗ್ರೆಸ್ ಶಾಸಕ ಎನ್ ಎ ಹ್ಯಾರಿಸ್, ಮುಹಮ್ಮದ್ ನಲಪಾಡ್‌ಗೆ ಸೋಮವಾರ ಜಾರಿ ನಿರ್ದೇಶನಾಲಯ( ಇಡಿ) ಶಾಕ್ ನೀಡಿದೆ. ಬೆಂಗಳೂರಿನ ಹ್ಯಾರಿಸ್ ಮತ್ತು ನಲಪಾಡ್ ನಿವಾಸಕ್ಕೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಒಟ್ಟು 17 ಕಡೆಗಳಲ್ಲಿ ಈ ದಾಳಿ ನಡೆಸಲಾಗಿದೆ. ಇಡಿ ದಾಳಿ ನಡೆಸಿರುವ ಹಿಂದೆ ಬಿಟ್‌ಕಾಯಿನ್ ಹಗರಣದ ಶಂಕೆ ಇದೆ. ಈವರೆಗೆ ಇಡಿ ಯಾವುದೇ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ. ಆದರೆ, ಬಿಟ್ ಕಾಯಿನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ದಾಳಿ ನಡೆದಿದೆ ಎಂಬುವುದು ಬಹುತೇಕ ಖಚಿತವಾಗಿದೆ. ಸಬಿಟ್ ಕಾಯಿನ್ ಹಗರಣ ರಾಜ್ಯದಲ್ಲಿ ಈ ಹಿಂದೆ ಸದ್ದಾಗಿತ್ತು. ಪ್ರಭಾವಿಗಳ ಹೆಸರು ಈ ಪ್ರಕರಣದಲ್ಲಿ ಕೇಳಿಬಂದಿತ್ತು. ಅಲ್ಲದೆ, ಎನ್‌ಎ ಹ್ಯಾರಿಸ್ ಪುತ್ರ ನಲಪಾಡ್ ಹೆಸರು ಚಾಲ್ತಿಯಲ್ಲಿತ್ತು.ಬಳಿಕ ಅಂದಿನ ರಾಜ್ಯ ಸರ್ಕಾರ ಈ ಪ್ರಕರಣವನ್ನು ಎಸ್‌ಐಟಿ ತನಿಖೆಗೆ ನೀಡಿತ್ತು. ಇದೇ ಸಂದರ್ಭದಲ್ಲಿ ಇಡಿ ಕೂಡಾ ಪ್ರಕರಣ ದಾಖಲು ಮಾಡಿಕೊಂಡಿತ್ತು. ಬಿಟ್ ಕಾಯಿನ್ ಹಗರಣದಲ್ಲಿ ಅಕ್ರಮ ಹಣಕಾಸು ವರ್ಗಾವಣೆ ಆಗಿರುವ ಬಗ್ಗೆ ತನಿಖೆಯಲ್ಲಿ ಹೊರಬಂದಿತ್ತು.

**ಏನಿದು ಬಿಟ್ ಕಾಯಿನ್ ಹಗರಣ?:** ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಿಟ್ ಕಾಯಿನ್ ಹಗರಣ ಸದ್ದು ಮಾಡಿತ್ತು. 2020ರಲ್ಲಿ ನಡೆದ ಡ್ರಗ್ಸ್ ಪ್ರಕರಣದ ತನಿಖೆಯ ಸಂದರ್ಭದಲ್ಲಿ ಪೊಲೀಸರಿಗೆ ಬಿಟ್ ಕಾಯಿನ್ ಹಗರಣದ ಬಗ್ಗೆ ಮಾಹಿತಿ ಸಿಕ್ಕಿತ್ತು. ಸಿಸಿಬಿ ಪೊಲೀಸರು 2020 ನವೆಂಬರ್ ತಿಂಗಳಲ್ಲಿ ಕೆಲವರನ್ನು ಮಾದಕ ದ್ರವ್ಯ ಸೇವನೆ ಪ್ರಕರಣದಲ್ಲಿ ಬಂಧಿಸಿದ್ದರು. ಪ್ರಕರಣದ ತನಿಖೆ ನಡೆಸಿದ ಸಂದರ್ಭದಲ್ಲಿ ಡಾರ್ಕ್ ನೆಟ್ ಮೂಲಕ ಬಿಟ್ ಕಾಯಿನ್‌ಗಳನ್ನು ಬಳಸಿಕೊಂಡು ಡ್ರಗ್ಸ್ ದಂಧೆ ನಡೆಸಿದ್ದಾರೆ ಎಂಬ ಮಾಹಿತಿ ಬಹಿರಂಗಗೊಂಡಿತ್ತು. ಅಲ್ಲದೆ, ಇದು ಹೈ ಪ್ರೊಫೈಲ್ ಮಟ್ಟದಲ್ಲಿ ನಡೆಯುತ್ತಿದೆ ಎಂಬ ಮಾಹಿತಿಯೂ ಲಭ್ಯವಾಗಿತ್ತು.

ಈ ಪ್ರಕರಣದಲ್ಲಿ ಬಂಧಿತರ ಪೈಕಿ ಶ್ರೀಕಿ ಯಾನೆ ಶ್ರೀಕೃಷ್ಣ ಒಬ್ಬನಾಗಿದ್ದ. ಈತ ಬಿಟ್ ಕಾಯಿನ್ ವಿನಿಮಯಕ್ಕೆ ಹ್ಯಾಕ್‌ಮಾಡಿದ್ದ, ಕ್ರಿಪ್ಟೋ ಕರೆನ್ಸಿ ಲೂಟಿ, ಅಕ್ರಮ ಹಣಕಾಸು ವರ್ಗಾವಣೆ ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ಹ್ಯಾಕರ್ ಆಗಿ ಕೆಲಸ ಮಾಡಿದ್ದ ಎಂಬ ಅಘಾತಕಾರಿ ವಿಚಾರ ಬೆಳಕಿಗೆ ಬಂದಿತ್ತು. ಇಷ್ಟೇ ಅಲ್ಲದೆ, ಈ ವ್ಯಕ್ತಿ ಸರ್ಕಾರಿ ಪೋರ್ಟರ್‌ಗಳಿಗೂ ಕನ್ನ ಹಾಕಿದ್ದ. ಸರ್ಕಾರದ ವೆಬ್ ಸೈಟ್‌ಗಳನ್ನು ಹ್ಯಾಕ್ ಮಾಡಿದ್ದ. ಬಳಿಕ ಈ ಪ್ರಕರಣವನ್ನು ಇಡಿ ತನಿಖೆಗೆ ವಹಿಸಿಕೊಂಡಿತ್ತು. ಶ್ರೀ ಕೃಷ್ಣ ಸೇರಿದಂತೆ ಬಿಟ್ ಕಾಯಿನ್ ಹಗರಣದಲ್ಲಿ 1000 ಕೋಟಿ ರೂಪಾಯಿ ವಹಿವಾಟು ನಡೆಸಲಾಗಿದೆ ಎಂಬ ಆರೋಪ ಕೇಳಿಬಂದಿತ್ತು. ರಾಜಕೀಯವಾಗಿಯೂ ಈ ಪ್ರಕರಣ ಭಾರೀ ಸದ್ದು ಮಾಡಿತ್ತು. ಕೆಲವು ರಾಜಕಾರಣಿಗಳ ಹೆಸರೂ ಈ ಪ್ರಕರಣದಲ್ಲಿ ಕೇಳಿಬಂದಿತ್ತು.

**ಹ್ಯಾಕ್ ಮಾಡಿದ್ದ ಹಣ ನಲಪಾಡ್ ಖಾತೆಗೆ ಬಂದಿದ್ಯಾ?**

**ಎಂಬ ಬಗ್ಗೆ ಇಡಿ ತನಿಖೆ ನಡೆಸುತ್ತಿದೆ. ಶ್ರೀಕಿ ಹಾಗೂ ನಲಪಾಡ್ ನಡುವೆ ಸಂಪರ್ಕವಿದ್ದ ಕಾರಣದಿಂದಾಗಿ ಈ ಅನುಮಾನ ವ್ಯಕ್ತವಾಗುತ್ತಿದೆ. ಇದರ ಭಾಗವಾಗಿಯೇ ಇಡಿ ಅಧಿಕಾರಿಗಳು ಎನ್‌ಎ ಹ್ಯಾರಿಸ್ ಮತ್ತು ನಲಪಾಡ್ ನಿವಾಸದ ಮೇಲೆ ದಾಳಿ ನಡೆಸಿದರು ಸಾಧ್ಯತೆ ಇದೆ.**

**ಇಡಿ ಎಂಟ್ರಿ ಹೇಗೆ?:** ಬಿಟ್ ಕಾಯಿನ್ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಗೆ ಎಸ್‌ಐಟಿ ರಚನೆ ಮಾಡಲಾಗಿತ್ತು. ಆದರೆ ಅಕ್ರಮ ಹಣಕಾಸು ವರ್ಗಾವಣೆ ಕಾಯ್ದೆ ಅಡಿಯಲ್ಲಿ ಇಡಿ ಕೂಡಾ ಪ್ರಕರಣ ದಾಖಲು ಮಾಡಿಕೊಂಡಿತ್ತು. ಬಿಟ್ ಕಾಯಿನ್ ಹಗರಣದಲ್ಲಿ ಯಾರಿಗೆಲ್ಲಾ ಹಣ ಸಂದಾಯವಾಗಿದೆ ಎಂಬ ಬಗ್ಗೆ ತನಿಖೆ ನಡೆಸಿತ್ತು. ಇದರ ಮುಂದುವರಿದ ಭಾಗವಾಗಿಯೇ ಎನ್‌ಎ ಹ್ಯಾರಿಸ್, ನಲಪಾಡ್ ನಿವಾಸದ ಮೇಲೆ ಇಡಿ ದಾಳಿ ನಡೆಸಿರುವ ಸಾಧ್ಯತೆ ಇದೆ.

**ನಲಪಾಡ್‌ಗೂ ಶ್ರೀಕಿಗೂ ಸಂಬಂಧ ಏನು?:** ಶ್ರೀಕಿ, ಮುಹಮ್ಮದ್ ನಲಪಾಡ್ ಸ್ನೇಹದ ಬಗ್ಗೆಯೂ ಸಾಕಷ್ಟು ಚರ್ಚೆ ನಡೆದಿತ್ತು. ಈ ಹಿಂದೆ ಈ ಕುರಿತಾಗಿ ಮಾಧ್ಯಮಗಳಿಗೆ ನಲಪಾಡ್ ಹೇಳಿಕೆ ನೀಡಿದ್ದರು. ಫರ್ಜಿ ಕೆಫೆಯಲ್ಲಿ ಗಲಾಟೆ ನಡೆದ ಸಂದರ್ಭದಲ್ಲಿ ಶ್ರೀಕಿ ನನ್ನ ಜೊತೆಗಿದ್ದ. ಶ್ರೀಕಿ ನನ್ನ ತಮ್ಮನಿಗೆ ಪರಿಚಯ. ಇದರಲ್ಲಿ ಮರೆಮಾಚಲು ಏನೂ ಇಲ್ಲ ಎಂದು ಹೇಳಿಕೊಂಡಿದ್ದರು.

ಇದೇ ವಿಚಾರವಾಗಿ ಶ್ರೀಕಿ ಸಿಸಿಬಿ ಮುಂದೆ ಹೇಳಿಕೆ ನೀಡಿದ್ದು, 2015ರಲ್ಲಿ ತಮ್ಮ ಸ್ನೇಹಿತ ಮನೀಶ್ ಮೂಲಕ ಉಮರ್ ನಲಪಾಡ್ ಪರಿಚಯವಾಗಿ, 2018ರಿಂದ ತಾವು ಪ್ರತಿದಿನ ಪಾರ್ಟಿಗಳಲ್ಲಿ ಭಾಗವಹಿಸುತ್ತಿದ್ದೆವು ಎಂದು ತಿಳಿಸಿರುವುದಾಗಿ ವರದಿಯಾಗಿದೆ. 2018ರ ಫರ್ಜಿ ಕೆಫೆ ಗಲಾಟೆಯಲ್ಲಿ ಮುಹಮ್ಮದ್ ನಲಪಾಡ್ ಆರೋಪಿ ನಂಬರ್ 1 ಆಗಿದ್ದರೆ, ಶ್ರೀಕೃಷ್ಣ ಆರೋಪಿ ನಂಬರ್ 3 ಆಗಿದ್ದ ಅದರೆ ಬಿಟ್ ಕಾಯಿನ್ ಪ್ರಕರಣದಲ್ಲಿ ನಲಪಾಡ್‌ಸಹೋದರರ ಹೆಸರನ್ನು ಶ್ರೀಕಿ ಪೊಲೀಸರ ಮುಂದೆ ಹೇಳಿದ್ದು ಉಲ್ಲೇಖ ಆಗಿರಲಿಲ್ಲ.

**ಯಾರು ಶ್ರೀಕಿ?**

**ಶ್ರೀ ಕೃಷ್ಣ ಆಲಿಯಾಸ್ ಶ್ರೀಕಿ ಓರ್ವ ಹ್ಯಾಕರ್. ಸೈಬರ್ ಕ್ರೈಮ್ ಮತ್ತು ಮಾದಕ ವ್ಯಸನ ಪ್ರಕರಣದಲ್ಲಿ 2015 ರಲ್ಲೇ ಈತ ಪೊಲೀಸ್ ರಾಡಾರ್‌ನಲ್ಲಿದ್ದ. 2025 ರಲ್ಲಿ ಬ್ಯಾಂಕ್‌ಖಾತೆಗೆ ಕನ್ನ ಹಾಕಿದ್ದ ಆರೋಪದಲ್ಲಿ ಈತನನ್ನು ಬಂಧಿಸಲಾಗಿತ್ತು. ನಂತರದಲ್ಲಿ ಜಮೀನಿನಲ್ಲಿ ಬಿಡಗಡೆ ಮಾಡಲಾಗಿತ್ತು. ಹಣ ಸಂಪಾದನೆ ಮತ್ತು ಡ್ರಗ್ಸ್‌ಗಾಗಿ ಈತ ಇಂತಹ ಕೃತ್ಯದಲ್ಲಿ ತೊಡಗಿಸಿಕೊಂಡಿದ್ದ. ಈತ ಚಾಣಾಕ್ಷ್ಯ ಹ್ಯಾಕರ್ ಆಗಿದ್ದ ಕಾರಣಕ್ಕಾಗಿ ಕೆಲವು ಪ್ರಭಾವಿಗಳು ಈತನನ್ನು ಬಳಸಿಕೊಂಡಿದ್ದರು. ಹೀಗಾಗಿ ಶ್ರೀಕಿ ಬಂಧನದ ಸಂದರ್ಭದಲ್ಲಿ ಕೆಲವು ಪ್ರಭಾವಿಗಳ ಹೆಸರು ಕೇಳಿಬಂದಿತ್ತು.**

# ಬಿಡಿಎ ಸ್ವತ್ತು ವರ್ಗ: ನಿವೇಶನದಾರರು ಅತಂತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ವತ್ತುಗಳನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ವರ್ಗಾಯಿಸಲಾಗಿದೆ. ಆದರೆ, ಬಿಡಿಎ ನಿವೇಶನದಾರರಿಗೆ ಕಂದಾಯ ಪಾವತಿಸಲು ಎರಡೂ ಪ್ರಾಧಿಕಾರಗಳಲ್ಲಿ ಅವಕಾಶ ಇಲ್ಲದೇ ಇರುವುದರಿಂದ ಅತಂತ್ರ ಸ್ಥಿತಿಯಲ್ಲಿದ್ದಾರೆ. ಸರ್ ಎಂ. ವಿಶ್ವೇಶ್ವರಯ್ಯ ಬಡಾವಣೆಯ 1ರಿಂದ 9ನೇ ಬ್ಲಾಕ್ ನಲ್ಲಿರುವ ಬಿಡಿಎ ಸ್ವತ್ತುಗಳನ್ನು 2026ರ ಜನವರಿ 8ರಂದು ಯಥಾವತ್ತಾಗಿ ಜಿಬಿಎಗೆ ವರ್ಗಾಯಿಸಲಾಗಿದೆ.

ಜಿಬಿಎನಲ್ಲಿ ಶೇಕಡ 5ರಷ್ಟು ರಿಯಾಯಿತಿ ನೀಡಿ ಕಂದಾಯ ಸ್ವೀಕರಿಸಲಾಗುತ್ತಿದೆ. ಆದರೆ, ಬಿಡಿಎ ನಿವೇಶನಗಳಿಗೆ ಕಂದಾಯ ಪಾವತಿಸಲು ಅನುವು ಮಾಡಿಕೊಟ್ಟಿಲ್ಲ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಈ ಬಗ್ಗೆ ವಿಚಾರಿಸಿದರೆ ನಮ್ಮಲ್ಲಿ ಕಂದಾಯ ಸ್ವೀಕರಿಸಲು ಅವಕಾಶ ಕಲ್ಪಿಸಿಲ್ಲ. ಆದ್ದರಿಂದ ಜಿಬಿಎನಲ್ಲೇ ಪಾವತಿಸಬೇಕು ಎನ್ನುತ್ತಾರೆ.

ಆದರೆ, ಜಿಬಿಎನಲ್ಲಿ ಪ್ರಯತ್ನಿಸಿದರೆ ಕಂದಾಯ ಪಾವತಿಸಲು ಯಾವುದೇ ಆನ್‌ಲೈನ್‌ವ್ಯವಸ್ಥೆಯನ್ನೂ ಕಲ್ಪಿಸಿಲ್ಲ ಎಂದು ಸರ್ ಎಂ. ವಿಶ್ವೇಶ್ವರ ಯ್ಯ ಬಡಾವಣೆಯ ನಿವೇಶನದಾರರು ಕಳವಳ ವ್ಯಕ್ತಪಡಿಸಿದ್ದಾರೆ.

ನಿತ್ಯ ಸಾವಿರಾರು ನಿವೇಶನ ಮಾಲೀಕರು ಕಂದಾಯ ಎಲ್ಲಿ ಪಾವತಿಸಬೇಕು ಎಂಬುದು ತಿಳಿಯದೆ ಸಂಘಕ್ಕೆ ಬಂದು ಮಾಹಿತಿ ಕೇಳುತ್ತಿದ್ದಾರೆ. ಮೆಸೇಜ್ ಹಾಗೂ ದೂರವಾಣಿ ಕರೆ ಮಾಡಿಯೂ ಕೇಳುತ್ತಿದ್ದಾರೆ.

ಏಪ್ರಿಲ್ ತಿಂಗಳಲ್ಲಿ ಪಾವತಿಸುವವರಿಗೆ ಶೇ 5ರಷ್ಟು ರಿಯಾಯಿತಿ ನೀಡಲಾಗುವುದು ಎಂದು ಹೇಳಲಾಗಿದೆ. ಆದ್ದರಿಂದ ಕೂಡಲೇ ಕಂದಾಯ ಪಾವತಿಸಿಕೊಳ್ಳಲು ಅವಕಾಶ ನೀಡಬೇಕು ಎಂದು ಸರ್ ಎಂ. ವಿಶ್ವೇಶ್ವರಯ್ಯ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಿ.ಎಸ್. ಗೌಡ ಒತ್ತಾಯಿಸಿದ್ದಾರೆ.

**ಬಿಡಿಎ ವ್ಯಾಪ್ತಿಯಲ್ಲಿದ್ದ ಬನಶಂಕರಿ ಮತ್ತು ವಿಶ್ವೇಶ್ವರಯ್ಯ ಲೇಔಟ್‌ಗಳನ್ನು ಜಿಬಿಎಗೆ ವಹಿಸಲಾಗಿದೆ. ತೆರಿಗೆ ಪಾವತಿಗೆ ಮಾತ್ರ ಈ ಬಡಾವಣೆಗಳು ಜಿಬಿಎ ವ್ಯಾಪ್ತಿಗೆ ಒಳಪಡುತ್ತವೆ. ಉಳಿದಂತೆ ಪೂರ್ಣ ಜವಾಬ್ದಾರಿ ಬಿಡಿಎಗೆ ಸೇರಿದೆ ಎಂದು ಬಿಡಿಎ ಅಧಿಕಾರಿಯೊಬ್ಬರು ತಿಳಿಸಿದರು.**

# ಶೌಚಾಲಯವಿಲ್ಲ, ವಿಶ್ರಾಂತಿಯೂ ಇಲ್ಲ: ಮಹಿಳಾ ಗಿಗ್ ಕಾರ್ಮಿಕರ ನೋವಿನ ಕಥೆ

• ಉದಯವಾಹಿನಿ, ಬೆಂಗಳೂರು



ತಮ್ಮ ಸಂಕಷ್ಟದ ದಿನಗಳಲ್ಲಿ, ಕುಟುಂಬದ ಜವಾಬ್ದಾರಿ ಹೊತ್ತ ಅದೆಷ್ಟೋ ಮಹಿಳೆಯರು ತಾವು ಕೆಲಸ ಮಾಡುವ ಸ್ಥಳದಲ್ಲಿ ಒಂದಲ್ಲಾ ಒಂದು ರೀತಿಯಲ್ಲಿ ಸಮಸ್ಯೆಗಳನ್ನು ಎದುರಿಸುತ್ತಲೇ ಇದ್ದಾರೆ. ಅದರಲ್ಲೂ ಆನ್‌ಲೈನ್ ವೇದಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಗಿಗ್ ಕಾರ್ಮಿಕರು ತಮ್ಮ ಪರಿಸ್ಥಿತಿಗಳ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ಮನೆಕೆಲಸ, ಸೌಂದರ್ಯ ಸೇವಾ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಮಹಿಳೆಯರು ಪ್ರಮುಖವಾಗಿ ಶೌಚಾಲಯದ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ.

ಜನಪ್ರಿಯ ಆನ್‌ಲೈನ್ ವೇದಿಕೆಗಳಲ್ಲಿ ಕೆಲಸ ಮಾಡುತ್ತಿರುವ ಜನನಿ (35), ಪದೇ ಪದೇ ಶೌಚಾಲಯಕ್ಕೆ ಹೋಗಬೇಕಾಗುತ್ತದೆ ಎಂದು ನೀರು ಕುಡಿಯುವುದನ್ನೇ ಕಡಿಮೆ ಮಾಡಿರುವುದಾಗಿ ಹೇಳಿಕೊಂಡಿದ್ದಾರೆ.

ಸಾಮಾನ್ಯವಾಗಿ ನಾನು ಒಂದು ಬುಕ್ಕಿಂಗ್‌ನಿಂದ ಮತ್ತೊಂದು ಕಡೆ ನಡೆದುಕೊಂಡೇ ಹೋಗುತ್ತೇನೆ. ಈ ಬಿಸಿಲಿನಲ್ಲಿ ನನಗೆ ತುಂಬಾ ದಾಹವಾಗುತ್ತದೆ. ಆದರೆ ಎಲ್ಲಾ ಕಡೆ ಶೌಚಾಲಯ ಸೌಲಭ್ಯ ದೊರೆಯುತ್ತದೆ ಎಂಬ ವಿಶ್ವಾಸ ಇಲ್ಲದ ಕಾರಣ, ನೀರು ಕುಡಿಯುವುದನ್ನು ನಿಯಂತ್ರಿಸುತ್ತೇನೆ. ಅನೇಕ ಬಾರಿ ಕೆಲಸ ಮಾಡುವ ಸ್ಥಳಗಳಲ್ಲಿ ಶೌಚಾಲಯ ಬಳಸಲು ಅವಕಾಶ ನೀಡುವುದಿಲ್ಲ. ಸಾರ್ವಜನಿಕ ಶೌಚಾಲಯಗಳೂ ಎಲ್ಲೆಡೆ ಲಭ್ಯವಿರುವುದಿಲ್ಲ. ಈ ವಿಷಯದ ಬಗ್ಗೆ ಆಡಳಿತ ಮಂಡಳಿಯ ಗಮನಕ್ಕೆ ತಂದಾಗ ಕಂಪನಿಯಿಂದ ಯಾವುದೇ ಸಹಾಯ ದೊರಕಲಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಮಿಕರು ವಿಶ್ರಾಂತಿ ಪಡೆಯಲು ಸೂಕ್ತ ಸ್ಥಳಗಳ ಕೊರತೆಯಿಂದ ಪಾದಚಾರಿ ಮಾರ್ಗಗಳು, ಬಸ್ ನಿಲ್ದಾಣಗಳಲ್ಲಿ ವಿಶ್ರಾಂತಿ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕಳೆದ ವಾರ ನನಗೆ ನಿರ್ಜಲೀಕರಣ ಸಮಸ್ಯೆ ಎದುರಾಯಿತು. ಕೆಲಸ ಮಾಡಲು ಸಾಧ್ಯವಾಗದ ಸ್ಥಿತಿಯಲ್ಲಿ ನಾನಿದ್ದೆ. ಹೀಗಾಗಿ ಆ ದಿನದ ಬುಕ್ಕಿಂಗ್‌ಗಳನ್ನು ರದ್ದುಪಡಿಸಬೇಕಾಯಿತು. ಆದರೆ ರದ್ದುಪಡಿಸಿದಕ್ಕಾಗಿ ನಾನು ದಂಡ ಕಟ್ಟಬೇಕಾಯಿತು. ಈ ಬಿಸಿಲಿನಲ್ಲಿ ನಿರಂತರ ಬುಕ್ಕಿಂಗ್‌ಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಬೇರೆ ಉದ್ಯೋಗಗಳನ್ನು ಹುಡುಕುತ್ತಿದ್ದೇನೆ. ಬುಕಿಂಗ್ ರದ್ದು ಮಾಡಿಕೊಂಡಿದ್ದಕ್ಕೆ ಮಾತ್ರವಲ್ಲದೆ, ಕೊಂಚ ವಿಳಂಬವಾದರೂ ಕಾರ್ಮಿಕರು ದಂಡ ತೆರಬೇಕಾಗುತ್ತದೆ. ಐದು ನಿಮಿಷಗಳ ತಡಕ್ಕೂ 10 ದಂಡ ವಿಧಿಸಲಾಗುತ್ತದೆ' ಎಂದು ಹೆಸರು ಹೇಳಲು ಇಚ್ಛಿಸದ ಮಹಿಳೆಯೊಬ್ಬರು ಹೇಳಿದರು.

ಮೂಲಭೂತ ಸೌಲಭ್ಯಕ್ಕಾಗಿ ಬೇಡಿಕೆ ಇಟ್ಟ ಕಾರಣಕ್ಕೆ ಸೌಂದರ್ಯ ತಜ್ಞೆ ಸೆಲ್ವಿ ಎಂಬುವರನ್ನು ಅರ್ಬನ್ ಕಂಪನಿ ಸಂಸ್ಥೆ 2025ರ ಡಿಸೆಂಬರ್‌ನಲ್ಲಿ ತಮ್ಮನ್ನು ವಜಾ ಮಾಡಿದ್ದರ ಬಗ್ಗೆ ತಿಳಿಸಿದ್ದಾರೆ.

ಐದು ವರ್ಷಗಳ ಕಾಲ ಕಂಪನಿಯಲ್ಲಿ ಕೆಲಸ ಮಾಡಿದ್ದೇನೆ. ಆರಂಭದಲ್ಲಿ ಹಲವು ಪ್ರೋತ್ಸಾಹ ಯೋಜನೆಗಳನ್ನು ನೀಡಿ, ಕ್ರಮೇಣ ಅವನ್ನೆಲ್ಲ ತೆಗೆದುಹಾಕುತ್ತಾರೆ. ಕಳೆದ ಒಂದು ವರ್ಷದಲ್ಲಿ ಗಿಗ್ ಕಾರ್ಮಿಕರನ್ನು ನಿಯಂತ್ರಿಸುವ ಹಲವು ನಿಯಮಗಳನ್ನು ಜಾರಿಗೆ ತಂದಿದ್ದಾರೆ. ಆದರೆ ಮಹಿಳೆಯರಿಗೆ ಯಾವುದೇ ಉದ್ಯೋಗ ಭದ್ರತೆ ನೀಡಿಲ್ಲ. ನಾವು 13 ಗಂಟೆಗಳ ಕಾಲ ನಿರಂತರವಾಗಿ ಕೆಲಸ ಮಾಡಲು ಬದ್ಧರಾಗಿದ್ದರೂ, ನಮಗೆ ಯಾವುದೇ ಬುಕ್ಕಿಂಗ್‌ಗಳನ್ನು ನಿರಾಕರಿಸುವ ಅಥವಾ ರದ್ದುಪಡಿಸುವ ಅವಕಾಶವಿಲ್ಲ. ಅನ್ಯಾಯದ ವಿರುದ್ಧ ಧ್ವನಿ ಎತ್ತಿ ಉಳಿದ ಮಹಿಳೆಯರನ್ನು ಪ್ರೇರೇಪಿಸಿದ್ದಕ್ಕೆ ನನ್ನನ್ನೂ ಕೆಲಸದಿಂದ ತೆಗೆದಿದ್ದಾರೆ ಎಂದು ಅವರು ತಿಳಿಸಿದ್ದಾರೆ.

# ತಿರುಮೇನಹಳ್ಳಿ ಕೆರೆಗೆ ಸೇರುತ್ತಿದೆ ಕಲುಷಿತ ನೀರು, ಮೀನುಗಳ ಸಾವು

• ಉದಯವಾಹಿನಿ, ಯಲಹಂಕ

☛ ಉದಯವಾಹಿನಿ ಚಿತ್ರ



ಬ್ಯಾಟರಾಯನಪುರ ಕ್ಷೇತ್ರದ ಸಂಪಿಗೇಹಳ್ಳಿ ವಾರ್ಡ್ ವ್ಯಾಪ್ತಿಯ ತಿರುಮೇನಹಳ್ಳಿ ಕೆರೆಗೆ ಸುತ್ತಮುತ್ತಲ ಅಪಾರ್ಟ್‌ಮೆಂಟ್‌ಗಳು ಹಾಗೂ ವಿಲ್ಲಾಗಳಿಂದ ಹರಿದುಬರುವ ಕೊಳಚೆ ನೀರು ಸೇರುತ್ತಿದೆ. ಇದರಿಂದ ಕೆರೆಯ ನೀರು ಕಲುಷಿತಗೊಂಡಿದೆ. 20 ಎಕರೆ ವಿಸ್ತೀರ್ಣದ ಕೆರೆಯನ್ನು ಲಕ್ಷಾಂತರ ರೂಪಾಯಿ ಖರ್ಚುಮಾಡಿ, ತಂತಿಬೇಲಿ, ಕಲ್ಲಿನ ಹೊದಿಕೆ, ನಡಿಗೆಪಥ, ವಿಶ್ರಾಂತಿಗಾಗಿ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ ಮೂರು ಚಿಕ್ಕ ನಡುಗಡ್ಡೆಗಳು, ಸುತ್ತಲೂ ಹಸಿರು ವಾತಾವರಣ, ತೆರೆದ ಜಿಮ್ ಹಾಗೂ ಮಕ್ಕಳ ಆಟದ ಸಾಮಗ್ರಿಗಳನ್ನು ಅಳವಡಿಸಲಾಗಿದೆ. ಕೆರೆಯ ಪಕ್ಕದಲ್ಲೇ ಹೊಸದಾಗಿ ರಾಜಕಾಲುವೆಯನ್ನೂ ನಿರ್ಮಿಸಲಾಗಿದೆ. ಆದರೆ ಸುತ್ತಮುತ್ತಲಿನ ಅಪಾರ್ಟ್‌ಮೆಂಟ್‌ಗಳು, ವಿಲ್ಲಾಗಳಿಂದ ಕೊಳಚೆನೀರು ನೇರವಾಗಿ ಕೆರೆಗೆ ಸೇರುತ್ತಿರುವುದು ಪರಿಸರ ಹಾನಿಗೆ ಕಾರಣವಾಗಿದೆ. ಇದನ್ನು ತಡೆಗಟ್ಟಬೇಕೆಂದು ಬೆಂಗಳೂರು ಜಲಮಂಡಳಿ, ಪಾಲಿಕೆ ಅಧಿಕಾರಿಗಳು, ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಅಗ್ರಹಾರ ಬಡಾವಣೆಯ ಸುತ್ತಮುತ್ತಲ ಅಪಾರ್ಟ್‌ಮೆಂಟ್‌ಗಳು, ಹೆಗಡೆನಗರ ಮುಖ್ಯರಸ್ತೆಯ ಹಜ್ ಭವನದ ಕಡೆಯಿಂದ ರಾಜಕಾಲುವೆ ಮೂಲಕ ಹರಿದುಬರುವ ಕೊಳಚೆನೀರು ನೇರವಾಗಿ ಕೆರೆಗೆ ಸೇರುತ್ತಿದೆ. ಕೆರೆಯ ಪಕ್ಕದಲ್ಲೇ ತಿರುಮೇನಹಳ್ಳಿ-ಅಗ್ರಹಾರ ಬಡಾವಣೆ ಮುಖ್ಯರಸ್ತೆಯು ಹಾದುಹೋಗಿದೆ. ಈ ಮಾರ್ಗದಲ್ಲಿ ಪ್ರತಿದಿನ ಸಂಚರಿಸುವ ಸಾವಿರಾರು ವಾಹನ ಸವಾರರು, ಪಾದಚಾರಿಗಳು ಮತ್ತು ವಾಯುವಿಹಾರಿಗಳು ಕಿರಿಕಿರಿ ಅನುಭವಿಸುವಂತಾಗಿದೆ ಎಂದು ಅಗ್ರಹಾರ ಬಡಾವಣೆ ನಿವಾಸಿ ಎನ್.ನರಸಿಂಹಮೂರ್ತಿ ದೂರಿದರು.

ಈ ಹಿಂದೆ ಕೆರೆಯಲ್ಲಿ ನೆಲೆಸಿದ್ದ ವಿವಿಧ ಪಕ್ಷಿಗಳು, ಈಗ ಬೇರೆಡೆಗೆ ವಲಸೆ ಹೋಗಿವೆ. ವಿಷಕಾರಿ ನೀರಿನ ಪರಿಣಾಮ, ಮೀನುಗಳು ನಿರಂತರವಾಗಿ ಸಾಯುತ್ತಿವೆ. ಅಲ್ಲದೆ ಕೆರೆಯ ಸುತ್ತಲಿನ ಪ್ರದೇಶಗಳ ಕೊಳವೆಬಾವಿಗಳಲ್ಲೂ ಅಂತರ್ಜಲ ಕಲುಷಿತಗೊಂಡು ಕುಡಿಯಲು ಯೋಗ್ಯವಿಲ್ಲದಂತಾಗಿದೆ. ಕೆರೆಯ ಸಮೀಪದಲ್ಲೇ ವಾಸದ ಮನೆಗಳಿದ್ದು, ಸೊಳ್ಳೆಗಳ ಕಾಟ ಹೆಚ್ಚಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೆರೆ ಸುತ್ತ ವಿದ್ಯುತ್ ಕಂಬಗಳಿದ್ದರೂ ದೀಪಗಳು ಉರಿಯುತ್ತಿಲ್ಲ. ಇತ್ತೀಚೆಗೆ ಜನರು ವಾಯುವಿಹಾರಕ್ಕೆ ಬರುವುದನ್ನೇ ನಿಲ್ಲಿಸಿದ್ದಾರೆ ಎಂದು ದೂರಿದರು.

ಕೆರೆಯಲ್ಲಿ ಅಳವಡಿಸಿದ್ದ ತೆರೆದ ಜಿಮ್ ಹಾಗೂ ಮಕ್ಕಳ ಆಟದ ಉಪಕರಣಗಳು ಹಾಳಾಗಿವೆ. ಭದ್ರತಾ ಸಿಬ್ಬಂದಿಗೆ ಪ್ರತ್ಯೇಕ ಕೊಠಡಿ ಇಲ್ಲ. ಸಿಸಿಟಿವಿ ಕ್ಯಾಮೆರಾ ಕಾರ್ಯನಿರ್ವಹಿಸುತ್ತಿಲ್ಲ. ಶೌಚಾಲಯ ಇದ್ದರೂ ನೀರಿನ ಸೌಲಭ್ಯ ಸಮರ್ಪಕವಾಗಿಲ್ಲ ಎಂದು ಸ್ಥಳೀಯ ನಿವಾಸಿ ಸಿದ್ದಪ್ಪ ದೂರಿದರು. ಸಂಭಂದಪಟ್ಟ ಅಧಿಕಾರಿಗಳು ಕೂಡಲೇ ಕೆರೆಯನ್ನು ಶುದ್ಧಗೊಳಿಸಿ, ಕೊಳಚೆನೀರು ಸೇರದಂತೆ ತಡೆಗಟ್ಟಬೇಕು. ಅವ್ಯವಸ್ಥೆಗಳನ್ನು ಸರಿಪಡಿಸಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು.

**ಸಂಬಂಧಪಟ್ಟವರಿಗೆ ಶೀಘ್ರವೇ ನೋಟಿಸ್**

**ಹೆಗಡೆನಗರ ಮುಖ್ಯರಸ್ತೆಯ ಹಜ್ ಭವನದ ಮುಂಭಾಗದ ಪಾದಚಾರಿ ಮಾರ್ಗದಲ್ಲಿ ಚೇಂಬರ್ ಕಟ್ಟಿಕೊಂಡಿತ್ತು. ಈಗಾಗಲೆ ಅದನ್ನು ದುರಸ್ತಿಗೊಳಿಸಿ ಒಳಚರಂಡಿಗೆ ಸಂಪರ್ಕ ಕಲ್ಪಿಸಿ ರಾಜಕಾಲುವೆ ಮೂಲಕ ಕೆರೆಗೆ ಸೇರುತ್ತಿದ್ದ ಕೊಳಚೆನೀರನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆ. ಅಪಾರ್ಟ್‌ಮೆಂಟ್‌ಗಳಿಂದ ಕೊಳಚೆನೀರು ಹರಿದುಬರುತ್ತಿರುವ ಬಗ್ಗೆ ಪರಿಶೀಲನೆ ನಡೆಸಿ ಸಂಬಂಧಿಸಿದವರಿಗೆ ತಕ್ಷಣ ನೋಟಿಸ್ ನೀಡಿ ಅಗತ್ಯಕ್ರಮ ಕೈಗೊಳ್ಳಲಾಗುವುದು ಎಂದು ಬೆಂಗಳೂರು ಜಲಮಂಡಳಿ ಉತ್ತರ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮಂಜುನಾಥ ಹೊಸಮನಿ ತಿಳಿಸಿದ್ದಾರೆ.**

# ಇಂದಿನಿಂದ ಸಾರಿಗೆ ನೌಕರರ ಮುಷ್ಕರ ಬಸ್ ಸಂಚಾರದಲ್ಲಿ ವ್ಯತ್ಯಯ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ತಮ್ಮ ಬಹುದಿನಗಳ ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿ ರಾಜ್ಯ ರಸ್ತೆ ಸಾರಿಗೆ ನೌಕರರು ಮತ್ತೆ ಪ್ರತಿಭಟನೆ ಹಾದಿ ಹಿಡಿದಿದ್ದು, ಇಂದಿನಿಂದ ಮುಷ್ಕರಕ್ಕೆ ಧುಮುಕಲಿದ್ದಾರೆ. ಇಂದು ಬೆಳಗ್ಗೆ ನಗರದ ಫ್ರೀಡಂ ಪಾರ್ಕ್‌ನಲ್ಲಿ ಕೆಎಸ್‌ಆರ್‌ಟಿಸಿ ಈಶಾನ್ಯ, ವಾಯುವ್ಯ ಮತ್ತು ಬಿಎಂಟಿಸಿ ಸಾರಿಗೆ ನೌಕರರು ಪ್ರತಿಭಟನೆ ನಡೆಸುತ್ತಿರುವುದರಿಂದ ಬಸ್ ಸಂಚಾರ ವ್ಯತ್ಯಯ ಉಂಟಾಗಲಿದೆ. ಪ್ರತಿಭಟನೆಯಲ್ಲಿ ಭಾಗಿಯಾದರೆ ಅಂಥ ನೌಕರರ ವಿರುದ್ಧ ಶಿಸ್ತು ಕ್ರಮ ಇಲ್ಲವೇ ಸೇವೆಯಿಂದ ಅಮಾನತುಪಡಿಸುವುದಾಗಿ ಸಾರಿಗೆ ಇಲಾಖೆ ಎಚ್ಚರಿಕೆ ಕೊಟ್ಟಿದೆ.



ಆದರೆ ಇದಾವುದಕ್ಕೂ ಜಗ್ಗದ ನೌಕರರು ತಾವು ಪ್ರತಿಭಟನೆ ನಡೆಸಿಯೇ ತೀರುತ್ತೇವೆ ಎಂದು ಸರ್ಕಾರಕ್ಕೆ ಸೆಡ್ಡು ಹೊಡೆದಿದ್ದಾರೆ. ಪ್ರಯಾಣಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸರ್ಕಾರ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿದ್ದು, ಎಲ್ಲಾ ಡಿಪೋಗಳಲ್ಲಿ ಹೆಚ್ಚುವರಿ ಬಸ್‌ಗಳನ್ನು ನಿಯೋಜನೆ ಮಾಡಿದೆ. ನೌಕರರು ಪ್ರತಿಭಟನೆಯಲ್ಲಿ ಭಾಗಿಯಾಗಬಾರದು ಎಂದು ಸಾರಿಗೆ ಇಲಾಖೆಯ ಆಯುಕ್ತರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಇದಕ್ಕೂ ಮುನ್ನ ಸಾರಿಗೆ ಇಲಾಖೆ ನೌಕರರ ಜಂಟಿ ಕ್ರಿಯಾಸಮಿತಿ ಹಾಗೂ ಆಯುಕ್ತರ ನಡುವೆ ಹಲವು ಸುತ್ತಿನ ಸಭೆ ನಡೆದರೂ ಪ್ರಯೋಜನವಾಗಲಿಲ್ಲ. ಸಾರಿಗೆ ನೌಕರರ ಬೇಡಿಕೆಗಳನ್ನು ಕಾಲಮಿತಿಯೊಳಗೆ ಈಡೇರಿಸಲಿದೆ ಎಂದು ಭರವಸೆ ಕೊಟ್ಟರೂ ಸಾರಿಗೆ ನೌಕರರ ಒಕ್ಕೂಟಗಳು ಒಪ್ಪಲಿಲ್ಲ.

**ಬೇಕಾಬಿಟ್ಟಿ ರಜೆ ಹಾಕಿ ಪ್ರತಿಭಟನೆ:** ವಾರದ ರಜೆ, ದೀರ್ಘಾವಧಿ ರಜೆ ಹೊರತುಪಡಿಸಿ ಎಲ್ಲಾ ನೌಕರರು ಹಾಜರಾಗಬೇಕು. ಬೇಕಾಬಿಟ್ಟಿ ರಜೆ ಹಾಕಿ ಪ್ರತಿಭಟನೆಯಲ್ಲಿ ಭಾಗಿಯಾದರೆ ಅಮಾನತು ಮಾಡುವ ಎಚ್ಚರಿಕೆ ನೀಡಲಾಗಿದೆ ಇಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸದಂತೆ ಮನವಿ ಮಾಡಿರುವ ಸರ್ಕಾರ, ಶೇ.7ರಷ್ಟು ವೇತನ ಹೆಚ್ಚಳಕ್ಕೆ ಮುಂದಾಗಿದೆ. ಆದರೆ ಶೇ.25 ರಷ್ಟು ವೇತನ ಹೆಚ್ಚಳಕ್ಕೆ ನೌಕರರು ಪಟ್ಟು ಹಿಡಿದಿದ್ದಾರೆ.

**ನೌಕರರ ಬೇಡಿಕೆಗಳು ಏನು?**

- 2020-2023 ಮೂರು ವರ್ಷ 2 ತಿಂಗಳು ವೇತನ ಬಿಡುಗಡೆ
- 38 ತಿಂಗಳ ಹಿಂಬಾಕಿ ಹಣ ಪಾವತಿ
- 2024ರ ಜನವರಿ 1ಕ್ಕೆ ಅನ್ವಯವಾಗುವಂತೆ ವೇತನ ಪರಿಷ್ಕರಣೆ
- ಸರ್ಕಾರದ ವಾದವೇನು?
- 2024ರ ಬದಲು 2026ರ ಜನವರಿ 1ಕ್ಕೆ ಅನ್ವಯವಾಗುವಂತೆ ವೇತನ ಪರಿಷ್ಕರಣೆ
- 38 ತಿಂಗಳ ಬದಲು 18/20 ತಿಂಗಳ ಹಿಂಬಾಕಿ ಬಿಡುಗಡೆ

# ಮೇಲ್ಜಾತಿಯ ಅಧಿಕಾರಿಗಳಿಂದ ಕಿರುಕುಳ

## ಯಾವುದೇ ಅವಘಡಕ್ಕೂ ನೀವೇ ಹೊಣೆ! ವಿಡಿಯೋ ಮಾಡಿ ದಲಿತ ಅಧಿಕಾರಿಯ ಮನವಿ

• ಉದಯವಾಹಿನಿ, ಬೆಂಗಳೂರು

☛ ಉದಯವಾಹಿನಿ ಚಿತ್ರ



**ನಾಗರಿಕ ಹಕ್ಕುಗಳ ಜಾರಿ**

ಕರ್ನಾಟಕ ಸರಕಾರದ ಗೃಹ ಇಲಾಖೆಯಲ್ಲಿ ಪೊಲೀಸ್ ಅಧಿಕಾರಿಗಳಿಂದ ದಲಿತ ಪೊಲೀಸ್ ಅಧಿಕಾರಿಗೆ ಕಿರುಕುಳ ಆಗ್ತಿದೆ. ಇದೇ ರೀತಿ ಮುಂದುವರಿದರೆ ಮುಂದಿನ ಅವಘಡಕ್ಕೆ ನೀವೇ ಹೊಣೆಗಾರರು ಎಂದು ಸಿಎಂ, ಗೃಹ ಸಚಿವರು, ಡಿಜಿ, ಐಜಿಪಿ ಆಗಿರುವ ಉಮೇಶ್ ಕುಮಾರ್ ಅವರನ್ನ ಉಲ್ಲೇಖಿಸಿ ಡಿಸಿಆರ್‌ಇ ಇನ್ಸ್‌ಪೆಕ್ಟರ್ ಶ್ರೀನಿವಾಸ್ ಎಂಬುವವರು ಆರೋಪಿಸಿದ್ದಾರೆ.

ಈ ಕುರಿತು ವಿಡಿಯೋ ಬಿಡುಗಡೆ ಮಾಡಿದ್ದಾರೆ. ಎಸ್‌ಸಿ, ಎಸ್‌ಟಿ ಮೇಲಿನ ದೌರ್ಜನ್ಯ ಕೇಸ್ ತನಿಖೆ ನಡೆಸುವ- ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದಲ್ಲಿಯೇ ಮೇಲ್ಜಾತಿ ಅಧಿಕಾರಿಗಳಿಂದ ಕಿರುಕುಳ ಆಗ್ತಿದೆ ಎಂದು ದೂರಿದ್ದಾರೆ. ಈ ವಿಡಿಯೋದಲ್ಲಿ ಎಸ್‌ಪಿ ಕರಿಬಸನಗೌಡ ಹಾಗೂ ಡಿವೈಎಸ್‌ಪಿ ಮಹೇಶ್ವರ ಗೌಡ ಅವರ ಹೆಸರು ಹೇಳಿದ್ದಾರೆ. ದೂರುದಾರರಿಂದ ಸುಳ್ಳು ಪಿಟಿಷನ್ ಪಡೆದು ತನಿಖೆ ಹೆಸರಲ್ಲಿ ಕಿರುಕುಳ ಕೊಡಲಾಗ್ತಿದೆ. ಮೇಲ್ವರ್ಗದ ಆರೋಪಿಗಳ ಪರವಾಗಿ ಕೆಲಸ ಮಾಡುವಂತೆ ಕಿರುಕುಳ ಕೊಡಲಾಗ್ತಿದೆ ಎಂದಿದ್ದಾರೆ.

**ವಿಡಿಯೋದಲ್ಲಿ ಏನಿದೆ:** DCREನ ಡಿಜಿ – ಐಜಿಪಿ ಉಮೇಶ್‌ಅವರನ್ನು ಉಲ್ಲೇಖಿಸಿ ವಿಡಿಯೋದಲ್ಲಿ ಮಾತನಾಡಿರುವ ಶ್ರೀನಿವಾಸ್, ಸರ್ ಇತ್ತೀಚೆಗೆ ಮನಸ್ಸಿಗೆ ಬಹಳ ಬೇಸರ ಆಗ್ತಿದೆ. ದಲಿತರ ಪರ ಕೆಲಸ ಮಾಡುವುದು, ಪೊಲೀಸ್ ಇಲಾಖೆಯಲ್ಲಿ ಕೆಲಸ ಮಾಡುವುದು ದೊಡ್ಡ ತಪ್ಪು ಅಂತನಿಸುತ್ತದೆ. ಅದರಲ್ಲೂ ನಾವು ದಲಿತರೆಂದು ಸಾಕಷ್ಟು ಕೆಲಸ ಕಾರ್ಯ ಮಾಡುತ್ತಾ ಬರುತ್ತಿದ್ದೇವೆ. ಮೊನ್ನೆ ತಾವೇ ಆದೇಶ ಮಾಡಿ ಮಾ.24 ಕ್ಕೆ ಉಡುಪಿಗೆ ವರ್ಗಾವಣೆ ಮಾಡಿದ್ರಿ. ಅದರ ವಿರುದ್ಧ ಆಗ KAT ಆಡಳಿತ ನ್ಯಾಯ ಮಂಡಳಿಯಲ್ಲಿ ಸ್ಟೇ ತಂದಿದ್ದೇನೆ. ನನಗೆ ಅಧಿಕೃತವಾಗಿ ಡಿಸಿಆರ್‌ಇ ನಿಂದ ಯಾರೂ ಬಿಡುಗಡೆ ಮಾಡಿಲ್ಲ. ಆದರೆ ಎಸ್ ಪಿ ಕರಿಬಸವನಗೌಡರು, ಹಾಗೂ ಕೆಳಹಂತದ ಡಿವೈಎಸ್‌ಪಿ ಮಹೇಶ್ವರ ಗೌಡ ಅವರು, ಕೆಇಟಿ ಆದೇಶಕ್ಕೆ ವಿರುದ್ಧವಾಗಿ ಬಿಡುಗಡೆ ಮಾಡಿದ್ದೇವೆಂದು ನಕಲಿ ದಾಖಲೆ ಸೃಷ್ಟಿಕಳಿಸಿದ್ದಾರೆ. ತಾವು ಕೂಲಂಕುಷವಾಗಿ ಪರಿಶೀಲಿಸಬೇಕು. ನಮ್ಮಂತ ಅಧಿಕಾರಿಗಳು 20 ವರ್ಷ ಯಾವುದೇ ಕಪ್ಪು ಚುಕ್ಕೆಯಿಲ್ಲ ಕೆಲಸ ಮಾಡಿದ್ದೇವೆ. ನಿಮ್ಮನ್ನೂ ಬಂದು 3 ಸಾರಿ ಭೇಟಿ ಮಾಡಿದ್ದೇನೆ. ಎಸ್‌ಸಿ ಎಸ್‌ಟಿ ಆಯೋಗ, ಸದನ ಸಮಿತಿಗೂ ಪತ್ರ ಕೊಟ್ಟಿದ್ದೇನೆ. ಕುಂದು ಕೊರತೆ ಬಗ್ಗೆ ತನಿಖೆ ಆಗಲಿ ಅಂತ 18 ಅಂಶಗಳ ಮನವಿ ಮಾಡಿದ್ದೇನೆ.

ಏನಾದ್ರು ಒಳಸಂಚು ಮಾಡಿ, ನನ್ನ ವಿರುದ್ಧ ಷಡ್ಯಂತ್ರ ಮಾಡ್ತಾ ಇದ್ರೆ, ಮಾಡ್ಬೇಡಿ, ಅದು ಪರಿಣಾಮಕ್ಕೆ ಕಾರಣ ಆಗುತ್ತೆ ಎಂದು ನೊಂದ ಧ್ವನಿಯಲ್ಲಿ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದಾರೆ.

**ಇವೆಲ್ಲಾ ಸುಳ್ಳು ಆರೋಪ**


**ಯಾವುದೇ ಅವಘಡಕ್ಕೂ ತಾವೇ ನೇರ ಹೊಣೆಗಾರರು, ಆದರೆ ಈ ಆರೋಗಳನ್ನು ತಳ್ಳಿ ಹಾಕಿರುವ ಕರಿಬಸನಗೌಡ ಈ ಆಪಾದನೆಗಳಿಗೂ ತನಗೂ ಸಂಬಂಧವಿಲ್ಲ ಎಂದಿದ್ದಾರೆ. ಶ್ರೀನಿವಾಸ್ ವಿರುದ್ಧ ಯಾವುದೇ ಅರ್ಜಿ ನಾನು ವಿಚಾರಣೆ ಮಾಡುತ್ತಿಲ್ಲ. ನನ್ನ ವಿರುದ್ಧ ಆರೋಪ ಇದ್ದಲ್ಲಿ ಕೆಎಟಿನಲ್ಲಿ ಪಾರ್ಟಿ ಮಾಡಬೇಕಿತ್ತು. ಆದರೆ ಮಾಡಿಲ್ಲ, ಇವೆಲ್ಲಾ ಸುಳ್ಳು ಆರೋಪ ಎಂದಿದ್ದಾರೆ.**

**ಇದಕ್ಕೆ ಯಾವುದೇ ರೀತಿ ಸ್ಪಂದಿಸುತ್ತಿಲ್ಲ**

**ಆದ್ರೆ ಮೊನ್ನೆ ಸಣ್ಣ ಪ್ರಕರಣಕ್ಕೆ ಸಂಬಂಧಿಸಿದಂತೆ, ಬೆಳಗಾವಿ ಎಸ್‌ಪಿ ಯವರನ್ನು ಕರೆಸಿ, ಕೆಇಟಿ ಆದೇಶಕ್ಕೆ ವಿರುದ್ಧವಾಗಿ ದೊಡ್ಡವರೆಲ್ಲ ದುಂಬಾಲು ಬಿದ್ದು, ತನಿಖೆ ಮಾಡಿ ವರದಿ ಕೊಡಿ ಅಂತ ಒತ್ತಡ ಸೃಷ್ಟಿಸಲಾಗಿದೆ. ನಮ್ಮ ಪೊಲೀಸ್ ಇಲಾಖೆ ಎಲ್ಲಿವರೆಗೆ ಬಂದಿದೆ, ಬೇಸರ ಆಗುತ್ತದೆ. ನನ್ನ ಕುಟುಂಬಕ್ಕೆ ಘಾಸಿ ಆಗುತ್ತಿದೆ. ಅಹಿಂದ ಸರಕಾರಕ್ಕೆ ತಿಳಿಸುವುದೇನೆಂದರೆ ದಲಿತ ಅಧಿಕಾರಿಗೆ ಕರ್ನಾಟಕ ಸರಕಾರದಲ್ಲಿ ರಕ್ಷಣೆ ಇಲ್ಲದ ಹಾಗಾಗಿದೆ. ನಮ್ಮಲ್ಲಿ ಎಲ್ಲಾ ಕರಿಬಸವನಗೌಡ, ಮಹೇಶ್ವರ ಗೌಡ ಇವರದ್ದೇ ನಡೆಯುತ್ತಾ ಇದೆ. ಪಾರದರ್ಶಕವಾಗಿ ನಾನು ಕೆಲಸ ಮಾಡಿದ್ದೇನೆ. ಆದರೆ ಮುಂದಿನ ದಿನಗಳಲ್ಲಿ ಯಾವುದೇ ರೀತಿಯ ಅವಘಡ ಆಗುವುದಕ್ಕೆ ಕಾರಣ ಮಾಡಿಕೊಡಬೇಡಿ ಎಂದು ಫ್ಯಾನ್ ಕಡೆ ಕೈ ತೋರಿಸಿದ್ದಾರೆ.**

ಕೆಇಟಿ ಆದೇಶ ಬರುವವರೆಗೂ ದಯವಿಟ್ಟು ಸುಮ್ಮನಿರಿ, ಆಮೇಲೆ ಅದರಂತೆ ಕಾನೂನಿಗೆ ನಾನೂ ತಲೆಬಾಗುತ್ತೇನೆ ಎಂದು ಡಿಜಿ, ಐಜಿಪಿ ಆಗಿರುವ ಉಮೇಶ್ ಕುಮಾರ್ ಅವರಲ್ಲಿ ಮನವಿ ಮಾಡಿದ್ದಾರೆ.


# ಸಿಎಂ ಆಗಮನಕ್ಕೂ ಮುನ್ನ ತಂಪೆರೆದ ಮಳೆರಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಕ್ಷೇತ್ರದಲ್ಲಿನ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲು ಸಿಎಂ ಸಿದ್ದರಾಮಯ್ಯ ಆಗಮನಕ್ಕೂ ಒಂದು ದಿನದ ಮುಂಚಿತವಾಗಿ ತಂಪೆರೆದ ಮಳೆರಾಯ ಶುಭ ಸೂಚನೆ ನೀಡಿದ್ದಾನೆ ಎಂದು ಕಾರ್ಯಕರ್ತರು ಹರ್ಷಗೊಂಡಿದ್ದಾರೆ. ಸೋಮವಾರ ಮಧ್ಯಾಹ್ನ ಸುರಿದ ಮಳೆಯಿಂದ ಬಿಸಿಲ ಬೇಗೆಯಲ್ಲಿ ಹೈರಾಣಾಗಿದ್ದ ಜನರಿಗೆ ತಂಪೆರೆದಂತಾಗಿದೆ, 110 ಕೆರೆಗಳಿಗೆ ನೀರು ಮಹತ್ವಾಕಾಂಕ್ಷಿ ಯೋಜನೆಗೆ ಸಿಎಂ ಚಾಲನೆ ನೀಡುವ ಮುಂಚಿತವಾಗಿಯೇ ಮಳೆರಾಯ ಧರೆಗಿಳಿಯುವ ಮೂಲಕ ಸ್ವಾಗತ ಕೋರಿದ್ದಾನೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಕಾರ್ಯಕ್ರಮಕ್ಕೆ ಸಕಲ ಸಿದ್ಧತೆ ಪೂರ್ಣಗೊಂಡಿದ್ದು ಪೊಲೀಸ್ ಬಿಗಿ ಬಂದೋಬಸ್ತ್ ಕಾರ್ಯ ಚುರುಕಾಗಿದೆ. ಪಟ್ಟಣದ ದೇವರಾಜು ಅರಸು ಕ್ರೀಡಾಂಗಣದಲ್ಲಿ ವೇದಿಕೆ ಸಿದ್ಧವಾಗಿದ್ದು ಸುತ್ತಲೂ ಬಿಗಿಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ, ಈಗಾಗಲೇ ಸಕಲ ಭದ್ರತೆ ಪರಿಶೀಲನೆ ನಡೆದಿದ್ದು ಕಾರ್ಯಕ್ರಮ ಮುಕ್ತಾಯದ ಹಂತದವರೆಗೂ ಪೊಲೀಸ್ ಸರ್ಪಗಾವಲಿರಿಸಲಾಗಿದೆ.



ಜಲಕ್ಷಾಮ ನೀಗಿಸಲು ಕ್ಷೇತ್ರಕ್ಕೆ ಆಗಮಿಸುತ್ತಿರುವ ಸಿಎಂ ಸಿದ್ದರಾಮಯ್ಯ ಅವರ ದೃಢ ಸಂಕಲ್ಪ ಹಾಗೂ ಶಾಸಕ ಗಣೇಶ್ ಪ್ರಸಾದ್ ಅವರ ಜನಪರ ಕೋರಿಕೆ ಕೈಗೂಡುವ ಭರವಸೆಯ ಪುಷ್ಟಿಗೆ ಮಳೆರಾಯನೇ ಸಾಕ್ಷಿಯಾಗಿದ್ದಾನೆ ಎಂದು ಕಾರ್ಯಕರ್ತರಾದ ಶ್ರೀನಿವಾಸ್ ಚಿರಕನಹಳ್ಳಿ ಹಾಗೂ ಮಡಹಳ್ಳಿ ಮಣಿ ಸಂತಸ ಹಂಚಿಕೊಂಡಿದ್ದಾರೆ.

## ಸರ್ವ ವರ್ಗಗಳ ಶಾಂತಿಗೆ ಮುನ್ನುಡಿ ಬರೆದವರು ಬಸವಣ್ಣ: ಚಂದ್ರಯ್ಯ ಬಣ್ಣನೆ

# ಸಮಾಜದ ಏಳಿಗೆಗಾಗಿ ಹಗಲಿರುಳು ಶ್ರಮಿಸಿದರು

• ಉದಯವಾಹಿನಿ, ರಾಮನಗರ

ಅನುಭವ ಮಂಟಪದ ಮೂಲಕ ನವ ಸಮಾಜ ನಿರ್ಮಾಣಕ್ಕೆ ಅಡಿಗಲ್ಲು ಹಾಕಿ ಸಮಾಜದ ಎಲ್ಲಾ ವರ್ಗಗಳ ಸುಖ ಶಾಂತಿಗೆ ಮುನ್ನುಡಿ ಬರೆದವರು ಜಗಜ್ಯೋತಿ ಬಸವೇಶ್ವರರು ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಬಣ್ಣಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಂದಾಯ ಭವನ ಆವರಣದಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಜಗಜ್ಯೋತಿ ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಹಿಂದೆ ಸಾಹಿತ್ಯವು ಕೇವಲ ಪಂಡಿತರಿಗೆ ಮತ್ತು ಬುದ್ಧಿವಂತರಿಗೆ ಮಾತ್ರ ಅರ್ಥವಾಗುವ ಭಾಷೆಯಲ್ಲಿತ್ತು. ಬಸವಣ್ಣನವರು ಅದನ್ನು ಗಮನಿಸಿ, ಸಮಾಜದ ದೋಷಗಳನ್ನು ತಿದ್ದಲು ಅತ್ಯಂತ ಸರಳವಾದ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆಗೆ ನಾಂದಿಯಾಡಿದರು ಬಸವಣ್ಣನವರು ಎಂದರು. ಧಾರ್ಮಿಕ ಮತ್ತು ಸಾಂಸ್ಕೃತಿಕ ಆಚರಣೆಗಳಷ್ಟೇ ಅಲ್ಲದೆ, ಜೀವನೋಪಾಯಕ್ಕಾಗಿ ಮಾಡುವ ಕೆಲಸವನ್ನು ಅತ್ಯಂತ ಶ್ರದ್ಧೆಯಿಂದ ಮಾಡಬೇಕು ಎಂಬ 'ಕಾಯಕ' ತತ್ವವನ್ನು ಅವರು ಬೋಧಿಸಿದರು.

ಒಬ್ಬ ವ್ಯಕ್ತಿಯ ವ್ಯಕ್ತಿತ್ವವು ಎಲ್ಲಾ ರಂಗಗಳಲ್ಲಿಯೂ ಸಮಗ್ರವಾಗಿ ರೂಪಗೊಳ್ಳಬೇಕಾದರೆ ವಚನಗಳ ಚಿಂತನೆ ಅತ್ಯಗತ್ಯ ಎಂದು ಬಸವಣ್ಣ ಸಾರಿದರು. ಎಲ್ಲರೂ ಅವರ ಚಿಂತನೆಗಳನ್ನು ಪಾಲಿಸಬೇಕು ಎಂದರು. ವಿದ್ವಾನ್ ಚಂದ್ರಶೇಖರಯ್ಯ ಉಪನ್ಯಾಸ ನೀಡಿ, ಬಸವಣ್ಣನವರು ತಮ್ಮನ್ನು ತಾವು ತಿದ್ದುವ ಮೂಲಕ ಸಮಾಜವನ್ನು ತಿದ್ದಿದರು. ವಚನಗಳ ಮೂಲಕ ಬದುಕಿನ ದಾರಿಯನ್ನು ಜನರಿಗೆ ಸನ್ಮಾರ್ಗದಲ್ಲಿ ತೋರಿಸಿಕೊಟ್ಟಿದ್ದಾರೆ. 12ನೇ ಶತಮಾನ ಇಡೀ ವಿಶ್ವದಲ್ಲಿ ಸುವರ್ಣಾಕ್ಷರದಲ್ಲಿ ಬರೆದಿಡುವ ಕಾಲ. ಅಂದಿನ ಅನುಭವ ಮಂಟಪದಲ್ಲಿ ಎಲ್ಲಾ ಜಾತಿ ವರ್ಗದವರಿಗೆ ಅವಕಾಶ ಕಲ್ಪಿಸಿಕೊಟ್ಟು ಅಂದೇ ಸಮಾನತೆಯನ್ನು ಸಾರಿದ್ದರು. ಅದು ಇಂದಿನ ಸಂಸತ್‌ಗೆ ಮಾದರಿಯಾಗಿದೆ.

ಧರ್ಮ ಸಂಘರ್ಷವನ್ನು ತಡೆಯಲು ದಯೆಯುಳ್ಳ ಧರ್ಮ ಸ್ಥಾಪನೆಗೆ ಅಡಿಗಲ್ಲು ಹಾಕಿದವರು ಬಸವಣ್ಣನವರು ಅವರ ವಚನಗಳನ್ನು ಅರ್ಥ ಮಾಡಿಕೊಂಡು ಅವರ ಮಾರ್ಗದರ್ಶನದಲ್ಲಿ ಮುನ್ನಡೆದರೆ ವಿಶ್ವದಲ್ಲಿ ಶಾಂತಿ ನೆಲೆಸುತ್ತದೆ. ಜಾತಿ, ಮತ, ಕಂದಾಚಾರದ ವಿರುದ್ಧ ಗಟ್ಟಿ ಧ್ವನಿ ಎತ್ತಿದವರು ಬಸವಣ್ಣನವರು. ಭಾರತದ ಇತಿಹಾಸದಲ್ಲಿ ಅನುಪಮ ಮೇದಾವಿ ಅವರು ಸಮಾಜದ ಏಳಿಗೆಗಾಗಿ ಹಗಲಿರುಳು ಶ್ರಮಿಸಿದರು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೆ. ಸತೀಶ್ ಮಾತನಾಡಿ, ನುಡಿದಂತೆ ನಡೆದು ಯಾವ ಪದವಿಗೂ ಆಸೆ ಪಡೆದೆ ಜನರಲ್ಲಿ ಭಕ್ತಿಯ ಬೀಜಬಿತ್ತಿ ಅಜ್ಞಾನದ ಕಡೆ ಜನರು ತೆರಳದಂತೆ ನವ ಸಮಾಜ ನಿರ್ಮಾಣಕ್ಕೆ ಸಾಕ್ಷಿಯಾಗಿ ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯ ಕೊಡುಗೆ ನೀಡಿದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ಸಮಾಜ ಸುಧಾರಣೆಗಾಗಿ ಎಲ್ಲಾ ಜಾತಿ ಧರ್ಮಗಳನ್ನು ಒಂದೆಡೆ ಸೇರಿಸಿ ಸಾಮಾಜಿಕ ಆಂದೋಲನ ನಡೆಸಿ ಬದಲಾವಣೆಯತ್ತ ಸಮಾಜವನ್ನು ಕೊಂಡೊಯ್ದರು.

ಬದಲಾವಣೆಯತ್ತ ಸಮಾಜವನ್ನು ಕೊಂಡೊಯ್ಯಬೇಕು ಎಂಬ ಮಹಾದಾಸೆ ಅವರಲ್ಲಿತ್ತು. ಎಂದು ತಿಳಿಸಿದರು. ಬಸವ ಜಯಂತಿ ಕಾರ್ಯಕ್ರಮದಲ್ಲಿ ಬಿಡದಿ ರೇಣುಕಪ್ಪ, ಕಾಕೋಳು ಶೈಲೇಶ್, ತಂಡದವರಿಂದ ವಚನ ಗಾಯನ ನಡೆಸಲಾಯಿತು. ಇದೇ ಸಂದರ್ಭದಲ್ಲಿ ಸಮಾಜದ ಮುಖಂಡರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.



ಉದಯವಾಹಿನಿ ಚಿತ್ರ

> ತಮ್ಮ ವಚನಗಳ ಮೂಲಕವೇ ಸಮಾಜದಲ್ಲಿ ಬಹುದೊಡ್ಡ ಬದಲಾವಣೆ ತರಲು ಬಯಸಿದವರು ಬಸವಣ್ಣನವರು ವಚನಗಳ ಮೂಲಕ ಜ್ಞಾನಭಂಡಾರವನ್ನು ಬಿತ್ತಿ ಶಿಲ್ಪದಂತೆ ಜ್ಞಾನವನ್ನು ಕೆತ್ತಿ ಮನುಕುಲಕ್ಕೆ ಜ್ಞಾನ ಬುತ್ತಿ ತುಂಬಿದರು. ಅವರು ಕೊಟ್ಟ ಜ್ಞಾನ ಮನುಕುಲದ ಸಾಮಾಜಿಕ ಒಗ್ಗಟ್ಟಿಗೆ ಇಂದು ಬುನಾದಿಯಾಗಿದೆ. ವಿಶ್ವಗುರು ಬಸವಣ್ಣನವರ ದಾರಿಯಲ್ಲಿ ಸಾಗಿದರೆ ಸಮಾಜ, ಜೀವನ ಸುಖಕರವಾಗಿರುತ್ತದೆ. ಅವರ ತತ್ವ, ಆದರ್ಶಗಳು, ಚಿಂತನೆಗಳು ಇಂದಿಗೂ ಪ್ರಸ್ತುತವಾಗಿದೆ.
>
> – ಎಂ.ಎಸ್. ಶಂಕರಪ್ಪ ಅಖಿಲ ಭಾರತ ವೀರಶೈವ ಮಹಾಸಭಾ ರಾಮನಗರ ತಾಲ್ಲೂಕು ಅಧ್ಯಕ್ಷ ಪೋಲೀಸ್

> ಬದಲಾವಣೆಯತ್ತ ಸಮಾಜವನ್ನು ಕೊಂಡೊಯ್ಯಬೇಕು ಎಂಬ ಮಹಾದಾಸೆ ಬಸವಣ್ಣನವರಲ್ಲಿತ್ತು. ನುಡಿದಂತೆ ನಡೆದು ಯಾವ ಪದವಿಗೂ ಆಸೆ ಪಡೆದೆ ಜನರಲ್ಲಿ ಭಕ್ತಿಯ ಬೀಜಬಿತ್ತಿ ಶರಣರು ಅಜ್ಞಾನದ ಕಡೆ ತೆರಳದಂತೆ ನವ ಸಮಾಜ ನಿರ್ಮಾಣಕ್ಕೆ ಸಾಕ್ಷಿಯಾಗಿ ಕನ್ನಡ ಸಾಹಿತ್ಯಕ್ಕೆ ವಚನ ಸಾಹಿತ್ಯ ಕೊಡುಗೆ ನೀಡಿದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ.
>
> – ಎಚ್.ಎಸ್. ಯೋಗಾನಂದ್ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ

# ವಚನಗಳ ಮೂಲಕ ಸಮಾಜ ತಿದ್ದಿದ್ದ ಬಸವೇಶ್ವರರು : ತಹಶೀಲ್ದಾರ್

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ವಚನಗಳ ಮೂಲಕ ಬಸವಣ್ಣ ಸಮಾಜ ತಿದ್ದುವ ಕೆಲಸ ಮಾಡಿದ್ದಾರೆ ಎಂದು ತಹಶೀಲ್ದಾರ್ ತನ್ಮಯ್ ತಿಳಿಸಿದರು. ಪಟ್ಟಣದ ತಾಲ್ಲೂಕು ಕಚೇರಿ ಸಭಾ ಭವನದಲ್ಲಿ ತಾಲ್ಲೂಕು ಆಡಳಿತ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಬಸವ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸವೇಶ್ವರರು 12ನೇ ಶತಮಾನದಲ್ಲಿ ದೊಡ್ಡ ಪ್ರಮಾಣದಲ್ಲಿ ಕ್ರಾಂತಿ ಮಾಡುವ ಮೂಲಕ ಮನುಷ್ಯರನ್ನು ಮನುಷ್ಯರಂತೆ ಕಾಣಿ ಎಂದು ತಿಳಿಸಿದ್ದಾರೆ.

ಜಾತಿ, ಧರ್ಮ, ಲಿಂಗ ಮೀರಿ ವಚನಗಳನ್ನು ರಚನೆ ಮಾಡಿದ್ದಾರೆ. ಆ ವಚನಗಳು ಹಾಕಿಕೊಟ್ಟ ಮೌಲ್ಯಗಳು 21ನೇ ಶತಮಾನದಲ್ಲೂ ಪ್ರಸ್ತುತ. ಸಮಾಜ ತಿದ್ದಲು ಬಳಸಿಕೊಂಡ ಮಾಧ್ಯಮ ವಚನ. ಕೇವಲ ಪುಸ್ತಕದಲ್ಲಿ ಸಾಹಿತ್ಯ ರಚನೆ ಮಾಡುತ್ತಿದ್ದ ಸಂದರ್ಭದಲ್ಲಿ ಕನ್ನಡವನ್ನು ಹಾಡು ನಡಿಯಲ್ಲಿ ಸಾಹಿತ್ಯದ ಭಾಷೆಯನ್ನಾಗಿ ಮಾಡಿಕೊಂಡು ಎಲ್ಲರನ್ನು ತಿದ್ದುವ ಕೆಲಸ ಮಾಡಿದ್ದಾರೆ ಎಂದು ಶ್ಲಾಘಿಸಿದರು. ಬಸವಣ್ಣನ ವಚನಗಳು ಪ್ರಪಂಚ ಇರುವವರೆಗೂ ಸಾರ್ವಕಾಲಿಕವಾಗಿರುತ್ತದೆ. 12ನೇ ಶತಮಾನದಲ್ಲಿ ಸಮ ಸಮಾಜದ ಕಲ್ಪನೆ ಹಾಗೂ ಕ್ರಾಂತಿಕಾರಕ ಬದಲಾವಣೆಯನ್ನು ವಚನಗಳ ಮೂಲಕ ತಂದಿದ್ದಾರೆ.

ಅವರ ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರೂ ನಡೆಯಬೇಕು. ಜೊತಗೆ ಆದರ್ಶ ಪಾಲಿಸಿ, ಜೊತೆಗೆ ಅದರ ಸಾರಾಂಶವನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕು ಎಂದು ತಿಳಿಸಿದರು.

ವೀರಶೈವ ಸಮಾಜದ ಮುಖಂಡ ಶ್ಯಾನಡ್ರಹಳ್ಳಿ ಮಲ್ಲಿಕಾರ್ಜುನಪ್ಪ ಮಾತನಾಡಿ, ಇಂದು ಬಸವಣ್ಣನನ್ನು ಪಕ್ಷಗಳು ರಾಜಕೀಯಕ್ಕಾಗಿ ಬಳಕೆ ಮಾಡಿಕೊಳ್ಳುತ್ತಿವೆ. ಈ ನಡೆ ಸರಿಯಲ್ಲ. ಆದ್ದರಿಂದ 21 ಸಾವಿರ ವಚನಗಳನ್ನು ಬರೆದಿರುವ ಬಸವಣ್ಣನ ತತ್ವ ಆದರ್ಶ ಇಟ್ಟುಕೊಂಡು ರಾಜಕೀಯ ಮಾಡಬೇಕು. ಜೊತೆಗೆ ವಚನಗಳ ಮಾರ್ಗದರ್ಶನದಂತೆ ನಡೆಯಬೇಕು. ಅಂಬೇಡ್ಕರ್ ಸಂವಿಧಾನ ಬರೆದು ದೇಶ ಉದ್ಧಾರ ಮಾಡಿದಂತೆ ಬಸವಣ್ಣ ವಚನಗಳ ಮೂಲ ಸಮಾಜ ಬದಲಾವಣೆ ತಂದಿದ್ದಾರೆ. ಆದ್ದರಿಂದ ಪ್ರತಿ ನಿತ್ಯ ಬಸವಣ್ಣನ ವಚನ ಓದಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಾನವ ಬಂಧುತ್ವ ವೇದಿಕೆ ಜಿಲ್ಲಾ ಸಂಚಾಲಕ ಸುಭಾಷ್ ಮಾಡ್ರಹಳ್ಳಿ ಮಾತನಾಡಿ, ಪ್ರತಿಯೊಬ್ಬರಲ್ಲೂ ಸೋದರತೆ ಭಾವನೆ ಮೂಡಿಸಿದ ಬಸವಣ್ಣ ಸಮಾಜಕ್ಕೆ ಮಾರ್ಗದರ್ಶಕರಾಗಿದ್ದಾರೆ. ಕಾಯಕ ನಿಷ್ಠೆಯಿಂದ ಬಸವಣ್ಣನವರನ್ನಹ ಇಂದು ಇಡೀ ಪ್ರಪಂಚವೇ ಒಪ್ಪಿದೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ರಂಗೂಪುರ ನಾಗರಾಜು, ಟಿಎಪಿಸಿಎಂಎಸ್ ಅಧ್ಯಕ್ಷ ಮಡಿವಾಳಪ್ಪ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಮಡಿವಾಳಪ್ಪ, ಕಾಡಾ ಮಾಜಿ ಅಧ್ಯಕ್ಷ ಎಚ್.ಎಸ್.ನಂಜಪ್ಪ, ತಾಪಂ ಇಓ ಷಣ್ಮುಗಂ, ಬಿಓ ಸ್ವಾಮಿ, ಟಿಎಚ್‌ಓ ಡಾ.ಅಲೀಂ ಪಾಷಾ, ಸಿಡಿಪಿಓ ಹೇಮಾವತಿ, ವೀರಶೈವ ಲಿಂಗಾಯತ ಮಹಾ ಸಭಾ ತಾಲ್ಲೂಕು ಅಧ್ಯಕ್ಷ ಕಮರಹಳ್ಳಿ ರವಿ, ಪುರಸಭೆ ಮಾಜಿ ಉಪಾಧ್ಯಕ್ಷ ಅಣ್ಣಯ್ಯಸ್ವಾಮಿ, ಹಂಗಳ ಎಚ್.ಎಂ.ನಂದೀಶ್, ಗುರುಪ್ರಸಾದ್, ಮಡಹಳ್ಳಿ ಮಣಿ, ಹೊಂಗಳ್ಳಿ ಪ್ರಸಾದ್, ನಮೋ ಮಂಜು, ಆರ್.ಸೋಮಣ್ಣ, ಗಿರೀಶ್ ಲಕ್ಕೂರು ಸೇರಿದಂತೆ ಹಲವು ಮಂದಿ ಹಾಜರಿದ್ದರು.


# ಸೌಹಾರ್ದದಿಂದ ರಾಜಕೀಯ ಶಕ್ತಿ

• ಉದಯವಾಹಿನಿ, ಮೈಸೂರು

ದಲಿತ ಸಮುದಾಯದವರು ರಾಜಕೀಯ ಶಕ್ತಿ ಹೊಂದಬೇಕೆಂಬ ಅಂಬೇಡ್ಕರ್ ಆಶಯಕ್ಕೆ ಒಳಮೀಸಲಾತಿ ಕಿತ್ತಾಟ ಹಾನಿ ಮಾಡುತ್ತಿದೆ ಎಂದು ಮಂಡ್ಯದ ರಾಮ ಮನೋಹರ ಲೋಹಿಯಾ ವಿಚಾರ ವೇದಿಕೆ ಅಧ್ಯಕ್ಷ ಬಿ.ಎಸ್.ಶಿವಣ್ಣ ಅಭಿಪ್ರಾಯಪಟ್ಟರು. ದಲಿತ ಸಂಘರ್ಷ ಸಮಿತಿ ಮೈಸೂರು ವಿಭಾಗದಿಂದ ಇಲ್ಲಿನ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಭಾನುವಾರ ನಡೆದ ಬಿ.ಆರ್.ಅಂಬೇಡ್ಕರ್ 135ನೇ ಜಯಂತಿ, ಸಮಕಾಲೀನ ಭಾರತದಲ್ಲಿ ಬಿ.ಆರ್ ಅಂಬೇಡ್ಕರ್ ಅವರ ರಾಜಕೀಯ ಚಿಂತನೆಗಳ ಪ್ರಸ್ತುತತೆ ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.


ಸಮುದಾಯವು ಶಿಕ್ಷಣ ಹಾಗೂ ರಾಜಕೀಯ ಸ್ಥಾನಮಾನಕ್ಕೆ ಸಂಘಟಿತವಾಗಿ ಹೋರಾಡಬೇಕು ಎನ್ನುವುದು ಬಾಬಸಾಹೇಬರ ಆಶಯವಾಗಿತ್ತು. ಪರಸ್ಪರರ ಬಗ್ಗೆ ಉದಾರತೆ ತೋರುವುದು, ಸೌಹಾರ್ದದಿಂದ ಸಮಸ್ಯೆ ಬಗೆಹರಿಸಿಕೊಂಡರೆ ಮಾತ್ರ ದೇಶ ನಡೆಸುವ ಪ್ರಜೆಗಳಾಗುತ್ತೀರಿ. ಇಲ್ಲದಿದ್ದರೆ ಇರುವ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತೀರಿ ಎಂದು ಎಚ್ಚರಿಸಿದರು.

**ನೋಟುಗಳಲ್ಲಿ ಬಾಬಾಸಾಹೇಬ್ ಇರಲಿ:** ದೇಶದ ನೋಟುಗಳಲ್ಲಿ ಮಹಾತ್ಮ ಗಾಂಧೀಜಿ ಜತೆಯಲ್ಲಿ ಬಿ.ಆರ್.ಅಂಬೇಡ್ಕರ್ ಅವರ ಫೋಟೊಗೂ ಆದ್ಯತೆ ನೀಡಬೇಕು. ಅಂಬೇಡ್ಕರ್ ಭಾವಚಿತ್ರವನ್ನು ಹತ್ತಿರ ಸೇರಿಸಿಕೊಳ್ಳದ ಮನಸ್ಥಿತಿಯ ಜನರಿದ್ದು, ನೋಟಿನ ಮೂಲಕವಾದರೂ ಜನರು ಅವರನ್ನು ಮುಟ್ಟಲಿ. ಅವರ ಸೇವೆಯನ್ನು ಸ್ಮರಿಸುವಂತಾಗಲಿ. ಈ ಬಗ್ಗೆ ಸಂಬಂಧಿಸಿದ ಎಲ್ಲಾ ಸಂಸ್ಥೆಗಳಿಗೂ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಸಮುದಾಯ ಈ ಬಗ್ಗೆ ದನಿ ಎತ್ತಬೇಕು ಎಂದು ಒತ್ತಾಯಿಸಿದರು. ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಬಿ.ಆರ್.ಅಂಬೇಡ್ಕರ್, ಸಂವಿಧಾನ ಕುರಿತ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಿದರು. ಪ್ರಥಮ ಮೂರು ಸ್ಥಾನ ಪಡೆದವರಿಗೆ ವೈಯಕ್ತಿಕವಾಗಿ ಟ್ಯಾಬ್‌ಗಳನ್ನು ನೀಡಿದರು.


ಉದಯವಾಹಿನಿ ಚಿತ್ರ

# ಭಾರತದ ಸಂಸ್ಕೃತಿಗೆ ವಿಶ್ವದ ಮೆಚ್ಚುಗೆ: ಸಚಿವ

• ಉದಯವಾಹಿನಿ, ಕಿಕ್ಕೇರಿ


ಉದಯವಾಹಿನಿ ಚಿತ್ರ

ಭಾರತ ಸನಾತನ ಸಂಸ್ಕೃತಿಯ ತಾಯಿಬೇರಾಗಿದ್ದು, ಇಡೀ ವಿಶ್ವವೇ ಮೆಚ್ಚಿ ಗೌರವಿಸುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು. ಹೋಬಳಿಯ ತುಳಸಿ ಗ್ರಾಮದಲ್ಲಿ ಬಸವೇಶ್ವರ ದೇಗುಲ ಉದ್ಘಾಟನೆ, ವಿಮಾನ ಗೋಪುರ, ಕಳಸ ಪ್ರತಿಷ್ಠಾಪನೆ ಮಹೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ಜಗತ್ತಿನಲ್ಲಿ ಬಲುದೊಡ್ಡ ರಾಷ್ಟ್ರ ನಮ್ಮದು. ಅನೇಕ ವೈವಿಧ್ಯವನ್ನು ಹೊಂದಿದ್ದರೂ ಧಾರ್ಮಿಕ, ಸಂಸ್ಕಾರದಲ್ಲಿ ಒಳಿತಿಗಾಗಿರುವ ಆಶಯ ಮಾತ್ರ ಒಂದಾಗಿದೆ. ಗ್ರಾಮಗಳಲ್ಲಿ ಸಾಮರಸ್ಯ ಬೆಸೆಯಲು ದೇಗುಲ ಪರಂಪರೆ, ಧಾರ್ಮಿಕ, ಆಧ್ಯಾತ್ಮಿಕ ಆಚರಣೆಯ ನಂಬುಗೆ ವಿಶೇಷವಾಗಿದೆ. ಹಿರಿಯರ ಆದರ್ಶವನ್ನು ಪಾಲಿಸಲು ಗ್ರಾಮೀಣ ಯುವಕರ ಮನಸ್ಸು ಒಂದಾಗಿರುವುದು ಆರೋಗ್ಯಕರ ಬೆಳವಣಿಗೆ ಎಂದರು. ದೇಗುಲ, ಧರ್ಮದ ವಿಚಾರದಲ್ಲಿ ರಾಜಕೀಯ ಬೇಡ. ಯುವಕರು ಜಾಗರೂಕರಾಗಿ ಸನ್ನಡತೆಯಿಂದ ಧರ್ಮ, ಭಗವಂತನ ಆರಾಧನೆಗೆ ಮುಂದಾಗಿ ಎಂದು ಸಲಹೆ ನೀಡಿದರು.

ಗ್ರಾಮವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಿ ವಿವಿಧ ರಂಗವಲ್ಲಿ ಬಿಡಿಸಿ, ತಳಿರು ತೋರಣಗಳಿಂದ ಶೃಂಗರಿಸಲಾಗಿತ್ತು. ಅನ್ನ ದಾಸೋಹ ಏರ್ಪಡಿಸಲಾಗಿತ್ತು. ತೊಳನೇಶ್ವರ, ಬಸವೇಶ್ವರ, ಮಹಾಗಣಪತಿ, ಸುಬ್ರಹ್ಮಣ್ಯ, ವಿಮಾನ ಕಳಸ, ಮಹಾಕುಂಭಾಭಿಷೇಕ ಸನ್ನಿವೇಶ ಸವಿಯಲು ತುಳಸಿ, ತುಳಸಿಗೇಟ್, ಅಂಕನಹಳ್ಳಿ, ಐಕನಹಳ್ಳಿ, ಭದ್ರನಕೊಪ್ಪಲು, ಬಸವನಹಳ್ಳಿ ಸೇರಿದಂತೆ ವಿವಿಧೆಡೆಯಿಂದ ಭಕ್ತರು ಭಾಗವಹಿಸಿದ್ದರು.

# ಮಳೆ ಅಭಾವ; ಬರಿದಾಗುತ್ತಿದೆ ವಂಡಮಾನ್ ಡ್ಯಾಂ

• ಉದಯವಾಹಿನಿ, ಚೇಳೂರು


ಉದಯವಾಹಿನಿ ಚಿತ್ರ

ತಾಲ್ಲೂಕಿನ ಪ್ರಮುಖ ಜಲಮೂಲಗಳಲ್ಲಿ ಒಂದಾದ ರಾಶ್ಚೆರುವು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಿಗೆವಾರಿಗುಟ್ಟ ಗ್ರಾಮದ ಬಳಿ ಇರುವ ವಂಡಮಾನ್ ಜಲಾಶಯದಲ್ಲಿ ಇತ್ತೀಚಿನ ದಿನಗಳಲ್ಲಿ ನೀರಿನ ಮಟ್ಟ ಕುಸಿದು ಬರಿದಾಗುತ್ತಿದೆ. ಈ ಭಾಗದ ಜನರ ಜೀವನಾಡಿಯಾಗಿದ್ದ ಜಲಾಶಯದಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದ್ದು, ರೈತರು ಮತ್ತು ಸಾರ್ವಜನಿಕರಲ್ಲಿ ತೀವ್ರ ಕಳವಳ ಮೂಡಿಸಿದೆ.

ವಂಡಮಾನ್ ಜಲಾಶಯವು ನೈಸರ್ಗಿಕವಾಗಿ ಅತ್ಯಂತ ಸುಂದರವಾದ ಪ್ರದೇಶದಲ್ಲಿದೆ. ಇದು ಯಾವುದೇ ನದಿಯ ಉಪನದಿ ಅಥವಾ ದೊಡ್ಡ ಕಾಲುವೆಗಳ ಸಂಪರ್ಕ ಹೊಂದಿಲ್ಲ. ಸಂಪೂರ್ಣವಾಗಿ ಮಳೆ ನೀರು ಮತ್ತು ಸುತ್ತಮುತ್ತಲ ಗುಡ್ಡಗಾಡು ಪ್ರದೇಶಗಳಿಂದ ಹರಿದು ಬರುವ ಹಳ್ಳ-ಕೊಳ್ಳಗಳನ್ನು ಅವಲಂಬಿಸಿದೆ. ಗುಡ್ಡಗಳಿಂದ ಹರಿದು ಬರುವ ನೀರು ಇಲ್ಲಿ ಸಂಗ್ರಹಗೊಂಡು, ಈ ಭಾಗದ ಸುಂದರ ಜಲಪಾತಕ್ಕೂ ಕಾರಣವಾಗಿತ್ತು. ಆದರೆ ಕಳೆದ ಮೂರು ವರ್ಷಗಳಿಂದ ಮಳೆ ಕೊರತೆಯಿಂದಾಗಿ ಜಲಾಶಯದ ಇಂದಿನ ಸ್ಥಿತಿಗೆ ಕಾರಣವಾಗಿದೆ.

ಈ ಜಲಾಶಯವು ಕೇವಲ ಪ್ರವಾಸಿ ತಾಣವಷ್ಟೇ ಅಲ್ಲದೆ, ಅರಿಗೆವಾರಿಗುಟ್ಟ ಹಾಗೂ ಸುತ್ತಮುತ್ತಲ ಹತ್ತಾರು ಹಳ್ಳಿಗಳ ಬೆನ್ನೆಲುಬು ಎಂದರೆ ತಪ್ಪಾಗಲಾರದು. ಈ ಭಾಗದ ನೂರಾರು ರೈತರ ಕೃಷಿ ಚಟುವಟಿಕೆಯು ಇದೇ ನೀರನ್ನು ಆಶ್ರಯಿಸಿದೆ.

ಈಗ ನೀರಿನ ಕೊರತೆಯಿಂದ ಬೆಳೆಗಳು ಒಣಗುತ್ತಿವೆ. ಜಲಾಶಯದಲ್ಲಿ ನೀರು ಸಮೃದ್ಧವಾಗಿದ್ದಾಗ ಸುತ್ತಮುತ್ತಲ ಗ್ರಾಮಗಳ ಬೋರ್‌ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ಸುಧಾರಿಸಿತ್ತು. ಇದೀಗ ಡ್ಯಾಂ ಬತ್ತುತ್ತಿರುವುದರಿಂದ ಬೋರ್‌ವೆಲ್‌ಗಳೂ ಬತ್ತಿ ಹೋಗುತ್ತಿದ್ದು, ಕುಡಿಯುವ ನೀರಿಗೆ ಸಂಚಕಾರ ಬರುವ ಆತಂಕ ಎದುರಾಗಿದೆ. ಇತ್ತೀಚೆಗೆ ಈ ಭಾಗದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ವಂಡಮಾನ್ ಡ್ಯಾಂಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.

ಮಳೆ ನೀರನ್ನು ಸಮರ್ಪಕವಾಗಿ ಸಂಗ್ರಹಿಸಿ, ಅದನ್ನು ಮುಂದಿನ ದಿನಗಳಲ್ಲಿ ಸುಮಾರು 62 ಹಳ್ಳಿಗಳಿಗೆ ಕುಡಿಯುವ ಉದ್ದೇಶಕ್ಕಾಗಿ ಪೂರೈಸುವ ಬೃಹತ್ ಯೋಜನೆ ರೂಪಿಸುವುದಾಗಿ ಹೇಳಿದ್ದರು. ಆದರೆ, ಮಳೆ ಇಲ್ಲದೆ ಡ್ಯಾಂ ಖಾಲಿಯಾಗುತ್ತಿರುವುದು ಈ ಮಹತ್ವಾಕಾಂಕ್ಷಿ ಯೋಜನೆಗೆ ಹಿನ್ನಡೆಯಾಗಿದೆ. ನೀರು ಸಂಗ್ರಹವಾಗದಿದ್ದರೆ ಇಷ್ಟು ದೊಡ್ಡ ಮಟ್ಟದ ಜನಸಂಖ್ಯೆಗೆ ನೀರು ಪೂರೈಸುವುದು ಹೇಗೆ ಎಂಬ ಪ್ರಶ್ನೆ ಈಗ ಎದುರಾಗಿದೆ.

## ಸಿದ್ದರಾಮಯ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಕೊಡಲು ಬರುತ್ತಿರುವುದು ಹಣಕ್ಕಾಗಿಯೇ ಹೊರತು ರೈತರ ಜೀವನ ಹಸನಾಗಿಸಲು ಅಲ್ಲವೇ ಅಲ್ಲ

# ರಾಜ್ಯದಲ್ಲಿರುವುದು ಪುಕ್ಕಟೆ ಘೋಷಣೆ ಸರ್ಕಾರ

• ಉದಯವಾಹಿನಿ, ಗುಂಡ್ಲುಪೇಟೆ

ರಾಜ್ಯದಲ್ಲಿರುವುದು ಪುಕ್ಕಟೆ ಘೋಷಣೆ ಸರ್ಕಾರವಾಗಿದೆ ಅದರ ಮುಂದಾಳತ್ವವಹಿಸಿರುವ ಸಿದ್ದರಾಮಯ್ಯ ಅವರು ಘೋಷಣೆ ಮತ್ತು ಶೋಷಣೆಯ ಸರ್ಕಾರ ಎಂಬಾಗಿ ಬದಲಾಯಿಸಿದ್ದು ಹೋದಲೆಲ್ಲಾ ಸಾವಿರಾರು ಕೋಟಿ ಪುಕ್ಕಟೆ ಘೋಷಣೆ ಮಾಡಿ ಬರುವ ಇವರಿಂದ ನೂರು ರೂಪಾಯಿ ಅನುದಾನವು ಬರುವುದಿಲ್ಲ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಲೇವಡಿ ಮಾಡಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಿದ್ದರಾಮಯ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಕೊಡಲು ಬರುತ್ತಿರುವುದು ಹಣಕ್ಕಾಗಿಯೇ ಹೊರತು ಕ್ಷೇತ್ರದ ರೈತರ ಜೀವನ ಹಸನಾಗಿಸಲು ಅಲ್ಲವೇ ಅಲ್ಲ ಎಂದು ಕಿಡಿಕಾರಿದರು.

ಸಿಎಂ ಸಿದ್ದರಾಮಯ್ಯ ಅವರದು ಎರಡು ಸ್ಟಾಟರ್ಜಿ ಇದೆ ಒಂದು ಕೈಯಲ್ಲಿ ಟೋಪಿ ಇನ್ನೊಂದು ಕೈಯಲ್ಲಿ ಘೋಷಣೆ ಸಿದ್ಧವಾಗಿರುತ್ತೆ ಹೋದಕಡೆಯಲ್ಲೆಲ್ಲಾ ಸಾವಿರಾರು ಕೋಟಿ ಪುಕ್ಕಟೆ ಭರವಸೆಗಳ ಘೋಷಣೆ ಮಾಡಿ ಬಳಿಕ ಶೋಷಣೆ ಮಾಡ್ತಾರೆ, ಪದೇ ಪದೇ 20 ಸಾವಿರ ಕೋಟಿ ಬಿಡುಗಡೆ ಮಾಡಿದ್ದೀವಿ ಅಂತಾರೆ ಆದರೆ ಅಭಿವೃದ್ಧಿ ಕುರಿತಾಗಿ ಪ್ರಶ್ನಿಸಿದರೆ ದಾಬಾಯಿಸುತ್ತಾರೆ, ಪ್ರಶ್ನೆ ಕೇಳಿದವರ ಮೇಲೆ ಉರಿದು ಬೀಳುವುದು ಬಿಟ್ಟರೆ ಬೇರೇನೂ ಗೊತ್ತಿಲ್ಲ ಎಂದು ಟೀಕಿಸಿದರು.

ಕಾಂಗ್ರೆಸ್ ನಾಯಕರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು ಹಾಗೆಯೇ ಹಸಿಹಸಿ ಸುಳ್ಳು ಹೇಳುವುದರಲ್ಲಿ ಸಿದ್ದರಾಮಯ್ಯ ಪಾರಂಗತರು ಎಂದು ನೇರ ವಾಗ್ದಾಳಿ ನಡೆಸಿದರು. ಕಾಂಗ್ರೆಸ್‌ಗೆ ಬಹಳ ದಿನಗಳತನಕ ಉಳಿಗಾಲವಿಲ್ಲ ಹಾಗಾಗಿ ಜೀವಂತವಾಗಿದೆಯೇ ಇಲ್ಲವೇ ಎಂಬುದನ್ನ ಜನರೇ ತೀರ್ಮಾನಿಸಬೇಕಿದೆ, ಪರಿಶಿಷ್ಟ ಜಾತಿಯನ್ನ ಕಾಂಗ್ರೆಸ್ಸಿನ ಮತಬ್ಯಾಂಕ್ ಎಂದು ತೀರ್ಮಾನಿಸಿದ್ದ ಕೆಲ ನಾಯಕರಿಗೆ ಈಗಾಗಲೇ ಬಿಸಿ ಮುಟ್ಟಿದೆ, ಸರ್ಕಾರ ಮಾಡಿದ ದ್ರೋಹವನ್ನ ಜನತೆ ಮರೆಯುವುದಿಲ್ಲ ಎಂದರು. ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದ ಬಳಿಕ ಎಸ್ಸಿಪಿ ಟಿಎಸ್ಪಿ ಅನುದಾನದ ಒಂದು 1 ಲಕ್ಷ 50 ಸಾವಿರ ಕೋಟಿ ಹಣವನ್ನ ಸದ್ಬಳಕೆ ಮಾಡಲು ಬಿಡದೆ 78 ಸಾವಿರ ಕೋಟಿ ಹಣವನ್ನ ಬೇರೆ ಬೇರೆ ಇಲಾಖೆಗಳಿಗೆ ನೀಡಿ ದಲಿತರಿಗೆ ಅನ್ಯಾಯ ಮಾಡಿದ್ದಾರೆ. ಇನ್ನುಳಿದಂತೆ 53 ಸಾವಿರ ಕೋಟಿಯನ್ನ ಗ್ಯಾರಂಟಿಗಳಿಗೆ ನೀಡುವ ಮೂಲಕ ಕ್ಷಮಿಸಲಾಗದ ಪ್ರಮಾದ ಎಸಗಿದ್ದಾರೆ ಎಂದು ಗುಡುಗಿದರು. ಮಹದೇವಪ್ಪ ನಿನಗೂ ಫ್ರೀ ಕಾಕಾ ಪಾಟೀಲ್ ಗೂ ಫ್ರೀ ನನಗೂ ಫ್ರೀ ನನ್ನ ಶ್ರೀಮತಿಗೂ ಫ್ರೀ ಎಂದು ಹೇಳಿ ಜನರಿಗೆ ಮಂಕುಬೂದಿ ಎರಚಿದ್ದೆ ನಿಮ್ಮ ಸಾಧನೆ ಎಂದು ಕುಹುಕವಾಡಿದರು. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರಕಾರಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವಪ್ರಸಾದ್, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಡಾ.ನವೀನ್ ಮೌರ್ಯ, ಎಲ್.ಸುರೇಶ್, ಬಸವರಾಜು ಅಗತಗೌಡನಹಳ್ಳಿ, ಕಬ್ಬಹಳ್ಳಿ ರೇವಣ್ಣ, ಮಂಡಲ ಪ್ರಧಾನ ಕಾರ್ಯದರ್ಶಿ ಮಹೇಂದ್ರ ಗರಗನಹಳ್ಳಿ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಮೂಡ್ನಾಕೂಡು, ಕಣ್ಣೇಗಾಲ ನಾಗುಸ್ವಾಮಿ, ಶಿವು ವೀರನಪುರ, ಪುರಸಭಾ ಮಾಜಿ ಸದಸ್ಯ ನಾಗೇಶ್, ರಾಜು ಬೆಳವಾಡಿ, ಮಹೇಶ್ ಕಿರಣ್ ಸೇರಿದಂತೆ ಹಲವರು ಹಾಜರಿದ್ದರು.


ಉದಯವಾಹಿನಿ ಚಿತ್ರ

### ಅಕ್ರಮ ಗಣಿಗಾರಿಕೆಗೆ ಶಾಸಕರ ಬೆಂಬಲ

ಸ್ಥಳೀಯ ಶಾಸಕರ ಕುಮ್ಮಕ್ಕಿನ ಮೇರೆಗೆ ಅಕ್ರಮ ಗಣಿಗಾರಿಕೆ ಸಕ್ರಿಯವಾಗಿದೆ ಎಂಬ ಆರೋಪವಿತ್ತು ಇದಕ್ಕೆ ಸಂಬಂಧಪಟ್ಟಂತೆ ಕೆಲದಿನಗಳ ಹಿಂದಷ್ಟೇ ವಿಪಕ್ಷ ನಾಯಕ ಆರ್.ಅಶೋಕ್ ಅಕ್ರಮ ಗಣಿಗಾರಿಕೆ ಟಿಪ್ಪರ್ ಹಾವಳಿ ಕುರಿತಾಗಿ ಟ್ವಿಟ್ ಮಾಡಿದ್ದರು ಆದರೆ ಗುಂಡ್ಲುಪೇಟೆಯಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗೆ ಶಾಸಕರೆ ನೇರ ಬೆಂಬಲ ಕೊಡುತ್ತಿದ್ದಾರೆ ಎಂಬುದು ಸಾಭೀತಾಗುತ್ತಿದೆ . ಗಣಿಗಾರಿಕೆ ಕುರಿತು ಪ್ರಶ್ನಿಸಿದರೆ ನಾನೊಬ್ಬ ಉದ್ಯಮಿ ಅಂತ ಹೇಳುವ ಇವರು ಶಾಸಕ ಸ್ಥಾನದಲ್ಲಿರುವುದಾದರು ಯಾಕೆ ಶಾಸಕ ಸ್ಥಾನದ ಜವಾಬ್ದಾರಿ ಜೊತೆಗೆ ಉದ್ಯಮ ನಡೆಸುವ ಬದಲಾಗಿ ಸಂಪೂರ್ಣವಾಗಿ ಉದ್ಯಮದ ಮೇಲೆಯೇ ಅವಲಂಭಿತವಾಗಬಹುದು ಅಲ್ಲವೇ ಎಂದು ಕಿಡಿಕಾರಿದರು.

### ಬೆಂಗಳೂರಿಗೂ ತಟ್ಟಿದ ಜಲಕ್ಷಾಮ

ರಾಜ್ಯ ರಾಜಧಾನಿ ಬೆಂಗಳೂರಿಗೂ ಜಲಕ್ಷಾಮ ಎದುರಾಗಿದ್ದು ನಗರ ಪ್ರದೇಶವಲ್ಲದೆ ಗ್ರಾಮಾಂತರ ಪ್ರದೇಶಗಳಲ್ಲಿ ನೀರಿಗೆ ಹಾಹಾಕಾರ ಸೃಷ್ಠಿಯಾಗಿದೆ, ಆದರೆ ಸರ್ಕಾರ ಮಾತ್ರ ಅಧಿಕಾರದ ಹಿಂದೆ ದುಂಬಾಲು ಬಿದ್ದಿದೆ ಹೇಗಾದರೂ ಇನ್ನೆರಡು ವರ್ಷ ಪೂರೈಸಬೇಕು ಎಂಬ ಪ್ರಯಾಸಪಡುತ್ತಿದೆ ಇಂತಹ ಸಂದಿಜ್ಞ ಸ್ಥಿತಿಯಲ್ಲಿ ಖುರ್ಚಿಗಾಗಿ ಮುಸುಕಿನ ಗುದ್ದಾಟ ನಡೆಯುತ್ತಿದೆ ತೆರೆಮರೆಯಲ್ಲಿ ಸರ್ಕಸ್ ಮಾಡುತ್ತಿರುವ ಡಿಸಿಎಂ ಡಿಕೆ ಶಿವಕುಮಾರ್ ಆಸೆಗೆ ಸಿದ್ದರಾಮಯ್ಯ ಅವರ ನಾನೇ ಪೂರ್ಣಾವಧಿ ಸಿಎಂ ಎಂಬ ಹೇಳಿಕೆ ನಿರಾಸೆಯುಂಟುಮಾಡಿದೆ ಎಂದು ನಾಯಕರ ಕಾಲೆಳೆದರು.

# ಮಿನಿ ನ್ಯೂಸ್

## ಸಿಲಿಂಡರ್ ಸ್ಫೋಟ: ಮನೆಗೆ ಹಾನಿ

• ಉದಯವಾಹಿನಿ, ತಿಪಟೂರು

ತಾಲ್ಲೂಕಿನ ನೊಣವಿನಕೆರೆ ಹೋಬಳಿ ಮಸವನಘಟ್ಟ ಗ್ರಾಮ ಪಂಚಾಯಿತಿಯ ಮಾಟನಹಳ್ಳಿ ಗ್ರಾಮದಲ್ಲಿ ಭಾರತ್ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡ ಕಾರಣ ಎರಡು ಮನೆಗಳು ಸುಟ್ಟು ಭಸ್ಮವಾಗಿವೆ. ಲಕ್ಷಾಂತರ ರೂಪಾಯಿ ನಷ್ಟವಾಗಿದೆ.

ವೆಂಕಟರಮಣಗೌಡ ಹಾಗೂ ಸಣ್ಣತಿಮ್ಮೇಗೌಡ ಮನೆಯಲ್ಲಿದ್ದ ಸುಮಾರು 15 ಸಾವಿರ ಕೊಬ್ಬರಿ, ಲಕ್ಷಾಂತರ ಹಣ ಹಾಗೂ ಚಿನ್ನಾಭರಣ, ದಿನಸಿ ಆಹಾರ ಪದಾರ್ಥ, ಗೃಹೋಪಯೋಗಿ ವಸ್ತುಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ. ಗ್ರಾಮಸ್ಥರು ಬೆಂಕಿ ನಂದಿಸಲು ಸಾಧ್ಯವಾಗದ ಕಾರಣ ಅಗ್ನಿ ಶಾಮಕ ತುರ್ತುಸೇವೆಗೆ ತಿಳಿಸಿದರು. ನೊಣವಿನಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಧಿಕಾರ ಕೊಡುವುದು ಗೊತ್ತು, ಇಳಿಸುವುದು ಗೊತ್ತು

• ಉದಯವಾಹಿನಿ, ಮುಳಬಾಗಿಲು

ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ಕೊಡುವುದು ಗೊತ್ತು, ಕೆಳಗೆ ಇಳಿಸುವುದೂ ಗೊತ್ತು. ಮುಂದೆ ಎಲ್ಲಾ ಮುಸಲ್ಮಾನರು ನ್ಯಾಯ ಸಿಗುವವರೆಗೆ ಪಕ್ಷಾತೀತವಾಗಿ ನಸೀರ್ ಅಹಮದ್ ಪರ ನಿಲ್ಲಬೇಕು, ಕಾಂಗ್ರೆಸ್ ನಡೆಯನ್ನು ಖಂಡಿಸಬೇಕು ಎಂದು ನಗರದಲ್ಲಿ ಮುಸ್ಲಿಂ ಉಲೇಮಾಗಳು ಹೇಳಿದರು. ದಾವಣಗೆರೆ ದಕ್ಷಿಣ ವಿಧಾನಸಭೆ ಕ್ಷೇತ್ರದ ಉಪಚುನಾವಣೆ ವಿಚಾರವಾಗಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಹುದ್ದೆಯಿಂದ ನಸೀರ್ ಅಹಮದ್‌ಅವರನ್ನು ವಜಾ ಮಾಡಿರುವುದನ್ನು ಖಂಡಿಸಿ ನಗರದಲ್ಲಿ ಉಲೇಮಾಗಳು ಮುಸ್ಲಿಂ ಮುಖಂಡರ ಸಭೆ ನಡೆಸಿ ಮಾತನಾಡಿದರು.

ನಗರದ 10ನೇ ನಂಬರ್ ಕಲ್ಯಾಣ ಮಂಟಪದಲ್ಲಿ ಉಲೇಮಾಗಳಾದ ಕೋಲಾರದ ಮೌಲಾನ ಖಲೀಮುಲ್ಲಾ, ಮೊಹಮದ್‌ಅಸಾದುಲ್ಲಾ, ಆಲಂಗೀರ್ ಪಕ್ಷಾತೀತವಾಗಿ ಮುಸ್ಲಿಂ ಮುಖಂಡರ ಸಭೆಯನ್ನು ನಡೆಸಿ ಕಾಂಗ್ರೆಸ್ ನಡೆಯನ್ನು ವಿರೋಧಿಸಿದರು. ಮುಸಲ್ಮಾನರು ಮೊದಲಿನಿಂದಲೂ ಕಾಂಗ್ರೆಸ್ ಪಕ್ಷವನ್ನು ಬೆಳೆಸುತ್ತಾ, ಎಲ್ಲಾ ರೀತಿಯಲ್ಲೂ ಸಹಾಯ ಮಾಡುತ್ತಾ ಬರುತ್ತಿದ್ದಾರೆ. ಹೀಗಿರುವಾಗ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮುಸ್ಲಿಂ ಅಭ್ಯರ್ಥಿಗೆ ಪಕ್ಷದ ಟಿಕೆಟ್ ನೀಡದೆ ಅನ್ಯಾಯ ಮಾಡಿದೆ. ಇದರಿಂದ ನಸೀರ್ ಅಹಮದ್ ಬೇಸರದಿಂದ ಸಮರ್ಥ್ ಪರವಾಗಿ ಚುನಾವಣಾ ಪ್ರಚಾರಕ್ಕೆ ತೆರಳಲಿಲ್ಲ ಎಂಬ ನೆಪ ಇಟ್ಟುಕೊಂಡು ಹುದ್ದೆಯಿಂದ ವಜಾ ಮಾಡಿರುವುದು ಖಂಡನೀಯ ಎಂದರು.

## ಕಾರು, ಬೈಕ್ ಮುಖಾಮುಖಿ ಡಿಕ್ಕಿ: ಯುವಕ ಸಾವು

• ಉದಯವಾಹಿನಿ, ಬೇತಮಂಗಲ

ಸಮೀಪದ ಪಿಲ್ಲಗುಂಡ್ಲಹಳ್ಳಿ ಬಳಿ ಕಾರು ಮತ್ತು ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಯುವಕನೊಬ್ಬನು ಸ್ಥಳದಲ್ಲೇ ಮೃತಪಟ್ಟಿದ್ದು, ಬಾಲಕಿ ಗಂಭೀರ ಗಾಯಗೊಂಡಿದ್ದಾಳೆ ತಮಿಳುನಾಡಿನ ಗುಡಿಯಾತಂ ಮೂಲದ ನವೀನ್ (25) ಮೃತರು. ನಿಶಾ (10)ಗಂಭೀರ ಗಾಯಗೊಂಡಿರುವ ಬಾಲಕಿ. ನವೀನ್ ನಿಶಾ ಕೆಜಿಎಫ್‌ತಾಲ್ಲೂಕಿನ ಪೆದ್ದಪಲ್ಲಿ ಗ್ರಾಮದಲ್ಲಿರುವ ತನ್ನ ಸಂಬಂಧಿಕರ ಮನೆಗೆ ಭೇಟಿ ನೀಡಿ ವಾಪಸ್ ಹೋಗುವಾಗ ಪಿಲ್ಲಗುಂಡ್ಲಹಳ್ಳಿ ಬಳಿ ಕಾರು ಮತ್ತು ಬೈಕ್ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ನವೀನ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಾರು ಚಾಲಕ ಪರಾರಿಯಾಗಿದ್ದಾನೆ. ನಿಶಾಗೆ ಕೆಜಿಎಫ್ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಬೇತಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟೆಕಿ ಹತ್ಯೆ : ಆರೋಪಿಗಳಿಗೆ ಶೋಧ

• ಉದಯವಾಹಿನಿ, ಮೈಸೂರು

ವಿಜಯನಗರದಲ್ಲಿ ಪಬ್‌ವೊಂದರಲ್ಲಿ ಟೆಕಿ ಬಿ.ವಿ.ನಿಶಾಂತ್ (33) ಅವರನ್ನು ಎರಡನೇ ಮಹಡಿಯಿಂದ ತಳ್ಳಿ ಹತ್ಯೆ ಮಾಡಲಾಗಿದ್ದು, ರಾಕಿ ಅಲಿಯಾಸ್ ಟ್ಯಾಂಕ್ ರಾಕಿ ಸೇರಿದಂತೆ ಆರು ಮಂದಿ ವಿರುದ್ಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗೋಕುಲಂ ನಿವಾಸಿಯಾಗಿದ್ದ ನಿಶಾಂತ್ ಬೆಂಗಳೂರಿನ ವೈಟ್‌ಫೀಲ್ಡ್‌ನ ಖಾಸಗಿ ಕಂಪನಿಯಲ್ಲಿ ಸಾಫ್ಟ್‌ವೇರ್ ಇಂಜಿನಿಯರ್‌ಆಗಿದ್ದರು.

ವಾರಾಂತ್ಯವಾದ್ದರಿಂದ, ರಾತ್ರಿ ಸ್ನೇಹಿತರಾದ ಸಂದೀಪ್, ದೀಕ್ಷಿತ್ ಅವರೊಂದಿಗೆ ಪಬ್‌ಗೆ ಹೋಗಿದ್ದರು. ಮದ್ಯ ಸೇವನೆ ನಂತರ ಸಂದೀಪ್ ಅವರು ಪಕ್ಕದ ಟೇಬಲ್‌ನಲ್ಲಿದ್ದ ರಾಕಿಯನ್ನು ನೋಡಿ, 'ನಾನು ಗೊತ್ತಾಗಲಿಲ್ಲವೇ? ಸಮರ್ಥ್ ಸ್ನೇಹಿತ' ಎಂದು ಪರಿಚಯಿಸಿಕೊಂಡು ಕೈಕುಲುಕಿ ಹೊರಟಿದ್ದರು. ಈ ವೇಳೆ ಅವರ ಹಿಂದೆಯೇ ಬಂದ ವ್ಯಕ್ತಿಯೊಬ್ಬ 'ನಮ್ಮ ಬಾಸ್‌ಗೆ ಕೈ ಕುಲುಕುತ್ತೀಯಾ' ಎಂದು ಜಗಳ ತೆಗೆದು ಹಲ್ಲೆ ನಡೆಸಿದ್ದಾನೆ. ಜಗಳ ಬಿಡಿಸಲು ನಿಶಾಂತ್, ದೀಕ್ಷಿತ್ ಹೋದಾಗ ಅವರ ಮೇಲೂ ಹೊಯ್ಕೈ ನಡೆದಿದೆ. ಈ ವೇಳೆ ನಿಶಾಂತ್ ಅವರನ್ನು ಎರಡನೇ ಮಹಡಿಯಿಂದ ತಳ್ಳಿದ್ದಾರೆ. ತಲೆಗೆ ತೀವ್ರ ಪೆಟ್ಟಾದದ್ದನ್ನು ನೋಡಿದ ರಾಕಿ, ಆತನ ಸ್ನೇಹಿತರು ಕಾಲ್ಕಿತ್ತಿದ್ದಾರೆ. ವಿಜಯನಗರ ಠಾಣೆ ಪೊಲೀಸರು ಆರೋಪಿಗಳ ಶೋಧ ನಡೆಸಿದ್ದಾರೆ.

## ನೀರು ಕುಡಿಯಲು ಬಂದು ಕೆಸರಿನಲ್ಲಿ ಸಿಲುಕಿದ ಕಾಡಾನೆ

• ಉದಯವಾಹಿನಿ, ಹನೂರು

ತಾಲ್ಲೂಕಿನ ಉಡುತೊರೆ ಜಲಾಶಯದ ಹಿನ್ನೀರಿನಲ್ಲಿ ನೀರು ಕುಡಿಯಲು ಬಂದು ಕೆಸರಿನಲ್ಲಿ ಸಿಲುಕಿದ್ದ ಮೂರು ಕಾಡಾನೆಗಳನ್ನು ಅರಣ್ಯ ಇಲಾಖೆ ಅಧಿಕಾರಿಗಳು ಸುರಕ್ಷಿತವಾಗಿ ಮೇಲೆತ್ತಿದರು. ಮಲೆ ಮಹದೇಶ್ವರ ವನ್ಯಧಾಮದ ಹನೂರು ಬಫರ್ ವಲಯ ವ್ಯಾಪ್ತಿಯಲ್ಲಿರುವ ಉಡುತೊರೆ ಜಲಾಶಯಕ್ಕೆ ಮುಂಜಾನೆ ಆನೆಗಳು ನೀರು ಕುಡಿಯಲು ಬಂದು ಬಿಸಿಲಿಗೆ ಧಗೆ ತಣಿಸಿಕೊಳ್ಳಲು ಈಜಾಡಲು ಇಳಿದಿವೆ. ಈ ಸಂದರ್ಭ ಹಿನ್ನೀರಿನಲ್ಲಿ ಶೇಖರಣೆಯಾಗಿದ್ದ ಕೆಸರಿನಲ್ಲಿ ಸಿಲುಕಿಕೊಂಡಿವೆ. ಎರಡು ಆನೆ ಪ್ರಯಾಸಪಟ್ಟು ಹೊರಬಂದಿದ್ದು, ಒಂದು ಆನೆ ಕೆಸರಿನಲ್ಲಿ ಸಿಲುಕಿಕೊಂಡಿದು ಹೊರಬರಲು ತೀವ್ರ ಹೋರಾಟ ನಡೆಸಿದೆ. ಗಸ್ತಿನಲ್ಲಿದ್ದ ಸಿಬ್ಬಂದಿ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ದೌಡಾಯಿಸಿದ ಅಧಿಕಾರಿಗಳು ಹನೂರು ಅಗ್ನಿಶಾಮಕ ದಳದ ಸಿಬ್ಬಂದಿಯ ಸಹಾಯದಿಂದ ದಿನವಿಡೀ ಕಾರ್ಯಾಚರಣೆ ನಡೆಸಿದರು.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಪಶು ವೈದ್ಯಾಧಿಕಾರಿ ನಿತ್ರಾಣಗೊಂಡಿದ್ದ ಆನೆಗೆ ಚಿಕಿತ್ಸೆ ನೀಡಿದರು. ಆನೆಗಳ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೆಸರಿನಲ್ಲಿ ಸಿಲುಕಿದ್ದ ಮೂರು ಆನೆಗಳ ಪೈಕಿ ಒಂದು ಆನೆ ನಿತ್ರಾಣಗೊಂಡಿದ್ದು ಚಿಕಿತ್ಸೆ ನೀಡಲಾಗಿದೆ. ಮಹೇಂದ್ರ ಆನೆಯನ್ನು ಕರೆಸಿ ಆನೆಯನ್ನು ಮೇಲೆತ್ತಿ ಕಾಡಿಗೆ ಬಿಡಲಾಗಿದೆ. ಮೂರು ಆನೆಗಳು ಸುರಕ್ಷಿತವಾಗಿವೆ ಎಂದು ಮಲೆ ಮಹದೇಶ್ವರ ವನ್ಯಧಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಭಾಸ್ಕರ್ ಮಾಹಿತಿ ನೀಡಿದರು.

### ಇಸ್ಲಾಮಾಬಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸುತ್ತ ವ್ಯಾಪಕ ಭದ್ರತೆ ಕೈಗೊಳ್ಳಲಾಗಿದೆ

# ಯುಎಸ್-ಇರಾನ್ ನಡುವಿನ 2ನೇ ಸುತ್ತಿನ ಮಾತುಕತೆಗೆ ಸಜ್ಜು

- ಅಮೆರಿಕಾ-ಇರಾನ್ ನಡುವೆ 2ನೇ ಸುತ್ತಿನ ಮಾತುಕತೆಗೆ ಇಸ್ಲಾಮಾಬಾದ್ ಸಜ್ಜು
- ಪಾಕಿಸ್ತಾನದತ್ತ ಪ್ರಯಾಣ ಬೆಳೆಸಿರುವ ಅಮೆರಿಕಾದ ನಿಯೋಗ, ಆದ್ರೆ ಮಾತುಕತೆಯಲ್ಲಿ ಇರಾನ್ ನಾಯಕರು ಭಾಗಿಯಾಗೋದೆ ಡೌಟು
- ಹತ್ಯೆಯಾಗಿ 50 ದಿನ ಕಳೆದರೂ ಖಮೇನಿ ಅಂತ್ಯಸಂಸ್ಕಾರ ಯಾಕಿಲ್ಲ?

**ಇಸ್ಲಾಮಾಬಾದ್:** ಮಧ್ಯಪ್ರಾಚ್ಯದಲ್ಲಿನ ಉದ್ವಿಗ್ನತೆಯ ನಡುವೆ ಇಸ್ಲಾಮಾಬಾದ್‌ನಲ್ಲಿ ಅಮೆರಿಕ-ಇರಾನ್ ನಡುವಿನ ಮೊದಲ ಸುತ್ತಿನ ಮಾತುಕತೆ ವಿಫಲವಾಗಿತ್ತು. ಇದಾದ ಬೆನ್ನಲ್ಲೇ, ಏ.22ಕ್ಕೆ ಕದನವಿರಾಮವೂ ಮುಕ್ತಾಯಗೊಳ್ಳುತ್ತಿದ್ದು, ಈ ನಿಟ್ಟಿನಲ್ಲಿ ಇದೀಗ 2ನೇ ಸುತ್ತಿನ ಮಾತುಕತೆಗೆ ಇಸ್ಲಾಮಾಬಾದ್ ಸಜ್ಜಾಗಿದೆ.

ಬರೋಬ್ಬರಿ 10 ಸಾವಿರ ಪೊಲೀಸರ ಬಲದೊಂದಿಗೆ ಇಡೀ ನಗರದಲ್ಲಿ ಭದ್ರ ಕೋಟೆ ನಿರ್ಮಿಸಲಾಗಿದೆ. ಸೋಮವಾರದ (ಏ.20) ಸಂಧಾನ ಮಾತುಕತೆಯಲ್ಲಿ ಭಾಗಿಯಾಗುವ ಕುರಿತು ಇರಾನ್ ಖಚಿಪಡಿಸುವ ಮೊದಲೇ ವಿದೇಶಿ ಗಣ್ಯರ ಸ್ವಾಗತಕ್ಕೆ ಪಾಕಿಸ್ತಾನ ಸರಕಾರ ಭರದ ಸಿದ್ಧತೆ ನಡೆಸಿದೆ.

ಈ ಬಾರಿಯಾದ್ರೂ ಸಂಧಾನ ಆಗುತ್ತಾ?

**ಶಾಂತಿ ಮಾತುಕತೆ ಹಿನ್ನಲೆಯಲ್ಲಿ ಇಸ್ಲಾಮಾಬಾದ್‌ನಲ್ಲಿ ಬಿಗಿ ಭದ್ರತೆ:** ಎರಡನೇ ಹಂತದ ಶಾಂತಿ ಮಾತುಕತೆಗೆ ಇಸ್ಲಾಮಾಬಾದ್-ರಾವಲ್ಪಿಂಡಿ ಒಳಗೊಂಡ ಅವಳಿ ನಗರದಲ್ಲಿ 10 ಸಾವಿರ ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ. ಒಟ್ಟು 600 ಚೆಕ್‌ಪೋಸ್ಟ್‌ಗಳಲ್ಲಿ ಬಿಗಿ ತಪಾಸಣೆ ಕೈಗೊಳ್ಳಲಾಗಿದೆ.

ನೂರ್‌ಖಾನ್ ವಾಯುನೆಲೆ, ಇಸ್ಲಾಮಾಬಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸುತ್ತ ವ್ಯಾಪಕ ಭದ್ರತೆ ಕೈಗೊಳ್ಳಲಾಗಿದೆ. ಅಂಗಡಿ ಮುಂಗಟ್ಟು ಮುಚ್ಚಿಸುವ ಮೂಲಕ ಒಂದು ರೀತಿಯಲ್ಲಿ ಅಘೋಷಿತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ವಿದೇಶಿ ಗಣ್ಯರನ್ನು ಹೊತ್ತು ಬರುವ ವಿಮಾನಗಳ ಸುರಕ್ಷತೆ ದೃಷ್ಟಿಯಿಂದ ಅಗತ್ಯ ಭದ್ರತಾ ಕ್ರಮ ಕೈಗೊಳ್ಳಲಾಗಿದೆ.

ರಾವಲ್ಪಿಂಡಿಯಲ್ಲಿ ಡ್ರೋನ್ ಹಾರಾಟ, ಪಾರಿವಾಳಗಳ ಹಾರಾಟವನ್ನು ನಿಷೇಧಿಸಲಾಗಿದೆ. ವಿಮಾನ ನಿಲ್ದಾಣದ ಸಮೀಪದ ಕಟ್ಟಡಗಳ ಮೇಲೆ ಜನರ ಓಡಾಟ ನಿರ್ಬಂಧಿಸಲು ಭದ್ರತಾ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಇಸ್ಲಾಮಾಬಾದನಲ್ಲಿ ಹೈ ಅಲರ್ಟ್ ಘೋಷಣೆ ಮಾಡಲಾಗಿದ್ದು, ಪ್ರಮುಖ ಮಾರ್ಗಗಳ ಸಂಚಾರ ಬದಲಿಸಲಾಗಿದೆ. ವಿದೇಶಿ ಅತಿಥಿಗಳು ವಾಸ್ತವ್ಯ ಹೂಡುವ ಹೋಟೆಲ್‌ಗಳು, ಮಾತುಕತೆ ನಡೆಯುವ ಹೋಟೆಲ್ ಸಮೀಪ ಭದ್ರತೆಯನ್ನು ಹೆಚ್ಚಿಸಲಾಗಿದೆ. ವಾಹನಗಳ ನಿಲುಗಡೆ ನಿಷೇಧಿಸಲಾಗಿದ್ದು, ಸಮೀಪದ ವಸತಿ ಕಟ್ಟಡಗಳ ಮೇಲೆ ಜನರು ಸುಳಿದಾಡದಂತೆ ನಿರ್ಬಂಧಿಸಲಾಗಿದೆ.



**ಮಾತುಕತೆಗೆ ಯುಎಸ್ ಸಿದ್ಧ, ಆದ್ರೆ ಇರಾನ್ ತಿರಸ್ಕಾರ**

ಅಮೆರಿಕ ಸಹ ಈ ಕುರಿತು ಅಧಿಕೃತವಾಗಿ ಹೇಳಿಕೆ ನೀಡಿದ್ದು, ಇಸ್ಲಾಮಾಬಾದ್ ನಲ್ಲಿ ಅಮೆರಿಕ-ಇರಾನ್ ನಡುವೆ ಮಾತುಕತೆರ ನಡೆಯಲಿದ್ದು, ಅಮೆರಿಕದ ಪರವಾಗಿ ಯುಎಸ್ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ , ಟ್ರಂಪ್ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಹಾಗೂ ಜೆರೇಡ್ ಕುಶ್ನರ್ ನೇತೃತ್ವದ ನಿಯೋಗ ಭಾಗಿಯಾಗಲಿದೆ ಎಂದು ತಿಳಿಸಿದ್ದಾರೆ. ಆದಾಗ್ಯೂ, ಆದರೆ ಅಮೆರಿಕದ ಅತಿಯಾದ ಷರತ್ತುಗಳನ್ನು ವಿರೋಧಿಸಿರುವ ಇರಾನ್ ನಾಯಕರು ಸಂಧಾನ ಮಾತುಕತೆಗೆ ಬರಲು ನಿರಾಕರಿಸಿದ್ದಾರೆ ಎಂದು ಇರಾನಿನ ಮೂಲಗಳನ್ನು ಉಲ್ಲೇಖಿಸಿ ಇರಾನ್ ಸರ್ಕಾರಿ ಮಾಧ್ಯಮ ವರದಿ ಮಾಡಿದೆ.

**ಹತ್ಯೆಯಾಗಿ 50 ದಿನ ಕಳೆದರೂ ನಡೆದಿಲ್ಲ ಖಮೇನಿ ಅಂತ್ಯಸಂಸ್ಕಾರ:** ಇತ್ತ, ಇರಾನ್‌ನ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆಯಾಗಿ ಏಳು ವಾರ ಕಳೆದಿದ್ದರೂ, ಅವರ ಅಂತ್ಯಸಂಸ್ಕಾರ ಇನ್ನೂ ನೆರವೇರಿಲ್ಲದಿರುವುದು ಸದ್ಯ ಜಾಗತಿಕ ಮಟ್ಟದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ.

ಕಳೆದ ಫೆಬ್ರವರಿ 28 ರಂದು ಇಸ್ರೇಲ್ ಮತ್ತು ಅಮೆರಿಕದ ಜಂಟಿ ವಾಯುದಾಳಿಯಲ್ಲಿ ಖಮೇನಿ ಹತರಾಗಿದ್ದರು. ಸಾಮಾನ್ಯವಾಗಿ ಇಸ್ಲಾಂ ಸಂಪ್ರದಾಯದಂತೆ ಮೃತಪಟ್ಟ ತಕ್ಷಣ ಅಂತ್ಯಸಂಸ್ಕಾರ ಮಾಡಲಾಗುತ್ತದೆ. ಆದರೆ ಖಮೇನಿ ಅಂತ್ಯಸಂಸ್ಕಾರದ ವಿಷಯದಲ್ಲಿ ಇರಾನ್ ಮೇಲೆ ಇಸ್ರೇಲ್ ಮತ್ತು ಅಮೆರಿಕದ ಸತತ ಬಾಂಬ್ ದಾಳಿಗಳು ಮುಂದುವರಿಸಿರುವ ಕಾರಣ ಭದ್ರತಾ ಆತಂಕಗಳ ಕಾರ್ಮೋಡ ಕವಿದಿದೆ.

ಬೃಹತ್ ಮಟ್ಟದಲ್ಲಿ ಅಂತ್ಯಸಂಸ್ಕಾರ ಆಯೋಜಿಸಿದರೆ ಆ ಜನಸಂದಣಿಯನ್ನೇ ಗುರಿಯಾಗಿಸಿ ದಾಳಿ ನಡೆಯಬಹುದು ಎಂಬ ಭೀತಿ ಇರಾನ್ ಸರಕಾರಕ್ಕೆ ಕಾಡುತ್ತಿದೆ. ಇರಾನ್‌ನಲ್ಲಿ ಸದ್ಯ ಸಮರ ಸಂಬಂಧಿತ ಸುದ್ದಿಗಳಿಂದ ಜನರು ದಂಗೆ ಏಳದಂತೆ ತಡೆಯಲು ಕಳೆದ 50 ದಿನಗಳಿಂದ ಇಂಟರ್ನೆಟ್ ಸಂಪರ್ಕವನ್ನು ಕಡಿತಗೊಳಿಸಲಾಗಿದೆ.

ಇರಾನ್ ಆಡಳಿತವು ಖಮೇನಿ ಅವರ ಅಂತ್ಯಸಂಸ್ಕಾರವನ್ನು ಅವರ ಹುಟ್ಟೂರಾದ ಮಶಾದ್ ನಗರದಲ್ಲಿ ನಡೆಸಲು ಯೋಜಿಸುತ್ತಿದ್ದಾರೆ. ತುರ್ಕಮೆನಿಸ್ತಾನ್ ಗಡಿಯ ಸಮೀಪವಿರುವ ಈ ನಗರವು ಶಿಯಾ ಮುಸ್ಲಿಮರಿಗೆ ಅತ್ಯಂತ ಪವಿತ್ರ ಸ್ಥಳಗಳಲ್ಲಿ ಒಂದಾಗಿದೆ. ಶೀಘ್ರವೇ ಅಂತಿಮ ದಿನಾಂಕ ಹೊರಬೀಳುವ ಸಾಧ್ಯತೆಯಿದೆ ಎಂದು ವರದಿಯಾಗುತ್ತಿದೆ.

## ಟ್ರಂಪ್‌ಗೆ ಹತ್ತಿರವಾದ ಪಾಕ್ ಸೇನಾ ಮುಖ್ಯಸ್ಥ ಮುನೀರ್ : ಮೋದಿ ವಿರುದ್ಧ ಮುಗಿಬಿದ್ದ ಕಾಂಗ್ರೆಸ್

**ನವದೆಹಲಿ:** ಅಮೆರಿಕ-ಇರಾನ್ ಶಾಂತಿ ಮಾತುಕತೆಯಲ್ಲಿ ಪಾಕಿಸ್ತಾನದ ಪಾತ್ರದ ಬಗ್ಗೆ ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ ನಡೆಸಿದ್ದು, ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಭಾರಿ ನೆಚ್ಚಿನ ವ್ಯಕ್ತಿಯಾಗಿರುವುದು ಭಾರತಕ್ಕೆ ಭಾರಿ ಹಿನ್ನಡೆ ಎಂದು ಹೇಳಿದೆ.

ಇದಕ್ಕೆ ಭಾರತ ತನ್ನ ರಾಜತಾಂತ್ರಿಕ ನಿಶ್ಚಿತಾರ್ಥ ತಂತ್ರವನ್ನು ಸಂಪೂರ್ಣವಾಗಿ ಪರಿಷ್ಕರಿಸುವ ಅಗತ್ಯವಿದೆ. ಭಾರತದ ರಾಜತಾಂತ್ರಿಕ ನಿಶ್ಚಿತಾರ್ಥ ತಂತ್ರವನ್ನು ಪರಿಷ್ಕರಿಸಲು ಪ್ರಧಾನಿ ನರೇಂದ್ರ ಮೋದಿ ಸರಳವಾಗಿ ಅಸಮರ್ಥ ಎಂದು ಎಕ್ಸ್ ಪೋಸ್ಟ್‌ನಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಏಪ್ರಿಲ್ 12 ರಂದು ಈ ಮಾತುಕತೆಗಳ ಮೊದಲ ಸುತ್ತಿನ ಪೂರ್ಣಗೊಂಡ ನಂತರ, ಪಾಕಿಸ್ತಾನವು ಯುಎಇಯಿಂದ ಪಡೆದ 3.5 ಬಿಲಿಯನ್ ಡಾಲರ್ ಸಾಲವನ್ನು ಮರುಪಾವತಿಸಲು ಮತ್ತು 1.43 ಬಿಲಿಯನ್ ಡಾಲರ್ ಯುರೋಬಾಂಡ್‌ಗಳನ್ನು ಹಿಂಪಡೆಯಲು ಸೌದಿ ಅರೇಬಿಯಾ ಮತ್ತು ಕತಾರ್‌ನಿಂದ 6 ಬಿಲಿಯನ್ ಡಾಲರ್ ಸಾಲವನ್ನು ಪಡೆದುಕೊಂಡಿತು ಎಂದು ಅವರು ಗಮನಸೆಳೆದರು. ಪಾಕಿಸ್ತಾನದ ಆರ್ಥಿಕತೆಯು



ಸ್ಪಷ್ಟವಾಗಿ ತೀವ್ರ ಸಂಕಷ್ಟದಲ್ಲಿದೆ ಮತ್ತು ಅದು ಸ್ನೇಹಪರ ರಾಷ್ಟ್ರಗಳು ಅದಕ್ಕೆ ನೀಡಿದ ದಾನವನ್ನು ಅವಲಂಬಿಸಿದೆ ಎಂದು ರಮೇಶ್ ಹೇಳಿದರು. ಆದರೆ ಒಸಾಮಾ ಬಿನ್ ಲಾಡೆನ್ ಮತ್ತು ಇತರ ಭಯೋತ್ಪಾದಕರಿಗೆ ಆಶ್ರಯ ನೀಡಿದ ನಂತರ, ಅಫ್ಘಾನಿಸ್ತಾನದಲ್ಲಿ ಮಾದಕವಸ್ತು ಪುನರ್ವಸತಿ ಕೇಂದ್ರಗಳ ಮೇಲೆ ಬಾಂಬ್ ದಾಳಿ ಮಾಡಿದ ನಂತರ ಮತ್ತು ಇತ್ತೀಚೆಗೆ ಒಂದು ವರ್ಷದ ಹಿಂದೆ ಪೆಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಆಯೋಜಿಸಿದ ನಂತರ ಅದು ಈಗ ಪ್ರಮುಖ ರಾಜತಾಂತ್ರಿಕ ಪಾತ್ರವನ್ನು ವಹಿಸುತ್ತಿದೆ ಎಂದು ಕಾಂಗ್ರೆಸ್ ನಾಯಕ ಹೇಳಿದರು. ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಆಮ್ಲಜನಕವನ್ನು ಒದಗಿಸಿದ ಪ್ರಚೋದನಕಾರಿ ಮತ್ತು ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅಧ್ಯಕ್ಷ ಟ್ರಂಪ್ ಅವರ ಅತ್ಯಂತ ನೆಚ್ಚಿನ ವ್ಯಕ್ತಿಯಾಗಿರುವುದು ಭಾರತಕ್ಕೆ ವಿಶೇಷವಾಗಿ ತೀವ್ರ ಹಿನ್ನಡೆಯಾಗಿದೆ ಎಂದು ಕಾಂಗ್ರೆಸ್ ನಾಯಕ ಹೇಳಿದರು.

> ಪ್ರಧಾನಿ ಮೋದಿಯವರ ಪ್ರಾದೇಶಿಕ ಮತ್ತು ಜಾಗತಿಕ ನಿಶ್ಚಿತಾರ್ಥ ಮತ್ತು ನಿರೂಪಣಾ ನಿರ್ವಹಣೆಯ ಸಾರ ಮತ್ತು ಶೈಲಿಯು ಪಾಕಿಸ್ತಾನವನ್ನು ಪ್ರತ್ಯೇಕಿಸುವಲ್ಲಿ ವಿಫಲವಾಗಿದೆ ಎಂಬುದು ಸ್ಪಷ್ಟವಾಗಿದೆ ನವೆಂಬರ್ 2008 ರಲ್ಲಿ ಮುಂಬೈನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಡಾ. ಮನಮೋಹನ್ ಸಿಂಗ್ ಸಾಧಿಸಲು ಸಾಧ್ಯವಾದದ್ದಕ್ಕಿಂತ ಭಿನ್ನವಾಗಿದೆ.
>
> -ಜೈರಾಮ್ ರಮೇಶ್

## ಬೀದಿ ಬದಿ ಝುಲ್ ಮುರಿ ಸವಿದ ಪ್ರಧಾನಿ ಮೋದಿ

**ಝಾರ್‌ಗ್ರಾಮ್:** ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆ ಬಿರುಸಿನ ಪ್ರಚಾರ ನಡೆಸಿದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸ್ಥಳೀಯರೊಂದಿಗೆ ಬೆರೆತು ಬೀದಿ ಬದಿಯಲ್ಲಿ ಝುಲ್ ಮುರಿ ತಿಂಡಿ ತಿಂದಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದೆ.

ಬರ್ಜೋರಾ ಮತ್ತು ಬಲರಾಮ್‌ಪುರಗಳಲ್ಲಿ ಬೃಹತ್ ಸಮಾವೇಶಗಳನ್ನು ಉದ್ದೇಶಿಸಿ ಮಾತನಾಡಿದ್ದ ಪ್ರಧಾನಿ, ನಿನ್ನೆ ಮಧ್ಯಾಹ್ನದ ವೇಳೆಗೆ ಬುಡಕಟ್ಟು ಪ್ರಾಬಲ್ಯದ ಜಾರ್ಗ್ರಾಮ್ ತಲುಪಿದರು. ಅಲ್ಲಿನ ಸಮಾವೇಶದ ನಂತರ, ಹೆಲಿಪ್ಯಾಡ್ ಕಡೆಗೆ ಸಾಗುವ ದಾರಿಯಲ್ಲಿ ಪ್ರಧಾನಿಯವರು ಹಠಾತ್ ಆಗಿ ತಮ್ಮ ಬೆಂಗಾವಲು ಪಡೆಯನ್ನು ನಿಲ್ಲಿಸಲು ಸೂಚಿಸಿದರು. ಬಂಗಾಳಿ ರುಚಿಗೆ ಮನಸೋತ ಮೋದಿ ರಸ್ತೆಯ ಬದಿಯಲ್ಲಿ ಸ್ಥಳೀಯ ವ್ಯಾಪಾರಿಯೊಬ್ಬರು ಸಿದ್ಧಪಡಿಸುತ್ತಿದ್ದ ಬಂಗಾಳದ ಪ್ರಸಿದ್ಧ ತಿಂಡಿ ಝುಲ್ ಮುರಿ ಪ್ರಧಾನಿಯವರ ಗಮನ ಸೆಳೆಯಿತು.

ಕಾರಿನಿಂದ ಇಳಿದ ಮೋದಿ ಅವರು ನೇರವಾಗಿ ವ್ಯಾಪಾರಿಯ ಬಳಿಗೆ ತೆರಳಿ, ಅಲ್ಲಿಯೇ ತಯಾರಾದ ಬಿಸಿಬಿಸಿ ಮತ್ತು ಖಾರವಾದ ಝುಲ್ ಮುರಿಯನ್ನು ಸವಿದರು. ಕಡಲೆಕಾಯಿ, ಸಾಸಿವೆ ಎಣ್ಣೆ, ಈರುಳ್ಳಿ ಮತ್ತು ವಿಶೇಷ ಮಸಾಲೆಯಿಂದ ಕೂಡಿದ ಈ ತಿಂಡಿಯನ್ನು ಸವಿಯುತ್ತಾ, ಪ್ರಧಾನಿಯವರು ಸ್ಥಳೀಯ ಜನರೊಂದಿಗೆ ಕೆಲ ಕಾಲ ಮಾತನಾಡಿದರು. ದೇಶದ ಪ್ರಧಾನಿಯೇ ರಸ್ತೆ ಬದಿಯ ತಿಂಡಿಯನ್ನು ಸವಿಯುತ್ತಿರುವುದನ್ನು ಕಂಡ



ಸ್ಥಳೀಯರು ಆಶ್ಚರ್ಯ ಮತ್ತು ಸಂತೋಷ ವ್ಯಕ್ತಪಡಿಸಿದರು.

ಅನೇಕರು ಈ ಕ್ಷಣವನ್ನು ತಮ್ಮ ಮೊಬೈಲ್‌ಗಳಲ್ಲಿ ಸೆರೆಹಿಡಿದರು. ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡ ಪ್ರಧಾನಿ, ಬಂಗಾಳದ ರುಚಿ ಯಾವಾಗಲೂ ವಿಶಿಷ್ಟವಾದುದು. ಜಾಗ್ರಾಮ್‌ನ ಝುಲ್ ಮುರಿ ಅತ್ಯಂತ ಸ್ವಾದಿಷ್ಟವಾಗಿತ್ತು ಮತ್ತು ಇದು ನನ್ನ ಸುದೀರ್ಘ ದಿನದ ಪ್ರಚಾರಕ್ಕೆ ಹೊಸ ಚೈತನ್ಯ ನೀಡಿತು ಎಂದಿದ್ದಾರೆ.

ಝಾರ್‌ಗ್ರಾಮ್ ಮತ್ತು ಸುತ್ತಮುತ್ತಲಿನ ಬುಡಕಟ್ಟು ಪ್ರದೇಶಗಳಲ್ಲಿ ಜನರೊಂದಿಗೆ ಭಾವನಾತ್ಮಕ ಸಂಬಂಧ ಬೆಳೆಸಲು ಪ್ರಧಾನಿಯವರ ಈ ಸರಳ ನಡವಳಿಕೆ ಸಹಾಯ ಮಾಡಲಿದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ. ಒಟ್ಟಿನಲ್ಲಿ, ಬಂಗಾಳದ ರಾಜಕೀಯ ಸಮರದಲ್ಲಿ ಮೋದಿ ಸವಿದ ಝುಲ್ ಮುರಿ ಈಗ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ.

## ಮಹಿಳಾ ಮೀಸಲಾತಿ ಸೋಲು ದ್ರೌಪದಿ ವಸ್ತ್ರಾಪಹರಣಕ್ಕೆ ಸಮ

**ಲಕ್ನೋ:** ಮಹಿಳಾ ಮೀಸಲಾತಿ ಮಸೂದೆಗೆ ಸೋಲಾಗಿರುವುದು ಮಹಾಭಾರತದ ದ್ರೌಪದಿ ವಸ್ತ್ರಾಪಹರಣಕ್ಕೆ ಸಮ ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ವಿಪಕ್ಷಗಳ ವಿರುದ್ಧ ಕಿಡಿಕಾರಿದ್ದಾರೆ.

ಸಂಸತ್‌ನಲ್ಲಿ ಕಾಂಗ್ರೆಸ್, ಎಸ್‌ಪಿ, ಟಿಎಂಸಿ ಮತ್ತು ಡಿಎಂಕೆ ವರ್ತಿಸಿದ ರೀತಿಯು ದ್ರೌಪದಿಯ ವಸ್ತ್ರಾಪಹರಣ ದೃಶ್ಯದಂತಿತ್ತು. ವಿರೋಧ ಪಕ್ಷದ ನಾಯಕರು ಮಾಡಿದ ಬೇಜವಾಬ್ದಾರಿ ಹೇಳಿಕೆಗಳು, ಅವರು ಪ್ರದರ್ಶಿಸಿದ ನಡವಳಿಕೆ ಎಲ್ಲರಿಗೂ ತಿಳಿದಿದೆ ಎಂದು ಅವರು ಆರೋಪಿಸಿದ್ದಾರೆ. ಮುಸ್ಲಿಂ ಮಹಿಳೆಯರಿಗೆ ಪ್ರತ್ಯೇಕ ಮೀಸಲಾತಿ ಬೇಡಿಕೆಯ ಬಗ್ಗೆ ಸಮಾಜವಾದಿ ಪಕ್ಷದ ನಿಲುವಿನ ಬಗ್ಗೆ ಮಾತನಾಡಿದ ಆದಿತ್ಯನಾಥ್, ಮಹಿಳಾ ಸಬಲೀಕರಣದ ಗುರಿಯನ್ನು ಹೊಂದಿರುವ ಶಾಸನದ ಬಗ್ಗೆ ಅಪ್ರಸ್ತುತ ವಿಷಯಗಳನ್ನು ಎತ್ತುವ ಪ್ರಯತ್ನಗಳು ನಡೆಯುತ್ತಿವೆ ಎಂದಿದ್ದಾರೆ. ಸಮಾಜವಾದಿಗಳು ಸಂವಿಧಾನವನ್ನು ಪ್ರಾರ್ಥಿಸುತ್ತಾರೆ. ಆದರೆ, ಡಾ. ಬಿ.ಆರ್.ಅಂಬೇಡ್ಕರ್ ಅವರ ಮನೋಭಾವಕ್ಕೆ ವಿರುದ್ಧವಾಗಿ ವರ್ತಿಸುತ್ತಾರೆ ಎಂದು ಕುಟುಕಿದ್ದಾರೆ.



ಮಹಿಳಾ ಮೀಸಲಾತಿ ಮಸೂದೆಯು ಪ್ರಗತಿಪರ ಹೆಜ್ಜೆಯಾಗಿದ್ದು, ಅದು ಯಾರ ಹಕ್ಕುಗಳನ್ನು ಕಸಿದುಕೊಳ್ಳಲಿಲ್ಲ. ಆಡಳಿತದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸಿತು ಎಂದು ಅವರು ಹೇಳಿದ್ದಾರೆ.


ಮಹಿಳಾ ವಿರೋಧಿಗಳಿಗೆ ಮುಂದಿನ ಚುನಾವಣೆಗಳಲ್ಲಿ ನಾಡಿನ ಮಹಿಳೆಯರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಅವರು ಎಚ್ಚರಿಸಿದ್ದಾರೆ.

## ಚಾರ್‌ಧಾಮ್ ಯಾತ್ರೆ ಆರಂಭ

**ಡೆಹ್ರಾಡೂನ್:** ಚಳಿಗಾಲದ ವಿರಾಮದ ನಂತರ ಅಕ್ಷಯ ತೃತೀಯ ಸಂದರ್ಭದಲ್ಲಿ ಉತ್ತರಾಖಂಡದ ಗಂಗೋತ್ರಿ ಮತ್ತು ಯಮುನೋತ್ರಿ ದೇವಾಲಯಗಳ ದ್ವಾರಗಳು ತೆರೆಯಲಾಗಿದ್ದು, ನಿನ್ನೆಯಿಂದ ಚಾರ್ ಧಾಮ್ ಯಾತ್ರೆ ಪ್ರಾರಂಭವಾಗಿದೆ. ಗಂಗೋತ್ರಿ ದೇವಾಲಯದ ದ್ವಾರಗಳು ಮಧ್ಯಾಹ್ನ 12:15 ಕ್ಕೆ ಮತ್ತು ಯಮುನೋತ್ರಿ ದೇವಾಲಯದ ದ್ವಾರಗಳು ಮಧ್ಯಾಹ್ನ 12:35 ಕ್ಕೆ ವೇದ ಮಂತ್ರಗಳ ಪಠಣದೊಂದಿಗೆ ತೆರೆಯಲಾಯಿತು. ಬಾಗಿಲುಗಳು ತೆರೆದಾಗ ನೂರಾರು ಭಕ್ತರು ಘೋಷಣೆ ಕೂಗಿ ಭಕ್ತಿ ಭಾವ ಪ್ರದರ್ಶಿಸಿದರು.

ಉತ್ತರಕಾಶಿ ಜಿಲ್ಲೆಯ ಎರಡೂ ದೇವಾಲಯಗಳಲ್ಲಿ ಮೊದಲ ಪ್ರಾರ್ಥನೆಯನ್ನು ಪ್ರಧಾನಿ ನರೇಂದ್ರ ಮೋದಿಯವರ ಹೆಸರಿನಲ್ಲಿ ಸಲ್ಲಿಸಲಾಯಿತು. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಗಂಗೋತ್ರಿ ದೇಗುಲದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ದೇಶದ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಸುರಕ್ಷಿತ ಮತ್ತು ಸುಗಮ ಯಾತ್ರೆಯನ್ನು



ಖಚಿತಪಡಿಸಿಕೊಳ್ಳಲು ರಾಜ್ಯ ಸರ್ಕಾರವು ವ್ಯವಸ್ಥೆಗಳನ್ನು ಮಾಡಿದೆ ಎಂದು ಧಾಮಿ ತಿಳಿಸಿದ್ದಾರೆ. ಹಸಿರು ಮತ್ತು ಸ್ವಚ್ಛ ಯಾತ್ರೆಯನ್ನು ಬೆಂಬಲಿಸುವಂತೆ ಭಕ್ತರಿಗೆ ಮನವಿ ಮಾಡಿಕೊಂಡಿದ್ದಾರೆ. ಇದೇ ಮೊದಲ ಬಾರಿಗೆ ಬದರಿನಾಥ, ಕೇದಾರನಾಥ ಮತ್ತು ಗಂಗೋತ್ರಿ ಎಂಬ ಮೂರು ದೇವಾಲಯಗಳಿಗೆ ಹಿಂದೂಯೇತರರ ಪ್ರವೇಶಕ್ಕೆ ನಿರ್ಬಂಧಗಳನ್ನು ವಿಧಿಸಲಾಗಿದೆ. ಗಂಗೋತ್ರಿ ದೇವಾಲಯ ಸಮಿತಿಯು, ಸನಾತನಿಗಳಲ್ಲದವರು ಆವರಣಕ್ಕೆ ಪ್ರವೇಶಿಸಲು ಪಂಚಗವ್ಯ (ಗೋಮೂತ್ರ, ಸಗಣಿ, ಹಾಲು, ಮೊಸರು ಮತ್ತು ತುಪ್ಪದ ಸಂಯೋಜನೆ) ಸೇವಿಸಬೇಕೆಂದು ಆದೇಶಿಸಿದೆ.

ಹಿಂದೂಯೇತರರು ತಮ್ಮ ಪ್ರವೇಶಕ್ಕಾಗಿ ಸನಾತನ ಧರ್ಮದಲ್ಲಿ ನಂಬಿಕೆಯನ್ನು ದೃಢೀಕರಿಸುವ ಅಫಿಡವಿಟ್ ಅನ್ನು ಸಲ್ಲಿಸುವುದನ್ನು ಕಡ್ಡಾಯ ಎಂದು ಶ್ರೀ ಬದರಿನಾಥ, ಕೇದಾರನಾಥ ದೇವಾಲಯ ಸಮಿತಿ ತಿಳಿಸಿದೆ.

ಕೇದಾರನಾಥ ಮತ್ತು ಬದರಿನಾಥದ ದ್ವಾರಗಳು ಕ್ರಮವಾಗಿ ಏ. 22 ಮತ್ತು 23 ರಂದು ತೆರೆಯಲಿವೆ. ಆದರೆ, ಯಮುನೋತ್ರಿ ದೇವಾಲಯ ಸಮಿತಿಯು ಧರ್ಮವನ್ನು ಲೆಕ್ಕಿಸದೆ ಎಲ್ಲಾ ಭಕ್ತರನ್ನು ಸ್ವಾಗತಿಸಲು ನಿರ್ಧರಿಸಿದೆ. ದೇವಾಲಯದ ಆವರಣದೊಳಗೆ ಮೊಬೈಲ್ ಫೋನ್‌ಗಳು ಮತ್ತು ಕ್ಯಾಮೆರಾಗಳನ್ನು ಅಧಿಕಾರಿಗಳು ನಿಷೇಧಿಸಿದ್ದಾರೆ.

## ಕಲ್ಲಿದ್ದಲು ಹಗರಣ : ಐಎಎಸ್ ಅಧಿಕಾರಿಯ 4 ಕೋಟಿ ಮೌಲ್ಯದ ಆಸ್ತಿ ಜಪ್ತಿ

**ರಾಯ್ಪುರ್:** ಕಲ್ಲಿದ್ದಲು ಲೆವಿ ಹಗರಣಕ್ಕೆ ಸಂಬಂಧಿಸಿದಂತೆ ಆರೋಪಿಯಾಗಿರುವ ಅಮಾನತುಗೊಂಡ ಐಎಎಸ್ ಅಧಿಕಾರಿ ಸಮೀರ್ ವಿಷ್ಣೋಯ್ ಅವರ 4 ಕೋಟಿ ಮೌಲ್ಯದ ಆಸ್ತಿಗಳನ್ನು ಆರ್ಥಿಕ ಅಪರಾಧ ವಿಭಾಗ ಜಪ್ತಿ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ 2024ರ ಜುಲೈನಲ್ಲಿ ವಿಷ್ಣೋಯ್ ವಿರುದ್ಧ ಅಕ್ರಮ ಆಸ್ತಿ ಸಂಪಾದನೆ ಪ್ರಕರಣವನ್ನು ದಾಖಲಿಸಿತ್ತು. ತನಿಖೆಯ ವೇಳೆ, ವಿಷ್ಣೋಯ್ ಅವರ ಕುಟುಂಬ ಸದಸ್ಯರು ಹಾಗೂ ಸಂಬಂಧಿತ ಸಂಸ್ಥೆಗಳ ಹೆಸರಿನಲ್ಲಿ ಅಕ್ರಮವಾಗಿ ಸಂಪಾದಿಸಲ್ಪಟ್ಟಿವೆ ಎಂದು ಶಂಕಿಸಲಾದ ಒಟ್ಟು ಒಂಭತ್ತು ಸ್ಥಿರ ಆಸ್ತಿಗಳನ್ನು (ಸುಮಾರು 4 ಕೋಟಿ ಮೌಲ್ಯದ) ತನಿಖಾ ಸಂಸ್ಥೆ ಗುರುತಿಸಿದೆ ಎಂದು ಹೇಳಲಾಗಿದೆ.

ಈ ಆಸ್ತಿಗಳನ್ನು ಜಪ್ತಿ ಮಾಡುವಂತೆ ರಾಯ್ಪುರದಲ್ಲಿರುವ ಭ್ರಷ್ಟಾಚಾರ ತಡೆ ಕಾಯ್ದೆಯ ವಿಶೇಷ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಾಗಿತ್ತು. ಏ. 17ರಂದು ವಿಚಾರಣೆ ನಡೆಸಿದ ಬಳಿಕ, ನ್ಯಾಯಾಲಯವು ಎಲ್ಲಾ ಆಸ್ತಿಗಳನ್ನು ಜಪ್ತಿ ಮಾಡಲು ಆದೇಶಿಸಿದೆ, ಇದಕ್ಕೆ ಅನುಸಾರವಾಗಿ, ಭ್ರಷ್ಟಾಚಾರ ನಿಗ್ರಹ ದಳ/ಆರ್ಥಿಕ ಅಪರಾಧ ವಿಭಾಗವು ಆಸ್ತಿಗಳನ್ನು ಜಪ್ತಿ ಮಾಡಿದೆ. ಜಪ್ತಿಯಾದ ಆಸ್ತಿಗಳನ್ನು ಮಾರಾಟ ಅಥವಾ ಹಸ್ತಾಂತರ ಮಾಡಲು ಸದ್ಯಸಾಧ್ಯವಿಲ್ಲ ಎಂದು ತಿಳಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿ, ಜಾರಿ ನಿರ್ದೇಶನಾಲಯ (ಇಡಿ) ಹಿಂದೆಯೇ ವಿಷ್ಣೋಯ್ ಅವರಿಗೆ ಸಂಬಂಧಿಸಿದ ಐದು ಸ್ಥಿರ ಆಸ್ತಿಗಳನ್ನು ತಾತ್ಕಾಲಿಕವಾಗಿ ಜಪ್ತಿ ಮಾಡಿತ್ತು. ಇದಲ್ಲದೆ, ಇತರ



ಸಾರ್ವಜನಿಕ ಅಧಿಕಾರಿಗಳ ವಿರುದ್ಧವೂ ಕ್ರಮಗಳು ಮುಂದುವರಿದಿವೆ.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಉಪ ಕಾರ್ಯದರ್ಶಿಯಾಗಿ ಕೆಲಸ ಮಾಡಿದ್ದ ಸೌಮ್ಯ ಚೌರಾಸಿಯಾ ಅವರಿಗೆ ಸಂಬಂಧಿಸಿದ ಆಸ್ತಿಗಳ ಮೇಲೂ ಕ್ರಮ ಕೈಗೊಳ್ಳಲಾಗಿದೆ ಎಂದು ತನಿಖಾ ಸಂಸ್ಥೆ ತಿಳಿಸಿದೆ. 2009 ಬ್ಯಾಚ್‌ನ ಐಎಎಸ್ ಅಧಿಕಾರಿಯಾದ ವಿಷ್ಣೋಯ್ ಅವರನ್ನು 2022ರಲ್ಲಿ ಈ ಕಲ್ಲಿದ್ದಲು ಲೆವಿ ಹಗರಣದ ಸಂಬಂಧ ಮೊದಲ ಬಾರಿಗೆ ಬಂಧಿಸಿತ್ತು. ಬಳಿಕ ಕಳೆದ ವರ್ಷ ಸುಪ್ರೀಂ ಕೋರ್ಟ್ ಅವರಿಗೂ ಸೇರಿದಂತೆ ಹಲವು ಆರೋಪಿಗಳಿಗೆ ಜಾಮೀನು ನೀಡಿತ್ತು.

## ಮಿನಿ ನ್ಯೂಸ್

### ಬೆಟ್ಟದಿಂದ ಬಸ್ ಉರುಳಿ ಬಿದ್ದು 15 ಪ್ರಯಾಣಿಕರ ದುರ್ಮರಣ

**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ಉಧಮ್‌ಪುರ ಜಿಲ್ಲೆಯಲ್ಲಿ ಪ್ರಯಾಣಿಕರ ಬಸ್ ಬೆಟ್ಟದಿಂದ ಉರುಳಿ ಬಿದ್ದ ಪರಿಣಾಮ ಕನಿಷ್ಠ 15 ಜನರು ಸಾವನ್ನಪ್ಪಿದ್ದು, 20 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಳಿಗ್ಗೆ 10 ಗಂಟೆ ಸುಮಾರಿಗೆ ರಾಮ್‌ನಗರ ಪ್ರದೇಶದ ಕಾಗೋರ್ಟ್ ಗ್ರಾಮದ ಬಳಿ ಬಸ್ ಗುಡ್ಡದಿಂದ ಉರುಳಿ ಬಿದ್ದಾಗ ಈ ಅಪಘಾತ ಸಂಭವಿಸಿದೆ.

ಸ್ಥಳೀಯರು ಮೊದಲು ಸ್ಥಳಕ್ಕೆ ತಲುಪಿ ರಕ್ಷಣಾ ಪ್ರಯತ್ನಗಳನ್ನು ಪ್ರಾರಂಭಿಸಿದರು, ಗಾಯಾಳುಗಳನ್ನು ಅವಶೇಷಗಳಿಂದ ಹೊರತೆಗೆದರು. ಪೊಲೀಸರು ಮತ್ತು ಇತರ ತುರ್ತು ಪ್ರತಿಕ್ರಿಯೆ ನೀಡುವವರು ಶೀಘ್ರದಲ್ಲೇ ಬಲಿಪಶುಗಳನ್ನು ಸ್ಥಳಾಂತರಿಸಲು ಮತ್ತು ಸ್ಥಳವನ್ನು ತೆರವುಗೊಳಿಸಲು ಕಾರ್ಯಾಚರಣೆಯಲ್ಲಿ ತೊಡಗಿದರು. ವಾಹನದ ಅವಶೇಷಗಳಿಂದ ಒಟ್ಟು 15 ಶವಗಳನ್ನು ಹೊರತೆಗೆಯಲಾಯಿತು, ಆದರೆ 20 ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು ಮತ್ತು ಅವರಲ್ಲಿ ಹಲವರ ಸ್ಥಿತಿ ಗಂಭೀರ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಪಘಾತ ಸಂಭವಿಸಿದಾಗ ಬಸ್ ದೂರದ ಹಳ್ಳಿಯಿಂದ ಉಧಮ್‌ಪುರಕ್ಕೆ ಹೋಗುತ್ತಿತ್ತು ಎಂದು ಅವರು ಹೇಳಿದರು. ಅಪಘಾತದ ನಂತರ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಉಧಮ್‌ಪುರದ ಉಪ ಆಯುಕ್ತ ಮಿಂಗಾ ಶೆರ್ಪಾ ಅವರೊಂದಿಗೆ ಮಾತನಾಡಿದರು ಮತ್ತು ಗಂಭೀರವಾಗಿ ಗಾಯಗೊಂಡ ಬಲಿಪಶುಗಳನ್ನು ವಿಮಾನದಲ್ಲಿ ಸಾಗಿಸಲು ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಹೇಳಿದರು.

### ಇರಾನ್ ಸರಕು ಹಡಗು ವಶಕ್ಕೆ ಪಡೆದ ಅಮೆರಿಕ

**ಟೆಹ್ರಾನ್:** ಅಮೆರಿಕ ತನ್ನ ನೌಕಾ ದಿಗ್ಬಂಧನದ ಭಾಗವಾಗಿ ಕೊಲ್ಲಿಯಲ್ಲಿ ಇರಾನಿನ ಸರಕು ಹಡಗನ್ನು ತಡೆದಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇರಾನ್‌ನ ಟೌಸ್ಕಾ ಹಡಗನ್ನು ಅಮೆರಿಕದ ನೌಕಾಪಡೆಯು ನಿಲ್ಲಿಸುವಂತೆ ನೀಡಿದ ಎಚ್ಚರಿಕೆಗೆ ಸ್ಪಂದಿಸದ ಕಾರಣ ಅದನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಮ್ಮ ಟ್ರೂತ್ ಸೋಶಿಯಲ್ ಪ್ಲಾಟ್‌ಫಾರ್ಮ್‌ನಲ್ಲಿ ಬರೆದುಕೊಂಡಿದ್ದಾರೆ.

ಅಮೆಕಾದ ಈ ಧೋರಣೆಯಿಂದ ಕೋಪಗೊಂಡಿರುವ ಇರಾನ್ ಇದು ಕದನ ವಿರಾಮದ ಉಲ್ಲಂಘನೆಯಾಗಿದ್ದು, ಸಶಸ್ತ್ರ ಕಡಲ್ಗಳ್ಳತನದ ಕೃತ್ಯಕ್ಕೆ ಶೀಘ್ರದಲ್ಲೇ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಎಚ್ಚರಿಸಿದೆ.

ಕದನ ವಿರಾಮ ಒಪ್ಪಂದ ಮಾತುಕತೆಗೆ ಇರಾನ್ ನಕಾರ ವ್ಯಕ್ತಪಡಿಸಿದೆ. ಅಮೆರಿಕಾದ ದಿಗ್ಬಂಧನ ಜಾರಿಯಲ್ಲಿರುವವರೆಗೆ ಶಾಂತಿ ಮಾತುಕತೆ ಸಾಧ್ಯವಿಲ್ಲ. ಎರಡನೇ ಸಭೆಗೆ ಹಾಜರಾಗುವುದಿಲ್ಲ. ಇರಾನ್ ಬಂದರುಗಳ ಸುತ್ತಲೂ ನೌಕಾ ದಿಗ್ಬಂಧನ ಮುಂದುವರಿದಿದೆ. ಇದು ಕದನ ವಿರಾಮ ಒಪ್ಪಂದದ ಉಲ್ಲಂಘನೆ ಹೀಗಾಗಿ ಮಾತುಕತೆಗಳಿಂದ ಹಿಂದೆ ಸರಿಯುತ್ತಿದ್ದೇವೆ ಎಂದು ಇರಾನ್ ಸ್ಪಷ್ಟಪಡಿಸಿದೆ.

### ಅಮೆರಿಕಾಗೆ ಇರಾನ್ ಎಚ್ಚರಿಕೆ

**ವಾಷಿಂಗ್ಟನ್:** ಒಮಾನ್ ಕೊಲ್ಲಿಯಲ್ಲಿ ಇರಾನ್ ಧ್ವಜದ ಟ್ಯಾಂಕರ್‌ನ್ನು ಅಮೆರಿಕಾ ವಶಪಡಿಸಿಕೊಂಡ ಘಟನೆಗೆ ತಕ್ಷಣ ಪ್ರತಿಕ್ರಿಯೆ ನೀಡುವುದಾಗಿ ಇರಾನ್ ಸೇನೆ ಎಚ್ಚರಿಕೆ ನೀಡಿದೆ. ಅಮೆರಿಕಾ ಪಡೆಗಳು ಹಡಗಿನ ಮೇಲೆ ದಾಳಿ ನಡೆಸಿ ನಂತರ ಅದನ್ನು ಹತ್ತಿಕೊಂಡಿರುವುದು ಯುದ್ಧ ವಿರಾಮ ಒಪ್ಪಂದದ ಉಲ್ಲಂಘನೆ ಎಂದು ಇರಾನ್ ಸೇನಾ ಮುಖ್ಯ ಕಚೇರಿ ಹೇಳಿದೆ. ಈ ಕ್ರಮವನ್ನು ಸಮುದ್ರ ದರೋಡೆ ಎಂದು ಇರಾನ್ ಸರ್ಕಾರದ ಪ್ರಸಾರ ಸಂಸ್ಥೆ ಖಂಡಿಸಿದೆ. ಅಮೆರಿಕಾ ಹೇಳುವಂತೆ, ಹಡಗು ಹಲವು ಎಚ್ಚರಿಕೆಗಳನ್ನು ಲೆಕ್ಕಿಸದೆ ನೌಕಾ ನಿಷೇಧ ರೇಖೆಯನ್ನು ದಾಟಿದ್ದರಿಂದ ಅದನ್ನು ವಶಪಡಿಸಿಕೊಂಡಿದೆ ಎಂದಿದೆ. ಹಾರ್ಮುಜ್ ಜಲಸಂಧಿಯ ಸಮೀಪ ನೌಕಾ ನಿಷೇಧವನ್ನು ಮೀರಿ ಸಾಗಲು ಪ್ರಯತ್ನಿಸಿದ ಇರಾನ್ ಧ್ವಜದ ಸರಕು ಹಡಗನ್ನು ಅಮೆರಿಕಾ ನಿನ್ನೆ ಬಲವಂತವಾಗಿ ವಶಪಡಿಸಿಕೊಂಡಿದೆ. ಕಳೆದ ವಾರ ಇರಾನ್ ಬಂದರುಗಳ ಮೇಲಿನ ನಿಷೇಧ ಆರಂಭವಾದ ಬಳಿಕ ಇದೇ ಮೊದಲ ಘಟನೆ ಎಂದು ತಿಳಿಸಲಾಗಿದೆ.

### ತೈಲ ವ್ಯಾಪಾರಕ್ಕೆ ಡಾಲರ್ ಬದಲು ಯುವಾನ್ ಬಳಕೆಗೆ ಯುಎಇ ಚಿಂತನೆ

**ದುಬೈ:** ಪರ್ಷಿಯನ್ ಗಲ್ಫ್‌ನಲ್ಲಿ ಇರಾನ್‌ನೊಂದಿಗಿನ ಸಂಘರ್ಷ ತೀವ್ರಗೊಂಡಿರುವ ಹಿನ್ನೆಲೆ ಯುಎಇ ತನ್ನ ತೈಲ ವ್ಯಾಪಾರದಲ್ಲಿ ಅಮೆರಿಕದ ಡಾಲರ್ ಬದಲು ಚೀನಾದ ಯುವಾನ್ ಕರೆನ್ಸಿಯನ್ನು ಬಳಸುವ ಬಗ್ಗೆ ಗಂಭೀರ ಚರ್ಚೆ ನಡೆಸುತ್ತಿದೆ ಎಂದು ವಾಲ್ ಸ್ಟ್ರೀಟ್ ಜರ್ನಲ್ ವರದಿ ಮಾಡಿದೆ. ವಾಷಿಂಗ್ಟನ್‌ನಲ್ಲಿ ಕಳೆದ ವಾರ ನಡೆದ ಸಭೆಯಲ್ಲಿ, ಯುಎಇ ಸೆಂಟ್ರಲ್ ಬ್ಯಾಂಕ್ ಗವರ್ನರ್ ಖಾಲಿದ್ ಮೊಹಮ್ಮದ್ ಬಲಾಮಾ ಅವರು ಅಮೆರಿಕದ ಖಜಾನೆ ಸಚಿವ ಸ್ಕಾಟ್ ಬೆಸೆಂಟ್ ಮತ್ತು ಯುಎಸ್ ಟ್ರೆಷರಿ, ಫೆಡರಲ್ ರಿಸರ್ವ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ್ದಾರೆ. ಸಂಘರ್ಷದಿಂದಾಗಿ ಯುಎಇಯ ತೈಲ ಮತ್ತು ಗ್ಯಾಸ್ ಮೂಲಸೌಕರ್ಯಗಳಿಗೆ ಹಾನಿಯಾಗಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಟ್ಯಾಂಕರ್‌ಗಳ ಸಂಚಾರದಲ್ಲಿ ಅಡಚಣೆ ಉಂಟಾಗಿದ್ದು, ಡಾಲರ್‌ನಲ್ಲಿ ಬರುವ ತೈಲದ ಆದಾಯ ಗಣನೀಯವಾಗಿ ಕುಸಿದಿದೆ. ಇದರಿಂದ ಯುಎಇಯ ವಿದೇಶಿ ವಿನಿಮಯ ಭಂಡಾರಕ್ಕೆ ಒತ್ತಡ ಬಂದರೆ ಅಥವಾ ಹೂಡಿಕೆದಾರರ ವಿಶ್ವಾಸ ಕುಸಿದರೆ, ಡಾಲರ್ ಲಿಕ್ವಿಡಿಟಿ ಕುಗ್ಗಿದಲ್ಲಿ ತೈಲ ವ್ಯಾಪಾರವನ್ನು ಬದಲಿ ಕರೆನ್ಸಿಗಳಲ್ಲಿ ನಡೆಸುವ ಸಾಧ್ಯತೆಯ ಬಗ್ಗೆ ಯುಎಇ ಅಧಿಕಾರಿಗಳು ಸೂಚಿಸಿದ್ದಾರೆ.

# 8 ವರ್ಷಗಳ ಬಳಿಕ ಭಾರತಕ್ಕೆ ದಕ್ಷಿಣ ಕೊರಿಯಾ ಅಧ್ಯಕ್ಷರ ಭೇಟಿ

### ಭಾರತ ವಿಶ್ವದ ಅತ್ಯಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ರಾಷ್ಟ್ರ ಹಾಗೂ ಅಲ್ಟ್ರಾ ಹೈ ಸ್ಪೀಡ್‌ನಲ್ಲಿ ಬೆಳವಣಿಗೆ ಹೊಂದುತ್ತಿರುವ ರಾಷ್ಟ್ರವಾಗಿದೆ: ಲಿ ಜೇ ಮಿಯಾಂಗ್

- ಇಂಡಿಯಾ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ದೇಶ ಎಂದು ಬಣ್ಣಿಸಿದ ಭಾರತ ಪ್ರವಾಸದಲ್ಲಿರುವ ದ.ಕೊರಿಯಾ ಅಧ್ಯಕ್ಷ ಲಿ ಜೇ ಮಿಯಾಂಗ್
- ಏ.20ರಂದು ದೆಹಲಿಯಲ್ಲಿ ಭಾರತ ಪ್ರಧಾನಿ ನರೇಂದ್ರ ಮೋದಿಯನ್ನು ಭೇಟಿಯಾಗಿ ದ್ವಿಪಕ್ಷೀಯ ಸಂಬಂಧದ ಕುರಿತು ಚರ್ಚೆ
- 8ವರ್ಷಗಳ ಬಳಿಕ ಭಾರತಕ್ಕೆ ಬಂದ ಮೊದಲ ದ.ಕೊರಿಯಾ ನಾಯಕ, 2030ರ ವೇಳೆಗೆ ದ್ವಿಪಕ್ಷೀಯ ವಾಣಿಜ್ಯ ಸಂಬಂಧ 50ಬಿಲಿಯನ್ ಡಾಲರ್ ಗುರಿ ತಲುಪುವ ಭರವಸೆ

**ಹೊಸದಿಲ್ಲಿ:** ದಕ್ಷಿಣ ಕೊರಿಯಾದ ಅಧ್ಯಕ್ಷ ಲಿ ಜೇ ಮಿಯಾಂಗ್ 3 ದಿನಗಳ ಭಾರತ ಪ್ರವಾಸ ನಡೆಸುತ್ತಿದ್ದು ಏ.20ರಂದು ಭಾರತದ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾಗಲಿದ್ದಾರೆ. ಇದಕ್ಕೂ ಮೊದಲೇ ತಮ್ಮ ಅಧಿಕೃತ ಸಾಮಾಜಿಕ ಖಾತೆಯ ಮೂಲಕ ಭಾರತವನ್ನು ಅತ್ಯಂತ ವೇಗದಲ್ಲಿ ಬೆಳವಣಿಗೆಯಾಗುತ್ತಿರುವ ರಾಷ್ಟ್ರ ಎಂದು ಶ್ಲಾಘಿಸಿ ಪೋಸ್ಟ್ ಹಂಚಿಕೊಂಡಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಎಕ್ ಖಾತೆಯ ಮೂಲಕ ವಿಡಿಯೋವೊಂದನ್ನು ಹಂಚಿಕೊಂಡು ಪೋಸ್ಟ್ ಮಾಡಿರುವ ದ.ಕೊರಿಯಾದ ಅಧ್ಯಕ್ಷರು ಇದಕ್ಕೆ ಶೀರ್ಷಿಕೆಯಾಗಿ ಭಾರತ ವಿಶ್ವದ ಅತ್ಯಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ರಾಷ್ಟ್ರ ಹಾಗೂ ಅಲ್ಟ್ರಾ ಹೈ ಸ್ಪೀಡ್‌ನಲ್ಲಿ ಬೆಳವಣಿಗೆ ಹೊಂದುತ್ತಿರುವ ರಾಷ್ಟ್ರವಾಗಿದೆ. ಅಲ್ಲದೆ, ಭಾರತ ಹಾಗೂ ದ.ಕೊರಿಯಾ ಈ ಎರಡೂ ದೇಶಗಳನ್ನು ಸೂಕ್ಷ್ಮವಾಗಿ ಗಮನಿಸಿದರೆ, ಉಭಯ ದೇಶಗಳು ಯಾವುದೇ ಬಲವಂತಕ್ಕೆ ಒಳಪಡದಂತೆ ಲಾಭಪಡೆದುಕೊಳ್ಳುವಂತಹ ಅನೇಕ ವಿಚಾರಗಳಿವೆ ಎಂದು ತಿಳಿಸಿದ್ದಾರೆ. 8 ವರ್ಷಗಳ ಬಳಿಕ ಭಾರತ ಪ್ರವಾಸ ಮಾಡಿದ ಮೊದಲ ದ.ಕೊರಿಯಾ ಅಧ್ಯಕ್ಷ ಭಾರತದಲ್ಲಿ ಪ್ರಧಾನಿ ನರೇಂದ್ರ ಮೋದಿಯವರೊಂದಿಗಿನ ತಮ್ಮ ಅಧಿಕೃತ ಭೇಟಿಗೂ ಮುನ್ನ ಈ ಹೇಳಿಕೆಗಳನ್ನು ದ.ಕೊರಿಯಾ ಅಧ್ಯಕ್ಷರು ಹಂಚಿಕೊಂಡಿದ್ದಾರೆ.

**ದ್ವಿಪಕ್ಷೀಯ ಸಂಬಂಧಗಳು ವೃದ್ಧಿಯಾಗುವ ಸಾಧ್ಯತೆ**

ಇದಾದ ಬಳಿಕ ಭಾರತದಲ್ಲಿನ ಹಲವು ಕಾರ್ಪೋರೇಟ್ ಕಂಪನಿಗಳ ನಾಯಕರೊಂದಿಗೆ ಚರ್ಚೆ ನಡೆಸಲಿರುವ ದ.ಕೊರಿಯಾ ಅಧ್ಯಕ್ಷರು ವಾಣಿಜ್ಯ, ಹಾಗೂ ರಕ್ಷಣಾ ವಲಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಇದರ ಜೊತೆಗೆ ಎಲೆಕ್ಟ್ರಾನಿಕ್ಸ್ ಮತ್ತು ಅರೆವಾಹಕಗಳು, ಆಟೋ ಘಟಕಗಳು ಮತ್ತು ಇವಿ ಪರಿಸರ ವ್ಯವಸ್ಥೆಗಳು, ಹಡಗು ನಿರ್ಮಾಣ ಮತ್ತು ಕಡಲ ಉಪಕರಣಗಳು, ರಕ್ಷಣಾ ಉತ್ಪಾದನೆ, ಶುದ್ಧ ಇಂಧನ ತಂತ್ರಜ್ಞಾನಗಳು, ಬ್ಯಾಟರಿಗಳು ಮತ್ತು ಉನ್ನತ-ಮಟ್ಟದ ಕೈಗಾರಿಕಾ ಯಂತ್ರೋಪಕರಣಗಳು ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳು ವೃದ್ಧಿಯಾಗುವ ಸಾಧ್ಯತೆಗಳಿವೆ.

ಇನ್ನು, ಇಲ್ಲಿ ವಿಶೇಷವೆಂದರೆ, ಸುಮಾರು 8 ವರ್ಷಗಳ ಬಳಿಕ ಮೊದಲ ಬಾರಿಗೆ ಭಾರತ ಪ್ರವಾಸ ಬೆಳೆಸುತ್ತಿರುವ ಮೊದಲ ದ.ಕೊರಿಯಾದ ಅಧ್ಯಕ್ಷ ಎಂಬ ಲಿ ಜೇ ಮಿಯಾಂಗ್ ಆಗಿದ್ದಾರೆ. ಇನ್ನು, ಈ ಚರ್ಚೆಯಲ್ಲಿ ಉಭಯದೇಶಗಳ ನಡುವೆ ಶಿಪ್ ಬಿಲ್ಡಿಂಗ್ ವಲಯದ ಕುರಿತು ಚರ್ಚೆ ನಡೆಯುವ ಸಾಧ್ಯತೆಯಿದೆ.




ವಾಣಿಜ್ಯ ಸಂಬಂಧ 50 ಬಿಲಿಯನ್ ತಲಪುವ ಗುರಿ

ಈ ಪ್ರವಾಸದ ರಾಜತಾಂತ್ರಿಕ ಮಹತ್ವವನ್ನು ಎತ್ತಿ ತೋರಿಸುತ್ತಾ, ಭಾರತದ ವಿದೇಶಾಂಗ ಸಚಿವಾಲಯ ಈ ಭೇಟಿಯು ಎರಡೂ ದೇಶಗಳ ನಡುವಿನ ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಮಹತ್ವದ ಮೈಲಿಗಲ್ಲು ಎಂದು ಗಮನಿಸಿದೆ.

ಉಭಯದೇಶಗಳ ವಾಣಿಜ್ಯ ಸಂಬಂಧ ವೃದ್ಧಿಗೊಳಿಸುವ ಉದ್ದೇಶ ಈ ಭೇಟಿಯೂ ಭಾರತ-ದ.ಕೊರಿಯಾ ನಡುವಿನ ವಾಣಿಜ್ಯ ಸಂಬಂಧಗಳನ್ನು ಬಲಪಡಿಸುವ ನಿಟ್ಟನಲ್ಲಿ ಕೇಂದ್ರಿಕೃತವಾಗಿದೆ. ದ್ವಿಪಕ್ಷೀಯ ವ್ಯಾಪಾರ ಸಂಬಂಧವನ್ನು ವೃದ್ಧಿಗೊಳಿಸವಲ್ಲಿ ಯೋಜನೆ ರೂಪಿಸಲಾಗುತ್ತಿದ್ದು ಸದ್ಯ 25.7 ಬಿಲಿಯನ್ ಡಾಲರ್ ಇರುವ ವ್ಯಾಣಿಜ್ಯ ಸಂಬಂಧನವನ್ನು 2030ರ ವೇಳೆ ದ್ವಿಗುಣಗೊಳಿಸುವ ಅಂದರೆ ಬರೋಬ್ಬರಿ 50 ಬಿಲಿಯನ್ ಡಾಲರ್‌ಗೆ ಏರಿಕೆ ಮಾಡುವ ನಿಟ್ಟನಲ್ಲಿ ಚರ್ಚೆಗಳು ನಡೆಯಲಿವೆ. ಈ ಮೂಲಕ 2009ರಲ್ಲಿ ಸಹಿ ಹಾಕಲಾಗಿದ್ದ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದವನ್ನು ಪರಿಷ್ಕೃತಗೊಳಿಸುವ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿವೆ.



ಭಾರತೀಯ ಫ್ಯಾಷನ್ ಉದ್ಯಮದ ಅತ್ಯಂತ ಪ್ರಸಿದ್ಧ ಸೆಲೆಬ್ರಿಟಿಗಳಲ್ಲಿ ಒಬ್ಬರಾದ ಮಿಲಿಂದ್ ಸೋಮನ್ ಮಾಡೆಲಿಂಗ್ ಜಗತ್ತಿನಲ್ಲಿ ವಿಶಿಷ್ಟ ಸ್ಥಾನವನ್ನು ಪಡೆದುಕೊಂಡಿದ್ದಾರೆ. 1990 ರ ದಶಕದಿಂದಲೂ ಮಿಲಿಂದ್ ಜಾಹೀರಾತು ಮತ್ತು ಫ್ಯಾಷನ್ ಶೋಗಳ ಮೂಲಕ ಜನಪ್ರಿಯರಾಗಿದ್ದರು. ಮೇಡ್ ಇನ್ ಇಂಡಿಯಾ ಹಾಡು ಕೇಳಿದಾಗ ನಮ್ಮೆಲರಿಗೂ ಮೊದಲು ನೆನಪಾಗುವುದೇ ಮಿಲಿಂದ್ ಸೋಮನ್ ಅವರ ಚಿತ್ರ. 60 ವರ್ಷ ದಾಟಿದ್ರು ಕೂಡಾ ತನ್ನ ಖಡಕ್ ಫಿಟ್ನೆಸ್ ನಿಂದ ಈಗಿನ ಯುವಜನರಿಗೆ ಮಾದರಿಯಾಗಿದ್ದಾರೆ ಮಿಲಿಂದ್. ಆ ಗಟ್ಟಿಮುಟ್ಟಾದ ಮೈಕಟ್ಟು ಮತ್ತು ಭಯಾನಕ ನೋಟವು 90 ರ ದಶಕದಂತೆಯೇ ಇಂದಿಗೂ ಪ್ರಭಾವಶಾಲಿಯಾಗಿದೆ. ವಯಸ್ಸು ಕೇವಲ ಒಂದು ಸಂಖ್ಯೆ ಎಂದು ಮಿಲಿಂದ್ ಸಾಬೀತುಪಡಿಸಿದ್ದಾರೆ.



# ಆಟೋ ರಿಕ್ಷಾ ಓಡಿಸಲು ಶುರು ಮಾಡಿದ್ರಾ ಖ್ಯಾತ ನಟ


ಮಿಲಿಂದ್ ಸೋಮನ್ ಕೇವಲ ನಟನೆಗೆ ಸೀಮಿತವಾಗಿಲ್ಲ, ಅವರು ದೇಶದ ಅತಿದೊಡ್ಡ ಫಿಟ್ನೆಸ್ ಐಕಾನ್‌ಗಳಲ್ಲಿ ಒಬ್ಬರು. ಅವರು ತಮ್ಮ ಆರೋಗ್ಯಕರ ಜೀವನಶೈಲಿ, ಓಟ ಮತ್ತು ಯೋಗದಿಂದ ಜನರನ್ನು ಪ್ರೇರೇಪಿಸುತ್ತಾರೆ. ಅವರ ವ್ಯಾಯಾಮದ ವಿಡಿಯೋಗಳು ಹೆಚ್ಚಾಗಿ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತವೆ. 60 ನೇ ವಯಸ್ಸಿನಲ್ಲಿ ಅವರ ಶಕ್ತಿ ಮತ್ತು ಫಿಟ್ನೆಸ್ ಮಟ್ಟಗಳು ಅದ್ಭುತವಾಗಿವೆ. ಅವರು ಶಿಸ್ತು ಮತ್ತು ಪ್ರಕೃತಿಗೆ ಹತ್ತಿರವಾಗಿ ಬದುಕುವುದನ್ನು ನಂಬುತ್ತಾರೆ. ಮಿಲಿಂದ್ ಅವರ ವೈಯಕ್ತಿಕ ಜೀವನವೂ ಆಗಾಗ್ಗೆ ಚರ್ಚೆಯ ವಿಷಯವಾಗಿದೆ. ಅವರು ತಮಗಿಂತ 26 ವರ್ಷ ಚಿಕ್ಕವರಾದ ಅಂಕಿತಾ ಕೊನ್ವಾರ್ ಅವರನ್ನು ವಿವಾಹವಾದರು. ಹಾಗೆಯೇ ಮತ್ತೊಂದು ಕುತೂಹಲಕಾರಿಯಾದ ವಿಷ್ಯ ಏನೆಂದರೆ ಮಿಲಿಂದ್ ಅವರ ಹಾಗೂ ಅವರ ಅತ್ತೆ ವಯಸ್ಸಿನಲ್ಲಿ ಕೇವಲ ಒಂದು ವರ್ಷದ ಅಂತರ ಮಾತ್ರ ಇದೆ ಎಂದು ಹೇಳಲಾಗುತ್ತಿದೆ. ಈ ಗಮನಾರ್ಹ ವಯಸ್ಸಿನ ವ್ಯತ್ಯಾಸದ ಹೊರತಾಗಿಯೂ, ದಂಪತಿಗಳ ಬಾಂಧವ್ಯ ಮತ್ತು ಬಾಂಧವ್ಯವು ಗಮನಾರ್ಹವಾಗಿದೆ.

# ಫೆಮಿನಾ ಮಿಸ್ ಇಂಡಿಯಾ ಪಟ್ಟ ಗೆದ್ದ ಸಾಧ್ವಿ ಸತೀಶ್ ಸೈಲ್

ಕಾರವಾರ ಶಾಸಕ ಸತೀಶ್ ಸೈಲ್ ಪುತ್ರಿ ಸಾಧ್ವಿ ಸೈಲ್ 61ನೇ ಫೆಮಿನಾ ಮಿಸ್ ಇಂಡಿಯಾ ಕಿರೀಟ ಗೆದ್ದಿದ್ದಾರೆ. 29 ಸ್ಪರ್ಧಿಗಳನ್ನು ಹಿಂದಿಕ್ಕಿ ಗೋವಾ ಪ್ರತಿನಿಧಿಸಿ ಜಯ ಗಳಿಸಿದ ಸಾಧ್ವಿ, 2026ರ ಮಿಸ್ ವರ್ಲ್ಡ್ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಕೆನಡಾದ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರ ಪದವೀಧರೆ ಸಾಧ್ವಿ, ಛಾಯಾಗ್ರಹಣ, ಬ್ಯಾಡ್ಮಿಂಟನ್ ಮತ್ತು ಜೇನುಸಾಕಣೆ ಸೇರಿದಂತೆ ವಿವಿಧ ಹವ್ಯಾಸಗಳನ್ನು ಹೊಂದಿದ್ದಾರೆ.

ಕಾರವಾರ ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ಮಗಳು ಸಾಧ್ವಿ ಸೈಲ್ ಅವರು 61ನೇ ಸಾಲಿನ ಫೆಮಿನಾ ಮಿಸ್ ಇಂಡಿಯಾ ಕಿರೀಟ ಗೆದ್ದು ಸಾಧನೆ ಮಾಡಿದ್ದಾರೆ. ಏಪ್ರಿಲ್ 18ರಂದು ಒಡಿಶಾದ ಭುವನೇಶ್ವರದಲ್ಲಿರುವ ಕಳಿಂಗ ಇನ್ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಟೆಕ್ನಾಲಜಿಯಲ್ಲಿ ಫಿನಾಲೆ ನಡೆದಿದೆ. ಸಾಧ್ವಿ ಅವರು ಗೆದ್ದು ಕೀರಿಟವನ್ನು ತಮ್ಮದಾಗಿಸಿಕೊಂಡಿದ್ದಾರೆ. ಗೆದ್ದ ಬಳಿಕ ತಂದೆಯ ಜೊತೆ ವಿಡಿಯೋ ಕಾಲ್‌ನಲ್ಲಿ ಮಾತನಾಡಿ ಸಾಧ್ವಿ ಖುಷಿಪಟ್ಟಿದ್ದಾರೆ.

ವಿವಿಧ ರಾಜ್ಯಗಳ ಸ್ಪರ್ಧಿಗಳು ಫಿನಾಲೆಯಲ್ಲಿ ಇದ್ದರು. ಒಟ್ಟು 29 ಮಂದಿಯನ್ನು ಹಿಂದಿಕ್ಕಿ ಗೋವಾ ಪ್ರತಿನಿಧಿಸಿದ್ದ ಸಾಧ್ವಿ ಗೆದ್ದಿದ್ದಾರೆ. ಮಹಾರಾಷ್ಟ್ರದ ರಾಜನಂದಿನಿ ಅವರು ಮೊದಲ ರನ್ನರ್ ಅಪ್ ಆದರೆ, ಜಮ್ಮು ಹಾಗೂ ಕಾಶ್ಮೀರದ ಶ್ರೀತಿ ಅದ್ವೈತಾ ಅವರು ಎರಡನೇ ರನ್ನರ್ ಅಪ್ ಆಗಿದ್ದಾರೆ.



ಕಳೆದ ವರ್ಷದ ವಿನ್ನರ್ ನಿಕಿತಾ ಪೋರ್ವಾಲ್ ಅವರು ಸಾಧ್ವಿಗೆ ಕಿರೀಟ ತೊಡಿಸಿದರು.ಕರ್ನಾಟಕವನ್ನು ಪ್ರತಿನಿಧಿಸಿದ್ದ ಖುಷಿ ರಮೇಶ್ ಅವರು ಟಾಪ್ 15ರಲ್ಲಿ ಸ್ಥಾನ ಪಡೆಯಲಷ್ಟೇ ಶಕ್ತರಾದರು.

'ನನಗೆ ಈ ಅವಕಾಶ ಸಿಕ್ಕಿದ್ದಕ್ಕೆ ನಾನು ತುಂಬಾ ಕೃತಜ್ಞಳಾಗಿದ್ದೇನೆ. ಇಲ್ಲಿ ಬಂದ ಪ್ರತಿಯೊಬ್ಬರೂ ವಿಜೇತರು. ಭಾರತವನ್ನು ಹೆಮ್ಮೆ ಪಡುವಂತೆ ಮಾಡುವುದು ನನ್ನ ಉದ್ದೇಶ' ಎಂದು ಸಾಧ್ವಿ ಅವರು ಪ್ರತಿಕ್ರಿಯಿಸಿದ್ದಾರೆ. ಸಾಧ್ವಿ ಅವರು ಕೆನಡಾದ ಬ್ರಿಟಿಷ್ ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರ ಮತ್ತು ಅಂತರರಾಷ್ಟ್ರೀಯ ಸಂಬಂಧಗಳಲ್ಲಿ ಪದವಿ ಪಡೆದಿದ್ದಾರೆ.

ಸಾಧ್ವಿ ಅವರು ಸ್ಪರ್ಧೆಗೆ ಹೋಗುವುದಕ್ಕೂ ಮೊದಲು 10 ಕೆಜಿ ತೂಕ ಇಳಿಸಿಕೊಂಡಿದ್ದರು ಎಂಬುದು ವಿಶೇಷ. ಸಾಧ್ವಿ ವಿವಿಧ ರೀತಿಯ ಹವ್ಯಾಸ ಹೊಂದಿದ್ದಾರೆ. ಛಾಯಾಗ್ರಹಣ, ಬ್ಯಾಡ್ಮಿಂಟನ್, ಜೇನುಸಾಕಣೆ ಮೊದಲಾದವು ಅವರ ಫೇವರಿಟ್ ಹಾಬಿ. ಸಾಧ್ವಿ ಅವರು 2026ರ ಮಿಸ್ ವರ್ಲ್ಡ್ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ.

# ಬಿಗ್ ಬಾಸ್ ವಿನ್ನರ್ ಘೋಷಣೆ

ಬಿಗ್ ಬಾಸ್ ಮರಾಠಿ ಸೀಸನ್ 6 ಗ್ರ್ಯಾಂಡ್ ಫಿನಾಲೆಯಲ್ಲಿ ತನ್ವಿ ಕೋಲ್ಟೆ ವಿಜೇತರಾಗಿ ಹೊರಹೊಮ್ಮಿದ್ದಾರೆ. 15 ಲಕ್ಷ ನಗದು, ವಜ್ರದ ವೋಚರ್ ಮತ್ತು ಇ-ಬೈಕ್ ಗೆದ್ದ ತನ್ವಿ, ತಮ್ಮ ಪ್ರಯಾಣದ ಬಗ್ಗೆ ಮಾತನಾಡಿದರು. ಈ ಗೆಲುವನ್ನು ಕುಟುಂಬಕ್ಕೆ ಹಾಗೂ ತಮ್ಮನ್ನು ನಂಬಿದವರಿಗೆ ಅರ್ಪಿಸಿದ್ದಾರೆ. ಬಿಗ್ ಬಾಸ್ ಮರಾಠಿ ತಮ್ಮನ್ನು ಬ್ರ್ಯಾಂಡ್ ಆಗಿ ಪರಿವರ್ತಿಸಿದೆ ಎಂದು ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ. 'ಬಿಗ್ ಬಾಸ್' ಶೋ ವಿವಿಧ ಭಾಷೆಯಲ್ಲಿ ಪ್ರಸಾರ ಕಾಣುತ್ತಿದೆ. ಅದೇ ರೀತಿ ಮರಾಠಿಯಲ್ಲಿ 'ಬಿಗ್ ಬಾಸ್ 6 ಸೀಸನ್ ಪೂರ್ಣಗೊಂಡಿದೆ. ಮೂರು ತಿಂಗಳ ಹಿಂದೆ ಕಲರ್ಸ್ ಮರಾಠಿ ಚಾನೆಲ್‌ನಲ್ಲಿ ಈ ಶೋ ಪ್ರಾರಂಭವಾಯಿತು. ಈ ಪ್ರಯಾಣವು ಏಪ್ರಿಲ್ 19ರಂದು ಕೊನೆಗೊಂಡಿತು.

'ಬಿಗ್ ಬಾಸ್ ಮರಾಠಿ ಸೀಸನ್ 6' ರ ಗ್ರ್ಯಾಂಡ್ ಫಿನಾಲೆಯಲ್ಲಿ ತನ್ವಿ ಕೋಲ್ಟೆ ಪ್ರಶಸ್ತಿಯನ್ನು ಗೆದ್ದರು. ಕೊನೆಯವರೆಗೂ ಯಾರು ಗೆಲ್ಲುತ್ತಾರೆ ಎಂಬ ಕುತೂಹಲ ಇತ್ತು. ತನ್ವಿ ಗೆಲುವಿನ ನಗೆ ಬೀರಿದರು. ವಿಜೇತರಿಗೆ ಕಲರ್ಸ್ ಮರಾಠಿಯಿಂದ 15 ಲಕ್ಷ ರೂ. ನಗದು ಬಹುಮಾನ ಮತ್ತು ಟ್ರೋಫಿಯನ್ನು ನೀಡಲಾಯಿತು . ವಜ್ರದ ಆಭರಣಗಳನ್ನು ಖರೀದಿಸಲು 10 ಲಕ್ಷ ರೂ.ಗಳ ವೋಚರ್ ಅನ್ನು ನೀಡಲಾಯಿತು. ವಿಜೇತರಿಗೆ ಇ-ಬೈಕ್ ಅನ್ನು ಸಹ ನೀಡಲಾಗಿದೆ. ರಿತೇಶ್ ದೇಶ್‌ಮುಖ್ ಈ ಘೋಷಣೆ ಮಾಡಿದರು. ಆ ಬಳಿಕ ಮಾತನಾಡಿದ ತನ್ವಿ, 'ಈ ಪ್ರಯಾಣ ನನಗೆ ತುಂಬಾ ವಿಶೇಷವಾಗಿದೆ. ಈ ಮನೆ ನನ್ನನ್ನು ನಾನು ತಿಳಿದುಕೊಳ್ಳಲು, ಪ್ರತಿಯೊಂದು ಸನ್ನಿವೇಶದಲ್ಲೂ ಬಲವಾಗಿರಲು ನನಗೆ ಕಲಿಸಿದೆ. ಪ್ರೇಕ್ಷಕರು ನೀಡಿದ ಪ್ರೀತಿ ಮತ್ತು ಬೆಂಬಲವೇ ನನ್ನ ನಿಜವಾದ ಶಕ್ತಿ. ನಾನು ಈ ಗೆಲುವನ್ನು ನನ್ನ ಕುಟುಂಬ ಮತ್ತು ನನ್ನಲ್ಲಿ ನಂಬಿಕೆ ಇಡುವ ಎಲ್ಲರಿಗೂ ಅರ್ಪಿಸುತ್ತೇನೆ' ಎಂದರು.

# ವಿಜಯ್-ಸಂಗೀತಾ ಡಿವೋರ್ಸ್ ಕೇಸ್‌ಗೆ ಬಿಗ್ ಟ್ವಿಸ್ಟ್!



ತಮಿಳು ಸೂಪರ್ ಸ್ಟಾರ್ ವಿಜಯ್ ಮತ್ತು ಸಂಗೀತಾ ಸಂಸಾರದಲ್ಲಿ ಬಿರುಗಾಳಿ ಎದ್ದಿದ್ದೋದು ಈಗ ಹಳೆಯ ಸುದ್ದಿ. ಆದರೆ ಕೋರ್ಟ್‌ನಲ್ಲಿ ನಡೆದ ಹೈಡ್ರಾಮಾ ಮತ್ತು ದಂಪತಿ ತೆಗೆದುಕೊಂಡ ಆ ಒಂದು ನಿರ್ಧಾರ ಅಭಿಮಾನಿಗಳಿಗೆ ಶಾಕ್ ನೀಡಿದೆ!

ತಮಿಳು ಚಿತ್ರರಂಗದ 'ದಳಪತಿ' ಹಾಗೂ ಟಿವಿಕೆ ಪಕ್ಷದ ನಾಯಕ ವಿಜಯ್ ಮತ್ತು ಅವರ ಪತ್ನಿ ಸಂಗೀತಾ ಅವರ ವಿಚ್ಛೇದನ ಪ್ರಕರಣ ಈಗ ಇಡೀ ದಕ್ಷಿಣ ಭಾರತದಲ್ಲೇ ಭಾರಿ ಚರ್ಚೆಗೆ ಕಾರಣವಾಗಿದೆ. ಫೆಬ್ರವರಿ 24, 2026 ರಂದು ಚೆಂಗಲ್ಪಟ್ಟು ಕೌಟುಂಬಿಕ ನ್ಯಾಯಾಲಯದಲ್ಲಿ ಸಂಗೀತಾ ಅವರು ಕೇಸ್ ದಾಖಲಿಸಿದ್ದರು. ಏಪ್ರಿಲ್ 20 ರಂದು ನಡೆದ ವಿಚಾರಣೆ ವೇಳೆ ಇಬ್ಬರೂ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಬೇಕಿತ್ತು.

ರಾಜಕೀಯ ಚುನಾವಣೆ ಮತ್ತು ಭದ್ರತಾ ಕಾರಣಗಳಿಂದಾಗಿ ವಿಜಯ್ ಅವರು ಖುದ್ದಾಗಿ ಕೋರ್ಟ್‌ಗೆ ಬರಲು ಸಾಧ್ಯವಾಗದಿದ್ದರೂ, ಇಂದಿನ ಬೆಳವಣಿಗೆಗಳು ಪ್ರಕರಣಕ್ಕೆ ಹೊಸ ತಿರುವು ನೀಡಿವೆ. ಸಂಗೀತಾ ಅವರು ಸಲ್ಲಿಸಿರುವ ಅರ್ಜಿಯಲ್ಲಿ ವಿಜಯ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ವಿಜಯ್ ಅವರಿಗೆ ಒಬ್ಬ ನಟಿಯ ಜೊತೆ ಅಕ್ರಮ ಸಂಬಂಧ ಇತ್ತು ಎಂಬ ವಿಷಯ ನನಗೆ 2021 ರಲ್ಲಿ ತಿಳಿಯಿತು ಎಂದು ಅವರು ಉಲ್ಲೇಖಿಸಿದ್ದಾರೆ. ಇದೇ ಕಾರಣದಿಂದ ಮನನೊಂದು ನಾನು ಕಾನೂನುಬದ್ಧವಾಗಿ ವಿಚ್ಛೇದನ ಪಡೆಯಲು ನಿರ್ಧರಿಸಿದೆ ಎಂದು ಸಂಗೀತಾ ಕೋರ್ಟ್‌ಗೆ ವಿವರಿಸಿದ್ದಾರೆ. ಸ್ಪೆಶಲ್ ಮ್ಯಾರೇಜ್ ಆಕ್ಟ್ ಅಡಿಯಲ್ಲಿ ಈ ಪ್ರಕರಣ ದಾಖಲಾಗಿದೆ. ಇಂದಿನ ವಿಚಾರಣೆಯ ಪ್ರಮುಖ ಹೈಲೈಟ್ ಅಂದರೆ, ವಿಜಯ್ ಮತ್ತು ಸಂಗೀತಾ ಇಬ್ಬರೂ ಸೇರಿ ಒಂದು ಹೊಸ ಜಂಟಿ ಅರ್ಜಿ ಸಲ್ಲಿಸಿದ್ದಾರೆ. ಪರಸ್ಪರ ಒಪ್ಪಿಗೆಯೊಂದಿಗೆ ನಾವು ಬೇರೆಯಾಗಲು ನಿರ್ಧರಿಸಿದ್ದೇವೆ ಎಂದು ಅಧಿಕೃತವಾಗಿ ಘೋಷಿಸಿದ್ದಾರೆ.



# ದುಡ್ಡು ಮಾಡಲು ಅಶ್ಲೀಲ ಫೋಟೋ ಹಂಚಿಕೆ

ನಟಿ ಅನನ್ಯ ನಾಗಲ್ಲಾ ಇತ್ತೀಚೆಗೆ ಚಂದಾದಾರಿಕೆ ಆಯ್ಕೆಯನ್ನು ಪ್ರಾರಂಭಿಸಿ ವಿವಾದಕ್ಕೀಡಾಗಿದ್ದರು. ಕೆಲವರು ವಯಸ್ಕ ವಿಷಯ ಹಂಚುತ್ತಿದ್ದಾರೆಂದು ತಪ್ಪಾಗಿ ಭಾವಿಸಿದ್ದರು. ಇದಕ್ಕೆ ನಟಿ ತೀವ್ರ ತಿರುಗೇಟು ನೀಡಿದ್ದು, ತಮ್ಮ ಚಂದಾದಾರಿಕೆ ಕೇವಲ ಭಕ್ತಿ ವಿಷಯ, ವೈಯಕ್ತಿಕ ಜೀವನ ಮತ್ತು ದೇವಾಲಯ ಭೇಟಿಗಳ ಬಗ್ಗೆ ಮಾತ್ರ ಎಂದು ಸ್ಪಷ್ಟಪಡಿಸಿದ್ದಾರೆ. ಅನನ್ಯ ನಾಗಲ್ಲ ಚಿತ್ರರಂಗದಲ್ಲಿ ಈಗತಾನೇ ಹೆಸರು ಮಾಡುತ್ತಿದ್ದಾರೆ.

ತೆಲುಗಿನಲ್ಲಿ ಆ್ಯಕ್ಟೀವ್ ಆಗಿರೋ ಅವರು 'ಮಲ್ಲೇಶಂ' ಚಿತ್ರದ ಮೂಲಕ ಬಣ್ಣದ ಲೋಕಕ್ಕೆ ಪಾದಾರ್ಪಣೆ ಮಾಡಿದರು. 'ವಕೀಲ್ ಸಾಬ್' ಚಿತ್ರದ ಮೂಲಕ ಹೆಸರನ್ನು ಗಳಿಸಿದರು. ಈಗ ಅವರು ವಿವಿಧ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ಆದಾಗ್ಯೂ, ಪ್ರಸ್ತುತ ಈ ನಟಿ ಸಾಮಾಜಿಕ ಮಾಧ್ಯಮದಲ್ಲಿ ಚರ್ಚೆಯ ವಿಷಯವಾಗಿದ್ದಾರೆ. ಅವರು ಒಂದು ವಿವಾದಕ್ಕೆ ಸ್ಪಷ್ಟನೆ ನೀಡಿದ್ದಾರೆ.

ಅನನ್ಯ ಅವರು ಇತ್ತೀಚೆಗೆ ಇನ್‌ಸ್ಟಾಗ್ರಾಮ್‌ನಲ್ಲಿ 'ಚಂದಾದಾರಿಕೆ' ಆಯ್ಕೆಯನ್ನು ಪ್ರಾರಂಭಿಸಿದರು. ಇದನ್ನು ತಪ್ಪಾಗಿ ಅರ್ಥೈಸಿಕೊಂಡು ಕೆಲವರು ಟೀಕಿಸಿದರು. ಅವರು ಈ ವಿಷಯದ ಬಗ್ಗೆ ಗಂಭೀರವಾಗಿ ತಿರುಗೇಟು ನೀಡಿದ್ದಾರೆ.ಈ ಮೂಲಕ ವಿವಾದಕ್ಕೆ ತೆರೆ ಎಳೆದಿದ್ದಾರೆ.

ಅನನ್ಯಾ ಅವರು ಚಂದಾದಾರಿಕೆ ಹೆಸರಲ್ಲಿ 'ವಯಸ್ಕ' ಅಥವಾ 'ಅಶ್ಲೀಲ' ವಿಷಯವನ್ನು ಪೋಸ್ಟ್ ಮಾಡುತ್ತಿದ್ದಾರೆ ಎಂದು ಕೆಲವರು ಸಾಮಾಜಿಕ ಮಾಧ್ಯಮಗಳಲ್ಲಿ ವದಂತಿಗಳನ್ನು ಹರಡಲು ಆರಂಭ ಆಗಿದೆ. ಅನನ್ಯಾ ನಾಗಲ್ಲ ಈ ಆರೋಪಗಳನ್ನು ಬಲವಾಗಿ ನಿರಾಕರಿಸಿದ್ದಾರೆ. ಚಂದಾದಾರಿಕೆ ಯೋಜನೆಯಲ್ಲಿ ಅವರು ಪೋಸ್ಟ್ ಮಾಡುತ್ತಿರುವುದು ಕೇವಲ ಭಕ್ತಿ ವಿಷಯ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# 11 ಅಂಕಗಳು ಐಪಿಎಲ್‌ನಲ್ಲಿ ಹೊಸ ಚರಿತ್ರೆ ಬರೆದ ಪಂಜಾಬ್ ಕಿಂಗ್ಸ್

ಇಂಡಿಯನ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲಿ ಯಾವುದೇ ತಂಡಕ್ಕೂ ಸಾಧ್ಯವಾಗದ ವಿಶೇಷ ದಾಖಲೆಯೊಂದನ್ನು ಪಂಜಾಬ್ ಕಿಂಗ್ಸ್ ತಂಡ ನಿರ್ಮಿಸಿದೆ.

ಅದು ಸಹ 11 ಅಂಕಗಳನ್ನು ಕಲೆಹಾಕುವ ಮೂಲಕ. ಈ ಪಾಯಿಂಟ್ಸ್‌ಗಳೊಂದಿಗೆ ಪಂಜಾಬ್ ಪಡೆ ಹೊಸ ಇತಿಹಾಸ ನಿರ್ಮಿಸಿದೆ. ಮುಲ್ಲನ್‌ಪುರ್‌ನಲ್ಲಿ ನಡೆದ ಐಪಿಎಲ್‌ನ 29ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವು ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 254 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಎಲ್‌ಎಸ್‌ಜಿ 200 ರನ್‌ಗಳಿಸಲಷ್ಟೇ ಶಕ್ತರಾದರು. ಈ ಮೂಲಕ ಪಂಜಾಬ್ ಕಿಂಗ್ಸ್ 54 ರನ್‌ಗಳ ಗೆಲುವು ದಾಖಲಿಸಿದೆ.

ಈ ಗೆಲುವಿನೊಂದಿಗೆ ಐಪಿಎಲ್ ಇತಿಹಾಸದಲ್ಲಿ ಮೊದಲ 6 ಪಂದ್ಯಗಳಲ್ಲಿ ಒಂದೇ ಒಂದು ಸೋಲು ಕಾಣದ ಮೊದಲ ತಂಡವೆಂಬ ಹೆಗ್ಗಳಿಕೆಯನ್ನು ಪಂಜಾಬ್ ಕಿಂಗ್ಸ್ ತನ್ನದಾಗಿಸಿಕೊಂಡಿದೆ. ಅಂದರೆ ಐಪಿಎಲ್‌ನಲ್ಲಿ ಯಾವುದೇ ತಂಡ ಮೊದಲ 6 ಮ್ಯಾಚ್‌ಗಳಲ್ಲಿ ಸೋಲದೇ ಈವರೆಗೆ ಪಾಯಿಂಟ್ಸ್ ಗಳಿಸಿರಲಿಲ್ಲ. ಆದರೆ ಈ ಬಾರಿ ಪಂಜಾಬ್ ಕಿಂಗ್ಸ್ ಮೊದಲ 6 ಪಂದ್ಯಗಳಲ್ಲಿ 5 ರಲ್ಲಿ ಭರ್ಜರಿ ಗೆಲುವು ದಾಖಲಿಸಿದೆ. ಇನ್ನು ಒಂದು ಪಂದ್ಯವು ಮಳೆಯಿಂದಾಗಿ ರದ್ದಾಗಿತ್ತು. ಈ ಪಂದ್ಯದ ಮೂಲಕ ಕೂಡ ಒಂದು ಅಂಕ ಪಡೆದುಕೊಂಡಿದೆ. ಈ ಮೂಲಕ ಮೊದಲ 6 ಪಂದ್ಯಗಳಲ್ಲಿ 11 ಅಂಕಗಳನ್ನು ಕಲೆಹಾಕಿದ ಮೊದಲ



ತಂಡವೆಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಇದಕ್ಕೂ ಮುನ್ನ ಇಂತಹದೊಂದು ಅಪರೂಪದ ದಾಖಲೆ ರಾಜಸ್ಥಾನ್ ರಾಯಲ್ಸ್ ತಂಡದ ಹೆಸರಿನಲ್ಲಿತ್ತು. 2015 ರಲ್ಲಿ ರಾಜಸ್ಥಾನ್ ರಾಯಲ್ಸ್ ಮೊದಲ 5 ಪಂದ್ಯಗಳಲ್ಲಿ ಗೆಲುವು ದಾಖಲಿಸಿ ಒಟ್ಟು 10 ಅಂಕಗಳನ್ನು ಪಡೆದುಕೊಂಡಿದ್ದರು. ಈ ಮೂಲಕ ಐಪಿಎಲ್ ಇತಿಹಾಸದಲ್ಲಿ ಮೊದಲ ಐದು ಮ್ಯಾಚ್‌ಗಳಲ್ಲಿ ಗೆದ್ದ ತಂಡವೆಂಬ ದಾಖಲೆ ನಿರ್ಮಿಸಿದ್ದರು.

ಇದೀಗ ಈ ದಾಖಲೆಯನ್ನು ಅಳಿಸಿ ಹಾಕುವಲ್ಲಿ ಪಂಜಾಬ್ ಕಿಂಗ್ಸ್ ಯಶಸ್ವಿಯಾಗಿದೆ. ಶ್ರೇಯಸ್ ಅಯ್ಯರ್ ಮುಂದಾಳತ್ವದ ಪಂಜಾಬ್ ಪಡೆಯು ಈ ಬಾರಿ ಟೂರ್ನಿಯಲ್ಲಿ ಈವರೆಗೆ 6 ಪಂದ್ಯಗಳನ್ನಾಡಿದ್ದು, ಈ ವೇಳೆ ಒಂದೇ ಒಂದು ಮ್ಯಾಚ್ ಸೋತಿಲ್ಲ. ಈ ಮೂಲಕ ಐಪಿಎಲ್ ಇತಿಹಾಸದಲ್ಲೇ ಮೊದಲ 6 ಪಂದ್ಯಗಳ ಮೂಲಕ 11 ಅಂಕಗಳನ್ನು ಪಡೆದ ಮೊದಲ ತಂಡವೆಂಬ ಭರ್ಜರಿ ದಾಖಲೆ ನಿರ್ಮಿಸಿದೆ.

# ಸೋಲುತ್ತಿದ್ದಂತೆ ಕಣ್ಣೀರಿಟ್ಟ ವೈಭವ್

ಇಂಡಿಯನ್ ಪ್ರೀಮಿಯರ್ ಲೀಗ್‌ನ 29ನೇ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡ ಸೋಲನುಭವಿಸಿದೆ. ಈ ಸೋಲಿನ ಬೆನ್ನಲ್ಲೇ ಎಲ್ಲರ ಕಣ್ಣು ನೆಟ್ಟಿದ್ದು 15 ವರ್ಷದ ಯುವ ಆಟಗಾರ ವೈಭವ್ ಸೂರ್ಯವಂಶಿ ಮೇಲೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ರಾಜಸ್ಥಾನ್ ರಾಯಲ್ಸ್ ತಂಡವು 20 ಓವರ್‌ಗಳಲ್ಲಿ 155 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಕೆಕೆಆರ್ 19.4 ಓವರ್‌ಗಳಲ್ಲಿ 161 ರನ್‌ಗಳಿಸಿ 4 ವಿಕೆಟ್‌ಗಳ ಜಯ ಸಾಧಿಸಿತು.

ಅತ್ತ ಕೆಕೆಆರ್ ಆಟಗಾರರು ಗೆದ್ದ ಖುಷಿಯಲ್ಲಿದ್ದರೆ, ಇತ್ತ ಸೋತ ನೋವಿನಲ್ಲಿ



ವೈಭವ್ ಸೂರ್ಯವಂಶಿ ಭಾವುಕರಾಗಿ ಕಣ್ಣೀರಿಟ್ಟರು. ಇದೀಗ ಯುವ ಆಟಗಾರ ಕಣ್ಣೀರಿಡುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಅಭಿಮಾನಿಗಳ ಮನ ಮಿಡಿಯುವಂತೆ ಮಾಡಿದೆ.

**ಅಬ್ಬರದ ಆರಂಭ, ಆಘಾತಕಾರಿ ಅಂತ್ಯ:** ಈ ಪಂದ್ಯದಲ್ಲಿ ವೈಭವ್ ಸೂರ್ಯವಂಶಿ ಕೇವಲ 28 ಎಸೆತಗಳಲ್ಲಿ 46 ರನ್ ಬಾರಿಸಿ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಸ್ಫೋಟಕ ಆರಂಭ ನೀಡಿದ್ದರು.

ಅವರ ಬ್ಯಾಟಿಂಗ್‌ನಲ್ಲಿ 6 ಬೌಂಡರಿ ಹಾಗೂ 2 ಸಿಕ್ಸರ್‌ಗಳಿದ್ದವು. ಆದರೆ, ವರುಣ್ ಚಕ್ರವರ್ತಿ ಎಸೆದ 9ನೇ ಓವರ್‌ನಲ್ಲಿ ದೊಡ್ಡ ಹೊಡೆತಕ್ಕೆ ಕೈಹಾಕಿ ಔಟ್ ಆಗಿದ್ದು ಪಂದ್ಯದ ಲಯವನ್ನೇ ಬದಲಿಸಿತು. ವೈಭವ್ ಸೂರ್ಯವಂಶಿ ಔಟಾಗುತ್ತಿದ್ದಂತೆ ಆರ್‌ಆರ್ ತಂಡ ರನ್ ಗತಿ ಇಳಿಕೆಯಾಯಿತು. ಇದರ ಜೊತೆಗೆ ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳು ವೈಫಲ್ಯ ಅನುಭವಿಸಿದರು.

ಪರಿಣಾಮ ಆರ್‌ಆರ್ 20 ಓವರ್‌ಗಳಲ್ಲಿ 155 ರನ್‌ಗಳಿಸಿ ಇನಿಂಗ್ಸ್ ಅಂತ್ಯಗೊಳಿಸಿತು.

**ಗೆಲ್ಲುವ ಅವಕಾಶ ಕೈ ಚೆಲ್ಲಿದ ಆರ್‌ಆರ್:** ಅಲ್ಪ ಮೊತ್ತವನ್ನು ಕಲೆಹಾಕಿದ್ದರೂ ರಾಜಸ್ಥಾನ್ ರಾಯಲ್ಸ್ ತಂಡದ ಬೌಲರ್‌ಗಳು ಅತ್ಯುತ್ತಮ ದಾಳಿ ಸಂಘಟಿಸಿದ್ದರು. ಪರಿಣಾಮ ಕೆಕೆಆರ್ ತಂಡಕ್ಕೆ ಕೊನೆಯ ಮೂರು ಓವರ್‌ಗಳಲ್ಲಿ 28 ರನ್‌ಗಳು ಬೇಕಿದ್ದವು. 18ನೇ ಓವರ್ ಎಸೆದ ಬ್ರಿಜೇಶ್ ನೀಡಿದ್ದು ಕೇವಲ 7 ರನ್‌ಗಳು ಮಾತ್ರ. ಇನ್ನು 19ನೇ ಓವರ್‌ನಲ್ಲಿ ಜೋಫ್ರಾ ಆರ್ಚರ್ 12 ರನ್ ಬಿಟ್ಟು ಕೊಟ್ಟರು. ಇದಾಗ್ಯೂ ಕೊನೆಯ ಓವರ್‌ನಲ್ಲಿ 9 ರನ್‌ಗಳು ಬೇಕಿದ್ದವು. ಈ ವೇಳೆ ದಾಳಿಗಿಳಿದ ಬ್ರಿಜೇಶ್ ಶರ್ಮಾ 4, 4, 6 ಹೊಡೆಸಿಕೊಳ್ಳುವ ಮೂಲಕ ಪಂದ್ಯವನ್ನು ಕೈಚೆಲ್ಲಿಕೊಂಡರು.

**ಭಾವುಕರಾದ ವೈಭವ್:** ರಾಜಸ್ಥಾನ್ ರಾಯಲ್ಸ್ ತಂಡವು ಕೊನೆಯ ಓವರ್‌ನಲ್ಲಿ ಸೋಲುತ್ತಿದ್ದಂತೆ ಭಾವುಕರಾದ ವೈಭವ್ ಸೂರ್ಯವಂಶಿ ಮೈದಾನದ ಹೊರಕ್ಕೆ ಬಂದು ಕೂತು ಕಣ್ಣೀರಿಟ್ಟರು.

ಹೀಗೆ ವೈಭವ್ ಅಳುತ್ತಿರುವುದನ್ನು ಕಂಡ ಆರ್‌ಆರ್ ಮತ್ತು ಕೆಕೆಆರ್ ಆಟಗಾರರು ಯುವ ದಾಂಡಿಗನನ್ನು ಸಂತೈಸಿದರು. ಇದೀಗ ವೈಭವ್ ಸೂರ್ಯವಂಶಿ ಅಳುತ್ತಿರುವ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

# ಭಾರತದ ಪೌರತ್ವದ ಆಫರ್ ತಿರಸ್ಕರಿಸಿದ್ದ ರಶೀದ್ ಖಾನ್

ಅಫ್ಘಾನಿಸ್ತಾನ ಕ್ರಿಕೆಟ್ ತಂಡದ ನಾಯಕ ಮತ್ತು ಐಪಿಎಲ್‌ನ ಸ್ಟಾರ್ ಬೌಲರ್ ರಶೀದ್ ಖಾನ್ ಮತ್ತೆ ಸುದ್ದಿಯಲ್ಲಿದ್ದಾರೆ. ಈ ಬಾರಿ ಸುದ್ದಿಯಾಗಿರುವುದು ಭರ್ಜರಿ ಪ್ರದರ್ಶನದಿಂದ ಅಲ್ಲ. ಬದಲಾಗಿ ತಮ್ಮ ಮುಂಬರುವ ಆತ್ಮಕಥೆ "Rashid Khan: From Streets to Stardom" ನಿಂದ. ಈ ಆತ್ಮಕಥೆಯಲ್ಲಿ ರಶೀದ್ ಖಾನ್ ಹಲವು ಕುತೂಹಲಕಾರಿ ವಿಷಯಗಳನ್ನು ಬಿಚ್ಚಿಟ್ಟಿದ್ದಾರೆ. ಇದರಲ್ಲೊಂದು ಭಾರತದ ಪೌರತ್ವದ ಆಫರ್..!

ಹೌದು, ರಶೀದ್ ಖಾನ್ ತಮಗೆ ಭಾರತದ ಪೌರತ್ವದ ಆಫರ್ ಬಂದಿತ್ತು ಎಂಬ ವಿಚಾರವನ್ನು ಬಹಿರಂಗಪಡಿಸಿದ್ದಾರೆ. ಈ ಆಫರ್ ಹೊರತಾಗಿಯೂ ನಾನು ಅಫ್ಘಾನಿಸ್ತಾನ್ ಪರವೇ ಆಡಲು ನಿರ್ಧರಿಸಿದ್ದೆ. ಈ ಬಗ್ಗೆ ನನಗೆ ಹೆಮ್ಮೆಯಿದೆ ಎಂದು ತಿಳಿಸಿದ್ದಾರೆ.

**ಭಾರತ ಮತ್ತು ಆಸ್ಟ್ರೇಲಿಯಾದಿಂದ ಆಫರ್:** 2023ರ ಐಪಿಎಲ್ ಸೀಸನ್ ವೇಳೆ ಭಾರತೀಯ ಕ್ರಿಕೆಟ್ ಮಂಡಳಿಯ ಉನ್ನತ ಅಧಿಕಾರಿಯೊಬ್ಬರು ರಶೀದ್ ಖಾನ್ ಅವರನ್ನು ಭೇಟಿಯಾಗಿ ಭಾರತದ ಪೌರತ್ವ ಪಡೆಯುವಂತೆ ಮತ್ತು ಭಾರತದ ಪರವಾಗಿ ಆಡುವಂತೆ ಆಫರ್ ನೀಡಿದ್ರಂತೆ.

ಕೇವಲ ಭಾರತ ಮಾತ್ರವಲ್ಲದೆ, ಆಸ್ಟ್ರೇಲಿಯಾ ಕೂಡ ಅವರಿಗೆ ಪೌರತ್ವ ನೀಡಲು ಮುಂದಾಗಿತ್ತು ಎಂದು ಪುಸ್ತಕದಲ್ಲಿ ಉಲ್ಲೇಖಿಸಲಾಗಿದೆ.

ಈ ಆಫರ್ ಕೇಳಿ ನಿಜಕ್ಕೂ ನಾನು ಆಶ್ಚರ್ಯಗೊಂಡಿದ್ದೆ. ಅಲ್ಲದೆ ''ನಾನು ನನ್ನ ಸ್ವಂತ ದೇಶಕ್ಕಾಗಿ ಮಾತ್ರ ಆಡುತ್ತೇನೆ, ಇದರ ಹೊರತಾಗಿ ಬೇರೆ ಯಾವ ದೇಶಕ್ಕಾಗಿಯೂ ಆಡುವುದಿಲ್ಲ'' ಎಂದು ಹೇಳುವ ಮೂಲಕ ಈ ಆಫರ್‌ಗಳನ್ನು ನಿರಾಕರಿಸಿದ್ದೆ ಎಂದು ರಶೀದ್ ಖಾನ್ ಹೇಳಿದ್ದಾರೆ. ಅಫ್ಘಾನಿಸ್ತಾನದಲ್ಲಿ ರಾಜಕೀಯ ಪರಿಸ್ಥಿತಿ ಹದಗೆಟ್ಟಿದ್ದರೂ ಸಹ, ತಮ್ಮ ತಾಯ್ನಾಡಿನ ಮೇಲಿರುವ ನಿಷ್ಠೆಯಿಂದಾಗಿ ನಾನು ಈ ನಿರ್ಧಾರ ತೆಗೆದುಕೊಂಡಿರುವುದಾಗಿ ರಶೀದ್ ಖಾನ್ ತಮ್ಮ ಆತ್ಮಕಥೆಯಲ್ಲಿ ಉಲ್ಲೇಖಿಸಿದ್ದಾರೆ.

2018ರ ಐಪಿಎಲ್‌ನಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಪರ ರಶೀದ್ ಖಾನ್ ಅವರ ಭರ್ಜರಿ ಪ್ರದರ್ಶನ ಕಂಡು ಅನೇಕ ಅಭಿಮಾನಿಗಳು ಅವರಿಗೆ ಭಾರತೀಯ ಪೌರತ್ವ ನೀಡುವಂತೆ ಸಾಮಾಜಿಕ ಜಾಲತಾಣಗಳಲ್ಲಿ ಆಗಿನ ವಿದೇಶಾಂಗ ಸಚಿವೆ ಸುಷ್ಮಾ ಸ್ವರಾಜ್ ಅವರಿಗೆ ಮನವಿ ಮಾಡಿದ್ದರು.

ಆ ಸಂದರ್ಭದಲ್ಲಿ ಅಫ್ಘಾನ್ ಅಧ್ಯಕ್ಷ ಅಶ್ರಫ್ ಘನಿ ಅವರು ರಶೀದ್ ಅಫ್ಘಾನಿಸ್ತಾನದ ಹೆಮ್ಮೆ ಎಂದು ಹೇಳಿಕೆ ನೀಡಿದ್ದರು. ಇದೀಗ ಈ ಎಲ್ಲಾ ವಿಚಾರಗಳನ್ನು ರಶೀದ್ ಖಾನ್ ತಮ್ಮ "Rashid Khan: From Streets to Stardom" ಆತ್ಮಕಥಾ ಪುಸ್ತಕದ ಮೂಲಕ ಬಹಿರಂಗಪಡಿಸಿದ್ದಾರೆ.

ಸದ್ಯ ಗುಜರಾತ್ ಟೈಟಾನ್ಸ್ ಪರ ಐಪಿಎಲ್ ಆಡುತ್ತಿರುವ ರಶೀದ್ ಖಾನ್ 5 ಪಂದ್ಯಗಳಿಂದ ಕೇವಲ 6 ವಿಕೆಟ್ ಮಾತ್ರ ಪಡೆದಿದ್ದಾರೆ. ಇನ್ನು ಐಪಿಎಲ್‌ನಲ್ಲಿ ಈವರೆಗೆ 141 ಮ್ಯಾಚ್‌ಗಳನ್ನಾಡಿರುವ ಅಫ್ಘಾನ್ ಸ್ಪಿನ್ನರ್ 3309 ಎಸೆತಗಳಲ್ಲಿ 3920 ರನ್ ನೀಡಿ 164 ವಿಕೆಟ್ ಕಬಳಿಸಿದ್ದಾರೆ.

ಈ ಮೂಲಕ ಐಪಿಎಲ್‌ನಲ್ಲಿ 150+ ವಿಕೆಟ್ ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.



# ರವೀಂದ್ರ ಜಡೇಜಾನ ಕಡೆಗಣಿಸಿ ಪಂದ್ಯ ಸೋತ ರಾಜಸ್ಥಾನ್ ರಾಯಲ್ಸ್

ಇಂಡಿಯನ್ ಪ್ರೀಮಿಯರ್ ಲೀಗ್‌ನ 28ನೇ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡ ಸೋಲನುಭವಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ರಾಜಸ್ಥಾನ್ ರಾಯಲ್ಸ್ ತಂಡವು 20 ಓವರ್‌ಗಳಲ್ಲಿ ಕಲೆಹಾಕಿದ್ದು 155 ರನ್‌ಗಳು ಮಾತ್ರ. ಈ ಗುರಿಯನ್ನು ಬೆನ್ನತ್ತಿದ ಕೆಕೆಆರ್ ತಂಡವು ಕೊನೆಯ ಓವರ್‌ನಲ್ಲಿ ಗೆಲುವು ದಾಖಲಿಸಿತ್ತು. ಅಂದರೆ ಈ ಪಂದ್ಯದಲ್ಲಿ ಗೆಲ್ಲುವ ಅವಕಾಶ ರಾಜಸ್ಥಾನ್ ರಾಯಲ್ಸ್ ತಂಡದ ಮುಂದಿತ್ತು. ಇದಾಗ್ಯೂ ನಾಯಕ ರಿಯಾನ್ ಪರಾಗ್ ತೆಗೆದುಕೊಂಡ ಒಂದು ನಿರ್ಧಾರದಿಂದ ಆರ್‌ಆರ್ ಪಡೆ ಸೋಲನುಭವಿಸಿದೆ ಎಂದು ವಿಶ್ಲೇಷಿಸಲಾಗುತ್ತಿದೆ.


**ಸೋಲಿಗೆ ಕಾರಣವೇನು:** ಈ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಅತ್ಯುತ್ತಮ ದಾಳಿ ಸಂಘಟಿಸಿದ್ದು ರವೀಂದ್ರ ಜಡೇಜಾ. ಮೂರು ಓವರ್‌ಗಳನ್ನು ಎಸೆದಿದ್ದ ಜಡೇಜಾ ಕೇವಲ 8 ರನ್ ನೀಡಿ 2 ವಿಕೆಟ್ ಕಬಳಿಸಿದ್ದರು. ಇದಾಗ್ಯೂ ರಿಯಾನ್ ಪರಾಗ್ ಅವರು ರವೀಂದ್ರ ಜಡೇಜಾ ಅವರಿಗೆ ಪೂರ್ಣ ನಾಲ್ಕು ಓವರ್‌ಗಳನ್ನು ಬೌಲ್ ಮಾಡಲು ಅವಕಾಶ ನೀಡಲಿಲ್ಲ ಎಂಬುದೇ ಅಚ್ಚರಿ.

ಅದರಲ್ಲೂ ನಿರ್ಣಾಯಕ ಹಂತದಲ್ಲಿ ಜಡೇಜಾ ಅವರ ಅನುಭವವನ್ನು ಬಳಸಿಕೊಳ್ಳಲು ರಿಯಾನ್ ಪರಾಗ್ ಮುಂದಾಗಲಿಲ್ಲ. ಬದಲಾಗಿ ಡೆತ್ ಓವರ್‌ಗಳಲ್ಲಿ ಅನ್-ಕ್ಯಾಪ್ಡ್ ಬೌಲರ್ ಬ್ರಿಜೇಶ್ ಶರ್ಮಾ ಅವರಿಗೆ ಚೆಂಡನ್ನು ನೀಡಿದರು. ಹೀಗೆ ಎಸೆದ 10 ಎಸೆತಗಳಲ್ಲಿ ಬ್ರಿಜೇಶ್ ನೀಡಿದ್ದು ಬರೋಬ್ಬರಿ 21 ರನ್‌ಗಳು.

ನಿರ್ಣಾಯಕ ಹಂತದಲ್ಲಿ ಬ್ರಿಜೇಶ್ ಶರ್ಮಾ ನೀಡಿದ 21 ರನ್‌ಗಳಿಂದ ರಾಜಸ್ಥಾನ್ ರಾಯಲ್ಸ್ ತಂಡ ಸೋಲನುಭವಿಸಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಏಕೆಂದರೆ ರವೀಂದ್ರ ಜಡೇಜಾಗೆ ಒಂದು ಓವರ್ ಇದ್ದರೂ ಅದನ್ನು ಮಧ್ಯ ಭಾಗದಲ್ಲಿ ಹಾಕಿಸಿ, ಕೊನೆಯ ಹಂತದಲ್ಲಿ ಜೋಫ್ರಾ ಆರ್ಚರ್ ಅವರನ್ನು ಬಳಸಿಕೊಳ್ಳಲು ಆರ್‌ಆರ್ ತಂಡಕ್ಕೆ ಉತ್ತಮ ಅವಕಾಶವಿತ್ತು. ಆದರೆ ರಿಯಾನ್ ಪರಾಗ್ ತೆಗೆದುಕೊಂಡ ಒಂದು ನಿರ್ಧಾರವು ಆರ್‌ಆರ್ ಪಾಲಿಗೆ ಮುಳುವಾಯಿತು.

**ರಿಯಾನ್ ಪರಾಗ್ ಸಮರ್ಥನೆ:** ಪಂದ್ಯದ ನಂತರ ಮಾತನಾಡಿದ ರಿಯಾನ್ ಪರಾಗ್, ''ಆ ಸಮಯದಲ್ಲಿ ಕೆಕೆಆರ್ ಪರವಾಗಿ ರಿಂಕು ಸಿಂಗ್ ಮತ್ತು ಅನುಕುಲ್ ರಾಯ್ ಅವರಂತಹ ಎಡಗೈ ಬ್ಯಾಟರ್‌ಗಳು ಕ್ರೀಸ್‌ನಲ್ಲಿದ್ದರು. ಎಡಗೈ ಸ್ಪಿನ್ನರ್ ಆದ ಜಡೇಜಾ ಅವರಿಗೆ ಬೌಲಿಂಗ್ ನೀಡಿದರೆ ರನ್ ಬಿಟ್ಟುಕೊಡುವ ಸಾಧ್ಯತೆ ಇತ್ತು ಎಂಬ ಕಾರಣಕ್ಕೆ ನಾನು ಈ ನಿರ್ಧಾರ ತೆಗೆದುಕೊಂಡೆ,'' ಎಂದು ತಮ್ಮ ನಡೆಯನ್ನು ಸಮರ್ಥಿಸಿಕೊಂಡಿದ್ದಾರೆ.

ವಿಶೇಷ ಎಂದರೆ ರವೀಂದ್ರ ಜಡೇಜಾಗೆ ರಿಯಾನ್ ಪರಾಗ್ ಓವರ್ ನೀಡದಿರುವುದು ಇದೇ ಮೊದಲೇನಲ್ಲ. ಏಪ್ರಿಲ್ 13 ರಂದು ನಡೆದ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧದ ಪಂದ್ಯದಲ್ಲೂ ಜಡೇಜಾ ಅವರಿಗೆ ಒಂದೇ ಒಂದು ಓವರ್ ನೀಡಿರಲಿಲ್ಲ.



ಇದೀಗ ಅನುಭವಿ ಆಟಗಾರರನ್ನು ತಂಡದಲ್ಲಿ ಇಟ್ಟುಕೊಂಡು ಅವರನ್ನು ಸರಿಯಾಗಿ ಬಳಸಿ ಕೊಳ್ಳದಿರುವುದು ಚರ್ಚೆಗೀಡಾಗಿದೆ.

**ಅಶ್ವಿನ್ ಅಸಮಾಧಾನ:** ಮಾಜಿ ಕ್ರಿಕೆಟಿಗ ಆರ್. ಅಶ್ವಿನ್ ಸೇರಿದಂತೆ ಹಲವು ವಿಶ್ಲೇಷಕರು ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ''ಪರಿಸ್ಥಿತಿ ಏನೇ ಇರಲಿ, ಜಡೇಜಾರಂತಹ ವಿಶ್ವದರ್ಜೆಯ ಬೌಲರ್‌ನ ಅನುಭವದ ಮೇಲೆ ನಂಬಿಕೆ ಇಡಬೇಕಿತ್ತು. ಕೇವಲ 'ಮ್ಯಾಚ್-ಅಪ್' (ಎಡಗೈ ಬ್ಯಾಟರ್‌ಗೆ ಎಡಗೈ ಬೌಲರ್) ಲೆಕ್ಕಾಚಾರದಿಂದ ಪಂದ್ಯ ಗೆಲ್ಲಲು ಸಾಧ್ಯವಿಲ್ಲ'' ಎಂದು ಅಶ್ವಿನ್ ಅಭಿಪ್ರಾಯಪಟ್ಟಿದ್ದಾರೆ.

ಮೇಲ್ನೋಟಕ್ಕೆ ಯುವ ನಾಯಕ ರಿಯಾನ್ ಪರಾಗ್ ಅವರು ಸಂಪ್ರದಾಯಕ್ಕಿಂತ ಭಿನ್ನವಾಗಿ ಯೋಚಿಸುತ್ತಿರುವುದು ಕಂಡು ಬಂದರೂ, ರವೀಂದ್ರ ಜಡೇಜಾ ಅವರಂತಹ ಆಟಗಾರನನ್ನು ಕಡೆಗಣಿಸುವುದು ತಂಡದ ಫಲಿತಾಂಶದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಎಂಬುದಕ್ಕೆ ಆರ್‌ಆರ್ ತಂಡ ಕೊನೆಯ ಎರಡು ಸೋಲುಗಳೇ ಸಾಕ್ಷಿ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,**
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: **udayavahininews@yahoo.com** , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**